ಸಂಪುಟ: ೦೭/ ಸಂಚಿಕೆ: ೨೧೧/ ರವಿವಾರ ದಿನಾಂಕ : ೧೨-೧೦-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 211/SUNDAY Date : 12-10-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ವಿಜಯಪುರದಲ್ಲಿ ಕಂಪಿಸಿದ ಭೂಮಿ ರಿಕ್ಟರ್ ಮಾಪಕದಲ್ಲಿ 2.6 ತೀವ್ರತೆ ದಾಖಲು

**ವಿಜಯಪುರ:** ಜಿಲ್ಲೆಯ ಎರಡು ತಾಲೂಕುಗಳಲ್ಲಿ ಕಳೆದ ರಾತ್ರಿ ಭೂಮಿ ಕಂಪಿಸಿದ ಅನುಭವ ಆಗಿರುವುದು ವರದಿಯಾಗಿದೆ.

ವಿಜಯಪುರ ತಾಲೂಕು ಹಾಗೂ ತಿಕೋಟಾ ತಾಲೂಕಿನ ವಿವಿಧ ಗ್ರಾಮದಲ್ಲಿ ಭೂಮಿ ಕಂಪಿಸಿದ್ದು, ರಿಕ್ಟರ್ ಮಾಪಕದಲ್ಲಿ 2.6ನಷ್ಟು ತೀವ್ರತೆ ದಾಖಲಾಗಿದೆ ಎಂದು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರದ ಪ್ರಕಟನೆ ತಿಳಿಸಿದೆ.

ಶುಕ್ರವಾರ ರಾತ್ರಿ 10:01ಕ್ಕೆ ವಿಜಯಪು ತಾಲೂಕಿನ ಹೊನ್ನೂಟಗಿ, ಕವಲಗಿ, ಕಗ್ಗೋಡ, ಮಧಬಾವಿ, ದ್ಯಾಬೇರಿ ಭಾಗಗಳು ಸೇರಿದಂತೆ ತಿಕೋಟ ತಾಲೂಕಿನ ಹಲವೆಡೆ ಭೂಮಿ ಕಂಪಿಸಿದೆ. ಭಾರೀ ಸದ್ದಿನೊಂದಿಗೆ ಭೂಮಿ ಕಂಪಿಸಿದ ಅನುಭವ ಆಗಿದ್ದು, ವಿಜಯಪುರ ಗ್ರಾಮೀಣ ಭಾಗದ 12 ಕಿ.ಮೀ. ಸುತ್ತ ಮುತ್ತ ಭೂಕಂಪನದ ಅನುಭವ ಆಗಿದ್ದು, ಜನ ಆತಂಕಕ್ಕೀಡಾಗಿದ್ದಾರೆ.

ಭೂಕಂಪನ ತೀವ್ರತೆ ರಿಕ್ಟರ್ ಮಾಪಕದಲ್ಲಿ 2.8ರಷ್ಟು ದಾಖಲಾಗಿದೆ. ಕಳೆದ ತಿಂಗಳು ಸಿಂದಗಿ ಪಟ್ಟಣದಲ್ಲಿ ಕೂಡ ಸರಣಿ ಭೂಕಂಪನ ಅನುಭವವಾಗಿತ್ತು. ಈಗ ನಗರ ಭಾಗದಲ್ಲಿ ಕಂಪನದ ಅನುಭವ ಆಗಿ ಹೆಚ್ಚಿನ ಆತಂಕ ಮೂಡಿಸಿದೆ.

## ಬಾಲಕಿ ಮೇಲೆ ಬೀದಿ ನಾಯಿ ದಾಳಿ: ಗಾಯ

**ಬೆಳಗಾವಿ:** ಬೆಳಗಾವಿಯಲ್ಲಿ ಬೀದಿನಾಯಿಗಳ ಅಟ್ಟಹಾಸಕ್ಕೆ 2 ವರ್ಷದ ಬಾಲಕಿ ಗಂಭೀರವಾಗಿ ಗಾಯಗೊಂಡಿದ್ದು, ಬಾಲಕಿಯ ಮುಖದ ಮೇಲೆ ತೀವ್ರ ಗಾಯಗಳಾಗಿವೆ. ಬೆಳಗಾವಿಯಲ್ಲಿ ಎರಡು ವರ್ಷದ ಬಾಲಕಿ ಮೇಲೆ ಬೀದಿನಾಯಿಯೊಂದು ದಾಳಿ ಮಾಡಿದ್ದು, ದಾಳಿಯಿಂದಾಗಿ ಬಾಲಕಿಯ ಮುಖಕ್ಕೆ ಗಂಭೀರ ಗಾಯಗಳಾಗಿವೆ.

ಗುರುವಾರ ಬೆಳಗಾವಿಯ ಮಾರುತಿ ನಗರದಲ್ಲಿ ಈ ಘಟನೆ ನಡೆದಿದ್ದು, ಬೀದಿ ನಾಯಿಯೊಂದು ಎರಡು ವರ್ಷದ ಬಾಲಕಿಯ ಮೇಲೆ ದಾಳಿ ಮಾಡಿದ ಪರಿಣಾಮ ಆಕೆಯ ಮುಖಕ್ಕೆ ತೀವ್ರ ಗಾಯಗಳಾಗಿವೆ. ಒಂದು ವರ್ಷ ಹತ್ತು ತಿಂಗಳ ವಯಸ್ಸಿನ ಆರಾಧ್ಯ ಉಮೇಶ್ ಟಾರ್ಗರ್ ಎಂಬ ಬಾಲಕಿ ಮನೆಯ ಹೊರಗೆ ಆಟವಾಡುತ್ತಿದ್ದಾಗ ಬೀದಿ ನಾಯಿಯೊಂದು ಆಕೆಯ ಮೇಲೆ ದಾಳಿ ಮಾಡಿತು. ಈ ವೇಳೆ ಬಾಲಕಿಯ ಹಣೆ, ಕೆನ್ನೆ ಮತ್ತು ತುಟಿಗೆ ಕಚ್ಚಿದ್ದರಿಂದ ಬಾಯಿ ಗಲ್ಲದವರೆಗೆ ಹರಿದು ತೀವ್ರ ರಕ್ತಸ್ರಾವವಾಯಿತು. ಸ್ಥಳೀಯರು ಮತ್ತು ಮಗುವಿನ ತಾಯಿ ಆಕೆಯ ಸಹಾಯಕ್ಕೆ ಧಾವಿಸಿ ನಾಯಿಯನ್ನು ಓಡಿಸುವಲ್ಲಿ ಯಶಸ್ವಿಯಾದರು. ಬಳಿಕ ಮಗು ಆರಾಧ್ಯಳನ್ನು ಬೆಳಗಾವಿ ಜಿಲ್ಲಾ ಆಸ್ಪತ್ರೆಗೆ ಕರೆದೊಯ್ದು ಪ್ರಾಥಮಿಕ ಚಿಕಿತ್ಸೆ ಕೊಡಿಸಲಾಯಿತು. ಬಳಿಕ ಹೆಚ್ಚುವರಿ ಚಿಕಿತ್ಸೆಗಾಗಿ ಮಗುವನ್ನು ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ ಕರೆದೊಯ್ಯುವಂತೆ ಕುಟುಂಬಕ್ಕೆ ವೈದ್ಯರು ಸಲಹೆ ನೀಡಿದರು.


### ವೈದ್ಯರ ವಿರುದ್ಧ ಆಕ್ರೋಶ

ಇನ್ನು ಬೆಳಗಾವಿ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಸೂಪರ್ ಸ್ಪೆಷಾಲಿಟಿ ಸೌಲಭ್ಯವನ್ನು ಇತ್ತೀಚೆಗೆ ಉದ್ಘಾಟಿಸಲಾಗಿತ್ತು. ಆದಾಗ್ಯೂ ಆಸ್ಪತ್ರೆ ಸಿಬ್ಬಂದಿ ತಕ್ಷಣದ ಆರೈಕೆ ನೀಡುವ ಬದಲು, ಆಕೆಯನ್ನು ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ ಕರೆದೊಯ್ಯುವಂತೆ ಕುಟುಂಬಕ್ಕೆ ಸಲಹೆ ನೀಡಿದ್ದಾರೆ ಎಂದು ವರದಿಯಾಗಿದೆ. ಗಾಯಗೊಂಡ ಮಗುವಿಗೆ ಚಿಕಿತ್ಸೆ ನೀಡಲು ಆಸ್ಪತ್ರೆ ನಿರಾಕರಿಸಿದ್ದಕ್ಕೆ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದರು.

### ಸ್ವಚ್ಛತೆ-ಸಂಚಾರ ವ್ಯವಸ್ಥೆಗೆ ಸಿಎಂ ಸಿದ್ದರಾಮಯ್ಯ ಕಟ್ಟಪ್ಪಣೆ

# ಸಮಸ್ತ ಜನರಿಗೆ ಸುಗಮ ಆಡಳಿತ, ಶುದ್ಧ ನೀರು

**ಬೆಂಗಳೂರು:** ಅತಿ ವೇಗವಾಗಿ ಬೆಳೆಯುತ್ತಿರುವ ಬೆಂಗಳೂರು ನಗರದ ಸಮಸ್ತ ಜನರಿಗೆ ಸುಗಮ ಆಡಳಿತ, ಸಮರ್ಪಕ ಅಭಿವೃದ್ಧಿಗಾಗಿ 'ಗ್ರೇಟರ್ ಬೆಂಗಳೂರು ಪ್ರಾಧಿಕಾರ'(ಜಿಬಿಎ) ಅಸ್ತಿತ್ವಕ್ಕೆ ತರಲಾಗಿದೆ. ಅದರಡಿ ಐದು ನಗರ ಪಾಲಿಕೆಗಳನ್ನು ರಚಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.




ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮೊದಲ ಸಭೆಯ ಶುಕ್ರವಾರ ನಡೆಯಿತು. ಸಭೆಯಲ್ಲಿ ಜಿಬಿಎ ರಚನೆ ಹಿಂದಿನ ಉದ್ದೇಶಗಳನ್ನು ಪ್ರಸ್ತಾಪಿಸಿ, ನಗರದ ಸರ್ವತೋಮುಖ ಅಭಿವೃದ್ಧಿಗೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶುದ್ಧ ನೀರಿನ ಪೂರೈಕೆ, ಸ್ವಚ್ಛತೆ, ಸಂಚಾರ ವ್ಯವಸ್ಥೆ ಸೇರಿದಂತೆ ಬೆಂಗಳೂರಿಗರ ಜೀವನಮಟ್ಟ ಸುಧಾರಣೆಗೆ ಕೈಗೊಳ್ಳಬೇಕಿರುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜೊತೆಗೆ ಬೆಂಗಳೂರಿನ ಅಭಿವೃದ್ಧಿ ಒಲ್ಲದವರಿಗೆ ಸಭೆಯನ್ನು ವಿರೋಧಿಸುತ್ತಾರೆ ಎಂದು ಪರೋಕ್ಷವಾಗಿ ಟಾಂಗ್ ಕೊಟ್ಟಿದ್ದಾರೆ.

ಕಸ ವಿಲೇವಾರಿ ಆಗಬೇಕು. ಪಾಲಿಕೆಗಳ ಆದಾಯ ಹೆಚ್ಚಳ ಆಗಬೇಕು. ಟ್ರಾಫಿಕ್ ದಟ್ಟಣೆ ನಿವಾರಣೆ ಆಗಬೇಕು. ನಗರವನ್ನು ಚೊಕ್ಕವಾಗಿಡಬೇಕು. ರಸ್ತೆ, ಚರಂಡಿ, ಪಾದಚಾರಿ ಮಾರ್ಗ, ಉದ್ಯಾನಗಳ ನಿರ್ಮಾಣಕ್ಕೆ ಆದ್ಯತೆ ನೀಡಿ ಮಾದರಿ ಪಾಲಿಕೆಗಳನ್ನಾಗಿ ರೂಪಿಸಬೇಕು ಎನ್ನುವ ಮಹತ್ತರ ಗುರಿ ಮತ್ತು ಉದ್ದೇಶಗಳೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಕಟ್ಟಪ್ಪಣೆ ಮಾಡಿದರು.

ಬೆಂಗಳೂರಿನ ಜನಸಂಖ್ಯೆ 1.40 ಕೋಟಿ ತಲುಪಿದೆ. ಒಂದು ಪಾಲಿಕೆಯಿಂದ ದೊಡ್ಡ ನಗರದ ಸಮರ್ಪಕ ಅಭಿವೃದ್ಧಿ ಬಹಳ ದೊಡ್ಡ ಸವಾಲು. ಈ ಚರ್ಚೆ ಹಲವು ವರ್ಷಗಳಿಂದ ಇದ್ದೇ ಇದೆ. ಒಂದಕ್ಕಿಂತ ಹೆಚ್ಚು ಪಾಲಿಕೆಗಳಿಂದ ಅಭಿವೃದ್ಧಿ ಸಾಧ್ಯ ಎನ್ನುವ ಕಾರಣಕ್ಕೆ, ನಾನು ಮೊದಲ ಬಾರಿ ಮುಖ್ಯಮಂತ್ರಿ ಆಗಿದ್ದಾಗಲೇ ಸಮಿತಿ ರಚಿಸಲಾಗಿತ್ತು. ನಂತರ ಬಂದ ಸರ್ಕಾರಗಳು ಈ ದಿಕ್ಕಿನಲ್ಲಿ ಗಮನಹರಿಸಲೇ ಇಲ್ಲ.

ನಮ್ಮ ಸರ್ಕಾರವೇ ಪುನಃ ಅಧಿಕಾರಕ್ಕೆ ಬಂದ ಬಳಿಕ ಸಮಿತಿಯನ್ನು ಪುನರ್ ರಚಿಸಿ, ಅದು ನೀಡಿದ ವರದಿಯಂತೆ ಮುಖ್ಯಮಂತ್ರಿ ಅಧ್ಯಕ್ಷತೆಯ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಸ್ತಿತ್ವಕ್ಕೆ ಬಂದಿದೆ ಎಂದರು. ನಮ್ಮ ಗುರಿ ಮತ್ತು ಉದ್ದೇಶ ನೆರವೇರಲು ಜಲಮಂಡಳಿ, ಬಿಡಿಎ, ಬೆಸ್ಕಾಂ ಸೇರಿ ಎಲ್ಲಾ ಇಲಾಖೆಗಳು ಜಿಬಿಎ ಜತೆ ಪರಸ್ಪರ ಸಹಕಾರ, ಸಹಯೋಗವನ್ನು ಅತ್ಯಂತ ಕಡ್ಡಾಯವಾಗಿ ಆಚರಣೆಗೆ ತರಬೇಕು ಸೂಚಿಸಿದರು.

ಚರ್ಚೆ–ಸಂವಾದದಿಂದ ಪ್ರಜಾಪ್ರಭುತ್ವ ಗಟ್ಟಿಯಾಗುತ್ತದೆ. ಏನೇ ವಿರೋಧಗಳಿದ್ದರೂ ಸಭೆಗೆ ಹಾಜರಾಗಿ ಚರ್ಚೆ ನಡೆಸಿ ಅಭಿವೃದ್ಧಿಗೆ ಪೂರಕವಾಗಿ ಸಹಕಾರ ನೀಡಬೇಕು. ಅಧಿಕಾರ ವಿಕೇಂದ್ರೀಕರಣವನ್ನು ವಿರೋಧಿಸುವವರು ಮತ್ತು ಬೆಂಗಳೂರಿನ ಅಭಿವೃದ್ಧಿಗೆ ಒಲ್ಲದವರು ಸಭೆಯನ್ನು ವಿರೋಧಿಸುತ್ತಾರೆ ಎಂದು ವಿರೋಧ ಪಕ್ಷಗಳಿಗೆ ಟಾಂಗ್ ನೀಡಿದರು.

ಎಲ್ಲಾ ನಗರಸಭೆ ಆಯುಕ್ತರು ತಮ್ಮ ವ್ಯಾಪ್ತಿಯಲ್ಲಿ ತೆರಿಗೆ ಸಂಗ್ರಹವನ್ನು ಹೆಚ್ಚಿಸಬೇಕು. ಕಸ ವಿಲೇವಾರಿ, ಸ್ವಚ್ಛತೆಗೆ ಆದ್ಯತೆ ನೀಡಬೇಕು. ಫುಟ್‌ಪಾತ್‌ಗಳು ಸಾಧ್ಯವಾದಷ್ಟು ವಿಸ್ತಾರವಾಗಿರುವಂತೆ ನೋಡಿಕೊಳ್ಳಬೇಕು.

ಗುಣಮಟ್ಟದಲ್ಲಿ ಯಾವುದೇ ಕಾರಣಕ್ಕೂ ರಾಜಿಯಾಗದಂತೆ ನೋಡಿಕೊಳ್ಳಬೇಕು. ಅಧಿಕಾರಿಗಳು ಗುತ್ತಿಗೆದಾರರೊಂದಿಗೆ ಶಾಮೀಲಾದರೆ ಗುಣಮಟ್ಟದ ಕಾಮಗಾರಿ ಸಾಧ್ಯವಿಲ್ಲ. ಇದಕ್ಕೆ ಅವಕಾಶ ನೀಡಬಾರದು ಎಂದು ಸೂಚನೆ ನೀಡಿದ್ದೇನೆ ಎಂದರು.

## 2 ಪ್ರಮುಖ ಕೃಷಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಶನಿವಾರದಂದು ರೈತರಿಗಾಗಿ 35,440 ಕೋಟಿ ರೂ.ಗಳ ಒಟ್ಟು ವೆಚ್ಚದೊಂದಿಗೆ ಎರಡು ಪ್ರಮುಖ ಕೃಷಿ ಯೋಜನೆಗಳಿಗೆ ಚಾಲನೆ ನೀಡಿದರು.

ಇದರಲ್ಲಿ ದ್ವಿದಳ ಧಾನ್ಯಗಳಲ್ಲಿ ಸ್ವಾವಲಂಬನೆಗಾಗಿ ಒಂದು ಮಿಷನ್ ಕೂಡ ಸೇರಿದೆ. ದೇಶೀಯ ಮತ್ತು ಜಾಗತಿಕ ಬೇಡಿಕೆಯನ್ನು ಪೂರೈಸಲು ಉತ್ಪಾದನೆಯನ್ನು ಹೆಚ್ಚಿಸುವಂತೆ ಮೋದಿ ರೈತರಿಗೆ ಕರೆ ನೀಡಿದರು. 2047ರ ವೇಳೆಗೆ ಅಭಿವೃದ್ಧಿ ಹೊಂದಿದ ಭಾರತ (ವಿಕಸಿತ್ ಭಾರತ್)ದ ದೃಷ್ಟಿಕೋನವನ್ನು ಸಾಕಾರಗೊಳಿಸುವಲ್ಲಿ ರೈತರು ನಿರ್ಣಾಯಕ ಪಾತ್ರ ವಹಿಸಬೇಕು ಎಂದು ಮೋದಿ ಹೇಳಿದ್ದಾರೆ.

24,000 ಕೋಟಿ ರೂ.ಗಳ ಪ್ರಧಾನ ಮಂತ್ರಿ ಧನ್ ಧಾನ್ಯ ಕೃಷಿ ಯೋಜನೆ ಮತ್ತು ದ್ವಿದಳ ಧಾನ್ಯಗಳಲ್ಲಿ ಆತ್ಮನಿರ್ಭರತೆಗಾಗಿ 11,440 ಕೋಟಿ ರೂ.ಗಳ ಎರಡು ದೊಡ್ಡ ಯೋಜನೆಗಳು ಲಕ್ಷಾಂತರ ರೈತರ ಭವಿಷ್ಯವನ್ನು ಬದಲಾಯಿಸುತ್ತವೆ ಎಂದು ಅವರು ಹೇಳಿದ್ದಾರೆ. ಇದರೊಂದಿಗೆ, ಪ್ರಧಾನ ಮಂತ್ರಿ ಮೋದಿ ಕೃಷಿ, ಪಶುಸಂಗೋಪನೆ, ಮೀನುಗಾರಿಕೆ ಮತ್ತು ಆಹಾರ ಸಂಸ್ಕರಣಾ ಕ್ಷೇತ್ರಗಳಲ್ಲಿ 5,450 ಕೋಟಿ ರೂ.ಗಳಿಗೂ ಹೆಚ್ಚು ಮೌಲ್ಯದ ಯೋಜನೆಗಳನ್ನು ಉದ್ಘಾಟಿಸಿದರು ಮತ್ತು ಸುಮಾರು 815 ಕೋಟಿ ರೂ.ಗಳ ಹೆಚ್ಚುವರಿ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು.



## ಸಂಪುಟ ಪುನರ್ ರಚನೆ ಬಹಿರಂಗ ಹೇಳಿಕೆ ಅನಗತ್ಯ

**ಬೆಂಗಳೂರು:** ಸರಕಾರದಲ್ಲಿ ಅಧಿಕಾರ ಹಂಚಿಕೆ ಹಾಗೂ ಸಂಪುಟ ಪುನರ್ ರಚನೆ ವಿಚಾರಕ್ಕೆ ಸಂಬಂಧಿಸಿದಂತೆ ಯಾವುದೆ ಶಾಸಕರು, ಸಚಿವರು ಬಹಿರಂಗವಾಗಿ ಹೇಳಿಕೆಗಳನ್ನು ನೀಡುವುದು ಅನಗತ್ಯ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಹೇಳಿದರು.

ಶನಿವಾರ ನಗರದಲ್ಲಿರುವ ತಮ್ಮ ಸರಕಾರಿ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಯಕತ್ವ ಬದಲಾವಣೆ ಮಾಡುವುದಿದ್ದರೆ ಅದು ಹೈಕಮಾಂಡ್ ನಿರ್ಧರಿಸುತ್ತದೆ. ಶಾಸಕರು, ಸಚಿವರು ಈ ವಿಚಾರದಲ್ಲಿ ಮಾತನಾಡುವ ಅಗತ್ಯತೆ ಇಲ್ಲ ಎಂದು ಹೇಳಿದರು.

ಸಂಪುಟಕ್ಕೆ ಯಾರನ್ನು ಸೇರಿಸಿಕೊಳ್ಳಬೇಕು, ಯಾರನ್ನು ಕೈ ಬಿಡಬೇಕು ಎಲ್ಲವನ್ನೂ ಹೈಕಮಾಂಡ್ ನಿರ್ಧಾರ ಮಾಡುತ್ತದೆ. ನಮ್ಮ ಸಮಸ್ಯೆಗಳು ಏನೆ ಇದ್ದರೂ ಅದನ್ನು ಹೈಕಮಾಂಡ್ ಗಮನಕ್ಕೆ ತರಬೇಕು. ಮಾಧ್ಯಮಗಳಲ್ಲಿ ಹೇಳಿಕೆಗಳನ್ನು ನೀಡಿ ಗೊಂದಲ ಸೃಷ್ಟಿಸುವುದು ಸರಿಯಲ್ಲ ಎಂದು ಸಂತೋಷ್ ಲಾಡ್ ಸಲಹೆ ನೀಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅ.13ರಂದು ಸಚಿವರಿಗೆ ಔತಣಕೂಟ ಏರ್ಪಡಿಸಿರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಮುಖ್ಯಮಂತ್ರಿ ಪ್ರತಿ ವರ್ಷ ಊಟಕ್ಕೆ ಕರೆಯುತ್ತಾರೆ. ಅದರಲ್ಲಿ ವಿಶೇಷತೆ ಏನು ಇಲ್ಲ ಎಂದು ಅವರು ತಿಳಿಸಿದರು. ನರೇಂದ್ರ ಮೋದಿ ಬಗ್ಗೆ ಮಾತನಾಡಲು ಬಿಜೆಪಿ ನಾಯಕರಿಗಾಗಲಿ, ಮಾಧ್ಯಮದವರಿಗಾಗಲಿ ಧೈರ್ಯ ಇಲ್ಲ. ಒತ್ತಾಯಪೂರ್ವಕವಾಗಿ ಮೋದಿ ಮಾಡುತ್ತಿರುವ ಎಲ್ಲ ಕೆಲಸಗಳನ್ನು ಒಪ್ಪುತ್ತಿದ್ದಾರೆ. ಬಿಹಾರದಲ್ಲಿ ಮಹಿಳೆಯರ ಖಾತೆಗಳಿಗೆ 10 ಸಾವಿರ ರೂ.ಗಳನ್ನು ಹಾಕಿದ್ದಾರೆ. ಅಲ್ಲಿ ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದರೆ, ಯಾಕೆ ಹಣ ಕೊಡುವ ಪರಿಸ್ಥಿತಿ ಬರುತ್ತಿತ್ತು ಎಂದು ಸಂತೋಷ್ ಲಾಡ್ ಪ್ರಶ್ನಿಸಿದರು



### ನಿತಿನ್ ಗಡ್ಕರಿ ಪ್ರಧಾನಿ ಆಗುತ್ತಾರೆ

ಕಾಂಗ್ರೆಸ್ ಪಕ್ಷದಲ್ಲಿ ನವೆಂಬರ್‌ನಲ್ಲಿ ಕ್ರಾಂತಿ ಆಗಿ, ಮುಖ್ಯಮಂತ್ರಿ ಬದಲಾಗುತ್ತಾರೆ ಎಂದು ಬಿಜೆಪಿ ನಾಯಕರು ನೀಡುತ್ತಿರುವ ಹೇಳಿಕೆ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಂತೋಷ್ ಲಾಡ್, ಕ್ರಾಂತಿ ಕಾಂಗ್ರೆಸ್ ಪಕ್ಷದಲ್ಲಿ ಅಲ್ಲ, ಡಿಸೆಂಬರ್‌ನಲ್ಲಿ ಕೇಂದ್ರ ಸರಕಾರದಲ್ಲಿ ಕ್ರಾಂತಿ ಆಗಿ ನಿತಿನ್ ಗಡ್ಕರಿ ಪ್ರಧಾನಿಯಾಗಲಿದ್ದಾರೆ ಎಂದು ಹೇಳಿದರು.

## ಸಂಪುಟ ಸರ್ಜರಿ ಸದ್ಯಕ್ಕೆ ಇಲ್ಲ: ಡಿಕೆಶಿ

**ಬೆಂಗಳೂರು:** ಸದ್ಯಕ್ಕೆ ಸಚಿವ ಸಂಪುಟ ಪುನರ್ ರಚನೆ ಅಥವಾ ಅಧಿಕಾರ ಹಂಚಿಕೆಯ ಬಗ್ಗೆ ಯಾವುದೇ ಚರ್ಚೆಗಳಿಲ್ಲ. ಕೆಲವರಿಗೆ ಹೆಚ್ಚು ಆತುರವಿದೆ. ಅಂಥವರು ಅನಗತ್ಯವಾಗಿ ವದಂತಿಗಳನ್ನು ಹರಡುತ್ತಿದ್ದಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆಕ್ಷೇಪಿಸಿದರು.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗ್ರೇಟರ್ ಬೆಂಗಳೂರು, ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್‌ಗಳ ಚುನಾವಣೆಗಳು ಹತ್ತಿರ ಬರುತ್ತಿವೆ. ಇದರ ಪೂರ್ವ ತಯಾರಿ ಕುರಿತು ಮುಖ್ಯಮಂತ್ರಿಯವರು ಸಚಿವರಿಗೆ ಸೂಚನೆಗಳನ್ನು ನೀಡಲು ಔತಣ ಕೂಟ ಆಯೋಜಿಸಿದ್ದಾರೆ. ಇದರ ಹೊರತಾಗಿ ಬೇರೆ ಏನೂ ಇಲ್ಲ ಎಂದು ಸ್ಪಷ್ಟಪಡಿದಿರು.

ಸದ್ಯಕ್ಕೆ ಸಚಿವ ಸಂಪುಟ ಪುನರ್ ರಚನೆ, ಅಧಿಕಾರ ಹಸ್ತಾಂತರ ಎಂಬ ಸಾಧ್ಯತೆಗಳಿಲ್ಲ.

ಲಾಲ್‌ಬಾಗ್‌ನಲ್ಲಿ ಇಂದು ನಾಗರಿಕರ ಜೊತೆ ಮಾತನಾಡುವಾಗ ಕೆಲವರು, ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗ ಬೇಕೆಂದು ಹೇಳಿದ್ದಾರೆ. ನಾನು ಅದಕ್ಕೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ರಾಜಕೀಯ ಮಾತನಾಡದಂತೆ ಸೂಚನೆ ನೀಡಿದ್ದೇನೆ. ಇಲ್ಲಿ ನಾನು ಜನರ ಜೊತೆ ಮಾತನಾಡುತ್ತಿರುವ ಸಂದರ್ಭದಲ್ಲೇ ನನ್ನ ಹೇಳಿಕೆಯನ್ನು ತಿರುಚಿ ತಪ್ಪಾಗಿ ಪ್ರಸಾರ ಮಾಡಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಿಎಂ ಆಗುವ ಕಾಲ ಹತ್ತಿರ ಬಂದಿದೆ ಎಂದು ನಾನು ಹೇಳಿಲ್ಲ, ಕೆಲವು ಮಾಧ್ಯಮಗಳು ಸುದ್ದಿ ತಿರುಚಿ ವಿವಾದ ಸೃಷ್ಟಿಸುತ್ತಿವೆ. ನಾನು ಸಾರ್ವಜನಿಕರ ಭೇಟಿಗೆ ಬಂದಾಗ ಕೆಲವರು ನೀವು ಮುಖ್ಯಮಂತ್ರಿ ಆಗಬೇಕು, ಆ ಸಮಯ ಹತ್ತಿರ ಬರುತ್ತಿದೆಯೇ ಎಂದು ಕೇಳಿದರು. ಆದರೆ ಸಿಎಂ ಆಗುವ ಕಾಲ ಹತ್ತಿರ ಬರುತ್ತಿದೆ ಎಂದು ನಾನೇ ಹೇಳಿದ್ದೇನೆ ಎಂದು ಕೆಲವು ಮಾಧ್ಯಮಗಳು ತಿರುಚಿ ಪ್ರಸಾರ ಮಾಡುತ್ತಿವೆ. ನೀವು ಹಾಗೆಲ್ಲ ಸುದ್ದಿ ತಿರುಚಿ ತೋರಿಸಬೇಡಿ ಎಂದು ಎಚ್ಚರಿಕೆ ನೀಡಿದರು.

ನಾನು ಸಿಎಂ ಹುದ್ದೆ ಅಲಂಕರಿಸಲು ಆತುರದಲ್ಲಿ ಇಲ್ಲ. ನಾನು ಇಲ್ಲಿಗೆ ಬಂದಿರುವುದು ಸಾರ್ವಜನಿಕರ ಸೇವೆ ಮಾಡಲು. ರಾಜಕಾರಣ ಮಾಡಲು ಅಲ್ಲ. ಜನರ ಸೇವೆ ಮಾಡಲು ಹಗಲು ರಾತ್ರಿ ತಿರುಗುತ್ತಿದ್ದೇನೆ. ನೀವು ಇದೇ ರೀತಿ ಸುದ್ದಿ ತಿರುಚುವುದಾದರೆ, ನಾನು ನಿಮಗೆ ಸಹಕಾರ ನೀಡುವುದಿಲ್ಲ. ಕಾರ್ಯಕ್ರಮಗಳಿಗೆ ಕರೆಯುವುದೂ ಇಲ್ಲ, ಮಾಧ್ಯಮಗೋಷ್ಠಿ ನಡೆಸುವುದೂ ಇಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ನಾನು ಆ ಹೇಳಿಕೆ ಎಲ್ಲಿ ನೀಡಿದ್ದೇನೆ? ಮಾಧ್ಯಮಗಳು ರಾಜಕಾರಣ ಮಾಡುವುದು ಬೇಡ. ನಾನು ಆ ರೀತಿ ಹೇಳಿಲ್ಲ, ಅದರ ಅಗತ್ಯವೂ ನನಗೆ ಇಲ್ಲ. ನನಗೆ ನನ್ನ ಗುರಿ ಗೊತ್ತಿದೆ. ಭಗವಂತ ನನಗೆ ಅವಕಾಶ ಕೊಟ್ಟಿದ್ದಾನೆ, ಮುಖ್ಯಮಂತ್ರಿಯಾಗುವ ಅವಕಾಶ ಯಾವಾಗ ಕೊಡುತ್ತಾನೆ ಎಂಬುದು ಗೊತ್ತಿದೆ. ಇದೇ ರೀತಿ ಮಾಧ್ಯಮಗಳು ತಪ್ಪು ಮಾಹಿತಿ ನೀಡುವುದು ಮುಂದುವರೆಸಿದರೆ, ನನಗೆ ಮಾಧ್ಯಮಗಳನ್ನು ಬಿಟ್ಟು ರಾಜಕಾರಣ ಮಾಡುವುದು ಗೊತ್ತಿದೆ.

ರಾಜ್ಯದ ಜನರ ಸೇವೆ ಹಾಗೂ ಬೆಂಗಳೂರಿನ ನಾಗರಿಕರಿಗೆ ಉತ್ತಮ ಆಡಳಿತ ನೀಡಲು ಶ್ರಮಿಸುತ್ತಿದ್ದೇನೆ. ಆದರೆ ಒಳ್ಳೆಯ ಕೆಲಸ ಬಿಟ್ಟು ವಿವಾದ ಸೃಷ್ಟಿಸಲು ಕೆಲವು ಮಾಧ್ಯಮಗಳು ಪ್ರಯತ್ನಿಸುತ್ತಿವೆ. ಇದೇ ರೀತಿ ನನ್ನ ವಿಚಾರದಲ್ಲಿ ಸುಳ್ಳು ಸುದ್ದಿ ಹಾಕಿ, ದಾರಿ ತಪ್ಪಿಸುವ ಪ್ರಯತ್ನ ಮಾಡಿದರೆ ನಾನು ಮಾನನಷ್ಟ ಮೊಕದ್ದಮೆ ಹಾಕಬೇಕಾಗುತ್ತದೆ ಎಂದು ಸಿಡಿಮಿಡಿ ವ್ಯಕ್ತಪಡಿಸಿದರು.

### ಬೆಂಗಳೂರಿನ ನಾಗರಿಕರಿಂದ ಸಲಹೆ, ಅಹವಾಲು ಸ್ವೀಕರಿಸಿದ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ

# ಜನಸಾಮಾನ್ಯರೊಂದಿಗೆ 'ಬೆಂಗಳೂರು ನಡಿಗೆ'

**ಬೆಂಗಳೂರು:** ಟನಲ್ ರಸ್ತೆ ಯೋಜನೆಯಿಂದ ಲಾಲ್ ಬಾಗ್ ಗೆ ತೊಂದರೆಯಾಗದಂತೆ ನೋಡಿಕೊಳ್ಳಿ, ಓಸಿ ಸಿಸಿ ಸಮಸ್ಯೆ, ಕಸದ ಸಮಸ್ಯೆ ನಿವಾರಿಸಿ ಎಂಬ ಮನವಿಗಳ ಜೊತೆಗೆ, ಜನರಲ್ಲಿ ನಾಗರಿಕ ಪ್ರಜ್ಞೆ ಮೂಡಿಸಿ, ಶಾಲಾ ಮುಂಭಾಗದ ರಸ್ತೆಗಳಲ್ಲಿ ಸಂಚಾರ ದಟ್ಟಣೆ ನಿಯಂತ್ರಣ ವಿಚಾರವಾಗಿ ಬೆಂಗಳೂರಿನ ನಾಗರಿಕರ ಸಲಹೆಗಳನ್ನು ಡಿಸಿಎಂ ಡಿ.ಕೆ. ಶಿವಕುಮಾರ್ ಆಲಿಸಿದರು.

ಬೆಂಗಳೂರಿನ ನಾಗರಿಕರ ಬಳಿಗೆ ಹೋಗಿ, ಅವರ ಅಭಿಪ್ರಾಯ, ಸಲಹೆ, ಅಹವಾಲುಗಳನ್ನು ಸ್ವೀಕರಿಸಲು ಹಮ್ಮಿಕೊಂಡಿರುವ ಬೆಂಗಳೂರು ನಡಿಗೆ ಕಾರ್ಯಕ್ರಮದ ಭಾಗವಾಗಿ ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಡಿ.ಕೆ ಶಿವಕುಮಾರ್ ಶನಿವಾರ ಮುಂಜಾನೆ ಲಾಲ್ ಬಾಗ್ ಉದ್ಯಾನದಲ್ಲಿ ನಡಿಗೆ ಜೊತೆಗೆ ಸಾರ್ವಜನಿಕರೊಂದಿಗೆ ಮಾತುಕತೆ ನಡೆಸಿದರು.

ಡಿಸಿಎಂ ಬಳಿ ತಮ್ಮ ಸಲಹೆಗಳನ್ನು ಮುಕ್ತವಾಗಿ ಹಂಚಿಕೊಂಡ ಸಾರ್ವಜನಿಕರು ಉಪ ಮುಖ್ಯಮಂತ್ರಿಯ ಈ ಹೆಜ್ಜೆಯನ್ನು ಮುಕ್ತಕಂಠದಿಂದ ಸ್ವಾಗತಿಸಿದರು. ಸಾರ್ವಜನಿಕರ ಸಲಹೆ, ಮನವಿ ಹಾಗೂ ಅವರ ಹೆಸರು ಮತ್ತು ಮೊಬೈಲ್ ಸಂಖ್ಯೆಯನ್ನು ಬೆಂಗಳೂರು ಕೇಂದ್ರ ಪಾಲಿಕೆ ಆಯುಕ್ತ ರಾಜೇಂದ್ರ ಚೋಳನ್ ದಾಖಲು ಮಾಡಿಕೊಂಡರು.

ಹಿರಿಯ ನಾಗರಿಕ ಆರ್.ಸಿ ಜಗನ್ನಾಥ್ ಅವರು ಲಾಲ್ ಬಾಗ್ ನಲ್ಲಿ ಯಾವುದೇ ಯೋಜನೆ ಕೈಗೊಳ್ಳಬೇಡಿ ಹಾಗೂ ಇದಕ್ಕೆ ಧಕ್ಕೆಯಾಗದಂತೆ ನೋಡಿಕೊಳ್ಳಿ ಎಂದು ಮನವಿ ಮಾಡಿದರು. ಇದಕ್ಕೆ ಸ್ಪಂದಿಸಿದ ಡಿಸಿಎಂ, "ಯಾವುದೇ ಕಾರಣಕ್ಕೂ ಲಾಲ್ ಬಾಗ್ ಗೆ ಧಕ್ಕೆ ಆಗುವುದಿಲ್ಲ. ಟನಲ್ ರಸ್ತೆ ಭೂಮಿಯ ಒಳಗೆ ಹಾದು ಹೋಗಲಿದೆ. ಲಾಲ್ ಬಾಗ್ ಬಂಡೆಯ ಪಕ್ಕದಲ್ಲಿ ಟನಲ್ ಗೆ ಪ್ರವೇಶ ನೀಡಲು ಅಧಿಕಾರಿಗಳು ಯೋಜನೆ ರೂಪಿಸಿದ್ದಾರೆ. ಆ ಜಾಗವನ್ನು ಪರಿಶೀಲಿಸುತ್ತೇನೆ. ಅಗತ್ಯವಿದ್ದರೆ ಈ ಯೋಜನೆಯಲ್ಲಿ ಮಾರ್ಪಾಡು ಮಾಡುತ್ತೇವೆ" ಎಂದು ಭರವಸೆ ನೀಡಿದರು.




ಕಾರ್ತಿಕ್ ಕುಮಾರ್ ಎಂಬವರು ಸರಕಾರ ಏನೇ ಕೆಲಸ ಮಾಡಿದರೂ ಜನರಲ್ಲಿ ನಾಗರಿಕ ಪ್ರಜ್ಞೆ ಮೂಡದಿದ್ದರೆ ಯಶಸ್ವಿಯಾಗುವುದಿಲ್ಲ. ಹೀಗಾಗಿ ಇದಕ್ಕೆ ಅಗತ್ಯ ಜಾಗೃತಿ ಮೂಡಿಸುವ ಕ್ರಮ ಕೈಗೊಳ್ಳಿ ಎಂದು ಸಲಹೆ ನೀಡಿದರು.

ಇನ್ನು ಸಿಬಿಡಿ ಶಾಲೆಗಳ ಆವರಣದಲ್ಲಿ ಜಾಗ ಇದ್ದರು, ರಸ್ತೆಯಲ್ಲಿ ವಾಹನ ನಿಲ್ಲಿಸುತ್ತಾರೆ. ಇದರಿಂದ ಸಂಚಾರ ದಟ್ಟಣೆ ಹೆಚ್ಚುತ್ತದೆ, ಈ ಶಾಲೆಗಳು ತಮ್ಮ ಆವರಣದಲ್ಲಿ ವಾಹನ ಇಟ್ಟುಕೊಳ್ಳುವಂತೆ ಮಾಡಿ ಎಂದು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಡಿಸಿಎಂ, "ಈ ವಿಚಾರವಾಗಿ ಖಂಡಿತ ಆಲೋಚನೆ ಮಾಡಿ, ಅಗತ್ಯ ಕ್ರಮ ಕೈಗೊಳ್ಳುತ್ತೇವೆ" ಎಂದು ಭರವಸೆ ನೀಡಿದರು.

ರಾಜಾರಾಂ ಎಂಬುವವರು ಬೆಂಗಳೂರಿನ ರಸ್ತೆಯಲ್ಲಿ ಮೆಟ್ರೋ ಅಥವಾ ಯಾವುದೇ ಕಾಮಗಾರಿ ನಡೆದರೂ ಆ ಭಾಗದ ರಸ್ತೆಯನ್ನು ಯೋಜನೆ ಆರಂಭದಿಂದ ಅಂತ್ಯದವರೆಗೆ ಅವರೇ ನಿರ್ವಹಣೆ ಮಾಡುವಂತೆ ನೋಡಿಕೊಳ್ಳಬೇಕು. ಆಗ ರಸ್ತೆ ಗುಂಡಿ ಬಿದ್ದರೂ ಅವರೇ ಅದನ್ನು ಮುಚ್ಚಿ ನಿರ್ವಹಣೆ ಮಾಡಿದಂತಾಗುತ್ತದೆ. ಆಗ ಅರ್ಧದಷ್ಟು ಸಮಸ್ಯೆ ನಿವಾರಣೆ ಆಗಲಿದೆ ಎಂದರು.

ಜಯನಗರ 4ನೇ ಬ್ಲಾಕ್ ನಿವಾಸಿಯೊಬ್ಬರು 7ಬಿ ಮುಖ್ಯರಸ್ತೆಯಲ್ಲಿ ಬೀದಿದೀಪ ಇಲ್ಲ. ಈ ಬಗ್ಗೆ ದೂರು ನೀಡಿದರೂ ಸರಿಯಾಗಿ ಸ್ಪಂದಿಸುತ್ತಿಲ್ಲ ಎಂದು ಅಹವಾಲು ಹೇಳಿಕೊಂಡರು. "ಈ ಸಮಸ್ಯೆಯನ್ನು ಕೂಡಲೇ ಬಗೆಹರಿಸುತ್ತೇವೆ. ಇದರ ಜೊತೆಗೆ ಬೆಂಗಳೂರಿನ ಎಲ್ಲಾ ಬೀದಿ ದೀಪಗಳನ್ನು ಬದಲಿಸಿ ಎಲ್ ಇಡಿ ದೀಪ ಅಳವಡಿಸಲಾಗುತ್ತದೆ. ಮುಂದಿನ ಆರು ತಿಂಗಳಲ್ಲಿ ಈ ಕೆಲಸ ನಡೆಯಲಿದೆ" ಎಂದು ಭರವಸೆ ನೀಡಿದರು.

ಸೆಂಟ್ ಫ್ರಾನ್ಸಿಸ್ ಶಾಲೆ ಶಿಕ್ಷಕಿ ತಮ್ಮ ಶಾಲೆ ಬಳಿಯ ರಸ್ತೆಯಲ್ಲಿ ಕಸ ಸುರಿಯುತ್ತಾರೆ, ರಸ್ತೆ ಹದಗೆಟ್ಟಿದೆ ಎಂದು ತಮ್ಮ ಅಹವಾಲು ಹೇಳಿಕೊಂಡರು. "ನಿಮ್ಮ ಶಾಲೆ ಬಳಿಗೆ ಅಧಿಕಾರಿಗಳ ತಂಡವನ್ನು ಕಳುಹಿಸಿ ಸಮಸ್ಯೆ ಬಗೆಹರಿಸಲು ಸೂಚಿಸುತ್ತೇನೆ. ನಿಮ್ಮನ್ನು ಸಂಪರ್ಕ ಮಾಡಲು ತಿಳಿಸುತ್ತೇನೆ" ಎಂದು ಭರವಸೆ ನೀಡಿದರು.

## ಅಧಿಕಾರ ಹಂಚಿಕೆಯ ಗೊಂದಲದಿಂದ ಆಡಳಿತ ಕುಂಠಿತ: ಸಂಸದ ಬೊಮ್ಮಾಯಿ

**ಹಾವೇರಿ:** ರಾಜ್ಯ ಕಾಂಗ್ರೆಸ್‌ನಲ್ಲಿನ ಅಧಿಕಾರ ಹಂಚಿಕೆಯ ಆಂತರಿಕ ಗೊಂದಲದಿಂದ ಆಡಳಿತ ಕುಂಠಿತವಾಗಿದ್ದು ಹೈಕಮಾಂಡ್‌ಗೆ ಸ್ಪಷ್ಟತೆ ಇಲ್ಲದಿರುವುದರಿಂದ ಜನರು ಸಂಕಷ್ಟ ಅನುಭವಿಸುವಂತಾಗಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ.



ಶನಿವಾರ ನಗರದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದ ದಿನದಿಂದ ಅಧಿಕಾರ ಹಸ್ತಾಂತರ, ಸಚಿವ ಸ್ಥಾನಗಳ ಹಂಚಿಕೆ ಗೊಂದಲ ನಿಂತಿಲ್ಲ. ಸಿ.ಎಂ ಕಡೆಯವರು ಅವರೇ 5ವರ್ಷ ಮುಂದುವರೆಯುತ್ತಾರೆ ಎಂದರೆ, ಶಿವಕುಮಾರ್ ಕಡೆಯವರು ಶಿವಕುಮಾರ್ ಸಿ.ಎಂ ಆಗುತ್ತಾರೆ ಎನ್ನುತ್ತಿದ್ದಾರೆ ಎಂದು ದೂರಿದರು. ಕಾಂಗ್ರೆಸ್ ವರಿಷ್ಠರಿಗೆ ಈ ವಿಚಾರದಲ್ಲಿ ಸ್ಪಷ್ಟ ನಿರ್ಧಾರ ತೆಗೆದುಕೊಳ್ಳಲು ಆಗುತ್ತಿಲ್ಲ. ಅಲ್ಲಿಯೂ ಎರಡು ಗುಂಪು ಆಗಿವೆ. ಹೀಗಾಗಿ ಹೈಕಮಾಂಡ್ ಫುಲ್ ಸ್ಟಾಪ್ ಇಡಲು ಆಗುತ್ತಿಲ್ಲ. ಒಂದು ಗುಂಪು ಸಿಎಂಗೆ ಬೆಂಬಲ ಮಾಡುತ್ತದೆ. ಇನ್ನೊಂದು ಗುಂಪು ಡಿ.ಕೆ.ಶಿವಕುಮಾರಗೆ ಸಪೋರ್ಟ್ ಮಾಡುತ್ತಿದೆ ಎಂದು ಅವರು ಟೀಕಿಸಿದರು. ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ ಬಿಹಾರ ಚುನಾವಣೆಗೆ ಹಣ ವರ್ಗಾವಣೆ ಆರೋಪದ ಹಿನ್ನೆಲೆಯಲ್ಲಿ ಈಡಿ ತನಿಖೆ ನಡೆಸುತ್ತಿದೆ. ವೀರೇಂದ್ರಗೆ ಪಪ್ಪಿಗೆ ಈ ಹಣ ಎಲ್ಲಿಂದ ಬಂತು. ಇನ್ನು ಎಷ್ಟು ಇದೆ ಎಂಬುದು ತನಿಖೆ ನಂತರ ಸತ್ಯಾಸತ್ಯತೆ ಹೊರಬರಲಿದೆ ಎಂದ ಅವರು, ಸಿದ್ದರಾಮಯ್ಯ ಸರಕಾರದ ಬಳಿ ಹಣವಿಲ್ಲದ ಕಾರಣಕ್ಕೆ ಇಂದಿರಾ ಕಿಟ್ ನೀಡಲು ಮುಂದಾಗಿದ್ದಾರೆ ಎಂದು ಟೀಕಿಸಿದರು.

## ಬಸ್ ಹರಿದು 10 ವರ್ಷದ ಬಾಲಕಿ ಸಾವು

**ಬೆಂಗಳೂರು:** ನಗರದಲ್ಲಿ ಬಿಎಂಟಿಸಿ ಬಸ್ ಮತ್ತೊಂದು ಜೀವ ಬಲಿ ಪಡೆದುಕೊಂಡಿದೆ. 10 ವರ್ಷದ ಬಾಲಕಿಯ ತಲೆ ಮೇಲೆ ಬಸ್ ಚಕ್ರ ಹರಿದು ಸಾವನ್ನಪ್ಪಿರುವ ಘಟನೆ ಯಲಹಂಕ ಕೋಗಿಲು ಕ್ರಾಸ್ ಬಳಿ ಗುರುವಾರ ನಡೆದಿದೆ. ಮೃತ ಬಾಲಕಿಯನ್ನು ತನ್ವಿ (10) ಎಂದು ಗುರುತಿಸಲಾಗಿದೆ. ಮೃತ ಬಾಲಕಿ ಮಿಲೆನಿಯಂ ಸ್ಕೂಲ್‌ನಲ್ಲಿ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದಳು. ತಾಯಿ ಹರ್ಷಿತಾ ಅವರು ಮಗಳನ್ನು ಸ್ಕೂಲ್‌ಗೆ ಬಿಡಲು ಹೋದಾಗ ದುರ್ಘಟನೆ ಸಂಭವಿಸಿದೆ ಎಂದು ತಿಳಿದುಬಂದಿದೆ.

## ಬೆಳಗಾವಿ-ಮೀರಜ್ ಪ್ಯಾಸೆಂಜರ್ ರೈಲು ಖಾಯಂಗೆ ರೈಲ್ವೆ ಮಂಡಳಿ ಅನುಮೋದನೆ

**ಹುಬ್ಬಳ್ಳಿ:** ದೈನಂದಿನ ವಿಶೇಷ ಪ್ಯಾಸೆಂಜರ್ ರೈಲುಗಳನ್ನು ಖಾಯಂಗೊಳಿಸಲು ರೈಲ್ವೆ ಮಂಡಳಿ ಅನುಮೋದನೆ ನೀಡಿದೆ. ರೈಲ್ವೆ ಮಂಡಳಿಯು ರೈಲು ಸಂಖ್ಯೆ 07301/07302 ಬೆಳಗಾವಿ–ಮೀರಜ್–ಬೆಳಗಾವಿ ಮತ್ತು 07303/07304 ಬೆಳಗಾವಿ–ಮೀರಜ್–ಬೆಳಗಾವಿ ಕಾಯ್ದಿರಿಸದ ದೈನಂದಿನ ವಿಶೇಷ ಪ್ಯಾಸೆಂಜರ್ ರೈಲುಗಳನ್ನು ಖಾಯಂಗೊಳಿಸಲು ಅನುಮೋದನೆ ನೀಡಿದೆ.




ಅದರಂತೆ ಈ ರೈಲುಗಳು 51461/51462 ಬೆಳಗಾವಿ–ಮೀರಜ್–ಬೆಳಗಾವಿ ಮತ್ತು 51463/51464 ಬೆಳಗಾವಿ–ಮೀರಜ್–ಬೆಳಗಾವಿ ಎಂದು ಮರು–ಸಂಖ್ಯೆ ಪಡೆಯಲಿವೆ. ರೈಲು ಸಂಖ್ಯೆ 51461 ಬೆಳಗಾವಿ–ಮೀರಜ್ ಡೈಲಿ ಪ್ಯಾಸೆಂಜರ್ ಬೆಳಗಾವಿಯಿಂದ ಬೆಳಗ್ಗೆ 05:45ಕ್ಕೆ ಹೊರಟು, ಅದೇ ದಿನ ಬೆಳಗ್ಗೆ 09:00ಕ್ಕೆ ಮೀರಜ್ ತಲುಪಲಿದೆ. ವಾಪಸ್, ರೈಲು ಸಂಖ್ಯೆ 51462 ಮೀರಜ್–ಬೆಳಗಾವಿ ಡೈಲಿ ಪ್ಯಾಸೆಂಜರ್ ಮೀರಜ್‌ನಿಂದ ಬೆಳಗ್ಗೆ 09:55ಕ್ಕೆ ಹೊರಟು, ಅದೇ ದಿನ ಮಧ್ಯಾಹ್ನ 01:00ಕ್ಕೆ ಬೆಳಗಾವಿ ತಲುಪಲಿದೆ. ರೈಲು ಸಂಖ್ಯೆ 51463 ಬೆಳಗಾವಿ–ಮೀರಜ್ ಡೈಲಿ ಪ್ಯಾಸೆಂಜರ್ ಬೆಳಗಾವಿಯಿಂದ ಮಧ್ಯಾಹ್ನ 01:30ಕ್ಕೆ ಹೊರಟು, ಅದೇ ದಿನ ಸಂಜೆ 04:30ಕ್ಕೆ ಮೀರಜ್ ತಲುಪಲಿದೆ. ವಾಪಸ್, ರೈಲು ಸಂಖ್ಯೆ 51464 ಮೀರಜ್–ಬೆಳಗಾವಿ ಡೈಲಿ ಪ್ಯಾಸೆಂಜರ್ ಮೀರಜ್‌ನಿಂದ ಸಂಜೆ 07:10ಕ್ಕೆ ಹೊರಟು ಅದೇ ದಿನ ರಾತ್ರಿ 10:25ಕ್ಕೆ ಬೆಳಗಾವಿ ತಲುಪಲಿದೆ. ಈ ಖಾಯಂ ಸೇವೆಗಳು ಅಕ್ಟೋಬರ್ 15, 2025 ರಿಂದ ಜಾರಿಗೆ ಬರಲಿವೆ. ಈ ಮೂಲಕ ಸ್ಥಳೀಯ ಪ್ರಯಾಣಿಕರ ಅನುಕೂಲಕ್ಕಾಗಿ ಬೆಳಗಾವಿ ಮತ್ತು ಮೀರಜ್ ನಡುವೆ ದೈನಂದಿನ ಕಾಯ್ದಿರಿಸದ ಪ್ರಯಾಣ ಸೌಲಭ್ಯವನ್ನೇ ಮುಂದುವರಿಸಲಿವೆ ಎಂದು ನೈರುತ್ಯ ರೈಲ್ವೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹುಬ್ಬಳ್ಳಿ ರೈಲು ನಿಲ್ದಾಣ ಮೇಲ್ದರ್ಜೆಗೇರಿಸುವ ಭರವಸೆ ನೀಡಿದ ಕೇಂದ್ರ ಸಚಿವ: ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು ಈ ತಿಂಗಳ ಆರಂಭದಲ್ಲಿ ಹುಬ್ಬಳ್ಳಿ ರೈಲು ನಿಲ್ದಾಣವನ್ನು ಮೇಲ್ದರ್ಜೆಗೇರಿಸಲಾಗುವುದು ಎಂದು ಹೇಳಿದ್ದರು. ಜತೆಗೆ ಉತ್ತರ ಕರ್ನಾಟಕ ಭಾಗದ ಪ್ರಮುಖ ರೈಲು ಯೋಜನೆಗಳಾದ ಹುಬ್ಬಳ್ಳಿ–ಅಂಕೋಲಾ, ಧಾರವಾಡ–ಬೆಳಗಾವಿ, ಗದಗ–ಯಲವಿಗಿ ಸೇರಿದಂತೆ ಎಲ್ಲ ಯೋಜನೆಗಳನ್ನು ಆದಷ್ಟು ಬೇಗ ಕಾರ್ಯರೂಪಕ್ಕೆ ತರಲಾಗುವುದು ಎಂಬ ಭರವಸೆ ನೀಡಿದ್ದರು. ಹುಬ್ಬಳ್ಳಿ – ಅಂಕೋಲಾ ರೈಲ್ವೆ ಯೋಜನೆಗೆ ಅರಣ್ಯ ಇಲಾಖೆ, ವನ್ಯಜೀವಿ ಮಂಡಳಿ ಸಲಹೆ ಪಡೆಯಲಾಗಿದೆ. ಎಲ್ಲ ಸಲಹೆ ಪಡೆದು ಡಿಪಿಆರ್ ಸಿದ್ಧ ಮಾಡಲಾಗಿದೆ. ರೂ17,000 ಕೋಟಿ ವೆಚ್ಚದಲ್ಲಿ ಜಾರಿಗೊಳಿಸಲಾಗುತ್ತದೆ. ಕ್ಯಾಬಿನೆಟ್ ಅಪ್ರೂವ್ ಆದ ನಂತರ ಜಾರಿಗೆ ಬರೋ ವಿಶ್ವಾಸವಿದೆ ಎಂದಿದ್ದರು.

### ಶಿರಗುಪ್ಪಿಯಲ್ಲಿ ನಡೆದ ರೈತರ ಸಭೆಯಲ್ಲಿ ರಾಜು ಶೆಟ್ಟಿ ಕರೆ

# ವೈಯಕ್ತಿಕ ಹಿತಾಸಕ್ತಿಗಳನ್ನು ಬದಿಗಿಟ್ಟು ಒಗ್ಗಟ್ಟಾಗಿ



**ಅಥಣಿ:** ಕಾರ್ಖಾನೆ ಮಾಲೀಕರು, ತಮ್ಮ ಲಾಭಕ್ಕಾಗಿ ವೈಯಕ್ತಿಕ ಹಿತಾಸಕ್ತಿಗಳನ್ನು ತೊರೆದು, ಪಕ್ಷಾತೀತವಾಗಿ ಒಂದಾಗುವುದಾದರೇ ಕಬ್ಬು ಬೆಳೆಗಾರ ರೈತರು ಯಾಕೆ ತಮ್ಮ ವೈಯಕ್ತಿಯ ಹಿತಾಸಕ್ತಿಗಳನ್ನು ಬದಿಗಿಟ್ಟು, ಜ್ಯಾತ್ಯಾತೀತವಾಗಿ ಪಕ್ಷಾತೀತವಾಗಿ ಒಕ್ಕಟ್ಟಾಗಬಾರದು ಎಂದು ಸ್ವಾಭಿಮಾನಿ ಶೇತಕರಿ ಸಂಘಟನೆ ಸಂಸ್ಥಾಪಕ ಮತ್ತು ಮಾಜಿ ಸಂಸದ ರಾಜು ಶೆಟ್ಟಿ ರೈತರನ್ನು ಪ್ರಶ್ನಿಸಿದ್ದಾರೆ.

ಅವರು, ಶುಕ್ರವಾರ ದಿ. 19 ರಂದು ಸಂಜೆ ಕಾಗವಾಡ ತಾಲೂಕಿನ ಶಿರಗುಪ್ಪಿ ಗ್ರಾಮದ ಮಲ್ಲಿಕಾರ್ಜುನ ದೇವಸ್ಥಾನದ ಸಭಾಭವನದಲ್ಲಿ ನಡೆದ ಕಬ್ಬು ಬೆಳೆಗಾರ ರೈತರ ಸಭೆಯಲ್ಲಿ ಮಾತನಾಡುತ್ತಿದ್ದರು. ಕಾರ್ಖಾನೆ ಮಾಲೀಕರು ರೈತರನ್ನು ಲೂಟಿ ಮಾಡುತ್ತಿದ್ದಾರೆ. ರೈತರು ತಾವು ಬೆಳೆದ ಕಬ್ಬಿಗೆ ಯೋಗ್ಯ ಬೆಲೆ ಮತ್ತು ಕಬ್ಬಿನ ತೂಕದಲ್ಲಾಗುವ ಮೋಸವನ್ನು ತಪ್ಪಿಸಲು ರೈತರು ಒಕ್ಕಟ್ಟಿನಿಂದ ಹೋರಾಟ ಮಾಡಬೇಕೆಂದು ರೈತರಿಗೆ ಕರೆ ನೀಡಿದರು.

ಕಳೆದ 24 ವರ್ಷಗಳಿಂದ ರೈತರು ಬೆಳೆದ ಕಬ್ಬಿಗೆ ಯೋಗ್ಯ ಬೆಲೆ ದೊರಕಿಸಿಕೊಡಲು ಪ್ರತಿ ವರ್ಷ ಸಕ್ಕರೆ ಪರಿಷತ್ ಆಯೋಜಿಸಿ, ಯಾವುದೇ ರಾಜಕೀಯ ಹಿತಾಸಕ್ತಿ, ಸ್ಥಾನಮಾನಕ್ಕೆ ಆಸೆ ಪಡೆದೇ ಹೋರಾಟ ಮಾಡುತ್ತಿದ್ದೇನೆ. ಮೊದಲಿನ 10-12 ವರ್ಷ ಹಿಂದೆ ರೈತರಲ್ಲಿದ್ದ ಉತ್ಸಾಹ ಕ್ರಮೇಣ ಕಳೆದ 4-5 ವರ್ಷಗಳಿಂದ ಕಡಿಮೆಯಾಗಿದೆ. ಇದರಿಂದ ಕಾರ್ಖಾನೆ ಮಾಲೀಕರು ದರ್ಪ ತೋರುತ್ತಿದ್ದು, ಕಬ್ಬಿಗೆ ಯೋಗ್ಯ ಬೆಲೆ ನೀಡದೇ ರೈತರನ್ನು ವಂಚಿಸುತ್ತಿದ್ದಾರೆ.

ಯಾವುದೇ ಸರ್ಕಾರವಿದ್ದರೂ ಸಕ್ಕರೆ ಲಾಭಿಗೆ ಒಳಗಾಗದೇ ಇರುವುದಿಲ್ಲ. ಎಲ್ಲ ಪಕ್ಷದ ನಾಯಕರೂ ಸಕ್ಕರೆ ಕಾರ್ಖಾನೆಗಳ ಮಾಲೀಕರಾಗಿದ್ದಾರೆ. ರೈತರು ಇದನ್ನು ಅರ್ಥ ಮಾಡಿಕೊಳ್ಳಬೇಕು ಎಂದರು.

ರೈತ ಮುಖಂಡ ಸುರೇಶ ಚೌಗುಲೆ ಮಾತನಾಡಿ, ಈ ವರ್ಷ ಕಬ್ಬು ಬೆಳೆ ಕಡಿಮೆ ಇದ್ದು, ಕಾರ್ಖಾನೆಗಳು ಮೂರೇ ತಿಂಗಳಲ್ಲಿ ಕಬ್ಬಿಲ್ಲದೇ ಹಂಗಾಮು ಬಂದು ಮಾಡಲಿವೆ. ಆದ್ದರಿಂದ ರೈತರು ಕಾರ್ಖಾನೆಗೆ ಕಬ್ಬು ಪೂರೈಕೆ ಮಾಡಲು ಪೈಪೋಟಿ ಮಾಡದೇ ಕಾರ್ಖಾನೆಗಳ ದರ ಘೋಷಣೆಯಾಗುವ ವರಗೆ ತಾಳ್ಮೆ ತೋರಬೇಕೆಂದು ಮನವಿ ಮಾಡಿಕೊಂಡರು.

ರೈತರಾದ ಅಜೀತ ಕರವ ತಮ್ಮ ಅನಿಸಿಕೆ ಹಂಚಿಕೊಂಡರು. ಈ ವೇಳೆ ರೈತರಾದ ದಾದಾ ಪಾಟೀಲ, ತಮ್ಮಾ ತಮದಡ್ಡಿ, ಅಣ್ಣಾಸಾಬ ಕಾತ್ರಾಳೆ ಸೇರಿದಂತೆ ಕಾಗವಾಡ, ಶಿರಗುಪ್ಪಿ ಜುಗೂಳ, ಉಗಾರ ಮತ್ತು ಇಂಗಳಿ ಗ್ರಾಮಗಳ ರೈತರು ಉಪಸ್ಥಿತರಿದ್ದರು.

### ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ನಡೆದ ಮಹಿಳಾ ವಿಚಾರ ಗೋಷ್ಠಿ ಉದ್ಘಾಟಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್

# ಮಹಿಳೆಯರು ಅಭಿವೃದ್ಧಿಯಾದರೆ ಮನೆ, ದೇಶ ಅಭಿವೃದ್ಧಿ



**ಬೆಳಗಾವಿ:** ಮಹಿಳೆಯರ ಸ್ವಾಭಿಮಾನ ಎತ್ತಿಹಿಡಿದು, ಆರ್ಥಿಕ ಸ್ವಾವಲಂಬನೆ ಮಾಡಲು ನನಗೆ ಅವಕಾಶ ಸಿಕ್ಕಿದೆ. ಮಹಿಳೆ ಅಭಿವೃದ್ಧಿಯಾದರೆ ಮನೆ, ಗ್ರಾಮ, ರಾಜ್ಯ, ದೇಶ ಅಭಿವೃದ್ಧಿಯಾದಂತೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಕಂಗ್ರಾಳಿ ಕೆ.ಎಚ್ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್ ವತಿಯಿಂದ ನಡೆದ ಮಹಿಳಾ ಸಾಧನಾ ಸಮಾವೇಶ ಹಾಗೂ ಮಹಿಳಾ ವಿಚಾರ ಗೋಷ್ಠಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಸಚಿವರು, ಮಹಿಳೆಯರನ್ನು ಸ್ವಾವಲಂಬಿಯಾಗಿಸಲು ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಅವರು ಮಾದರಿ ಕೆಲಸ ಮಾಡುತ್ತಿದ್ದಾರೆ ಎಂದರು.

ಮಹಿಳೆಯರು ಅಭಿವೃದ್ಧಿಯಾಗಬೇಕು ಎಂಬುದೇ ವೀರೇಂದ್ರ ಹೆಗ್ಗಡೆ ಅವರ ಕನಸಾಗಿದೆ, ಇದು ನನ್ನ ಕನಸೂ ಕೂಡ ಆಗಿದೆ. ಹಳ್ಳಿಯಿಂದ ಬಂದು, ಸರ್ಕಾರಿ ಶಾಲೆಯಲ್ಲಿ ಕಲಿತು, ಕಷ್ಟಪಟ್ಟು ಈ ಹಂತಕ್ಕೆ ಬಂದಿದ್ದೇನೆ. ನಿಮ್ಮ ಕಷ್ಟ ಸುಖದಲ್ಲಿ ಜೊತೆಗೆ ನಿಲ್ಲುತ್ತೇನೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು. ಒಳ್ಳೆಯ ಉದ್ದೇಶದಿಂದ ಗೃಹಲಕ್ಷ್ಮೀ ಗ್ಯಾರಂಟಿ ಬ್ಯಾಂಕ್ ಆರಂಭಿಸಲಾಗುತ್ತಿದೆ. ಪ್ರತಿಯೊಬ್ಬರೂ ಶೇರ್ ಪಡೆಯಬೇಕು, ಅದರಿಂದ ಸಾಲ ನೀಡಲಾಗುವುದು. ಇದಕ್ಕೆ ಧರ್ಮಸ್ಥಳ ಸಂಘವೇ ಆದರ್ಶ, ಕಡಿಮೆ ಬಡ್ಡಿ ದರದಲ್ಲಿ ಸಾಲ ನೀಡಲಾಗುವುದು. ಜೊತೆಗೆ ಶಿಕ್ಷಣ, ಉದ್ಯೋಗಕ್ಕಾಗಿ ಸಾಲ ನೀಡುವ ವ್ಯವಸ್ಥೆ ಇರಲಿದೆ ಎಂದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದ ವರು ಮಹಿಳೆಯರಿಗೆ ಜ್ಞಾನ ನೀಡುವ ಮೂಲಕ ಅದನ್ನು ಇಡೀ ಸಮಾಜಕ್ಕೆ ವಿಸ್ತರಿಸುವ ಕಾರ್ಯವನ್ನು ಮಾಡುತ್ತಿದ್ದಾರೆ. ಮಹಿಳೆಯರು ಜ್ಞಾನವನ್ನು ಪಡೆದು ತಮ್ಮ ಮಕ್ಕಳಿಗೆ ಅದನ್ನು ನೀಡುವ ಮೂಲಕ ಇಡೀ ಸಮಾಜಕ್ಕೆ ಜ್ಞಾನವನ್ನು ವಿಸ್ತಾರ ಮಾಡುವಂತಹ ಕೆಲಸವನ್ನು ಮಾಡುತ್ತಾರೆ ಎಂದು ಹೇಳಿದರು. ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಜ್ಞಾನ ವಿಕಾಸಕಾರ್ಯಕ್ರಮ ಒಂದು ಆದರ್ಶವಾದ ಕಾರ್ಯಕ್ರಮವಾಗಿದೆ.

ಮಹಿಳೆಯರನ್ನ ಆರ್ಥಿಕ ಸ್ವಾವಲಂಬನೆ ಮಾಡುವುದರ ಜೊತೆಗೆ ಈ ರೀತಿಯ ಜ್ಞಾನವಿಕಾಸವನ್ನು ಮಾಡುವಂತಹ ಕೆಲಸವನ್ನು ಮಾಡುತ್ತಿರುವುದು ಬಹಳ ಸಂತೋಷದ ವಿಚಾರ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಸಂಸ್ಥೆಯ ಕಾರ್ಯವನ್ನು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಕಲ್ಲಪ್ಪ ಪಾಟೀಲ್, ಜಿ.ಆರ್.ಸೊನೇರ್, ಸತೀಶ್ ನಾಯ್ಕ್, ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದ ಪದಾಧಿಕಾರಿಗಳು, ನೂರಾರು ಮಹಿಳೆಯರು ಉಪಸ್ಥಿತರಿದ್ದರು.

# ರಸ್ತೆ ಡಾಂಬರೀಕರಣ ಕಾಮಗಾರಿಗೆ ಚಾಲನೆ



**ತಾಲೂಕಿನ ಕಂಕಣವಾಡಿ-ಕೊಡ್ಡಿನ ತೋಟದ ರಸ್ತೆ ಡಾಂಬರೀಕರಣ ಕಾಮಗಾರಿಗೆ ಶಾಸಕ ಡಿ.ಎಮ್.ಐಹೊಳೆಯವರು ಚಾಲನೆ ನೀಡಿದರು.**

**ರಾಯಬಾಗ:** ಗ್ರಾಮೀಣ ಭಾಗದ ಜನರಿಗೆ ಅನುಕೂಲವಾಗುವ ರಸ್ತೆಗಳ ಅಭಿವೃದ್ಧಿಗಾಗಿ ಹೆಚ್ಚಿನ ಒತ್ತು ನೀಡಲಾಗುತ್ತಿದೆ ಎಂದು ಶಾಸಕ ಡಿ.ಎಮ್. ಐಹೊಳೆ ಹೇಳಿದರು.

ಶನಿವಾರ ತಾಲೂಕಿನ ಕಂಕಣವಾಡಿ ಪಟ್ಟಣದಲ್ಲಿ ಜಿ.ಪಂ. ಇಲಾಖೆಯಿಂದ ಮಂಜೂರಾದ 50 ಲಕ್ಷ ರೂ. ಅನುದಾನದಲ್ಲಿ ಕಂಕಣವಾಡಿ-ಕೊಡ್ಡಿನ ತೋಟದ ರಸ್ತೆ ಡಾಂಬರೀಕರಣ ಮತ್ತು 20 ಲಕ್ಷ ರೂ.ಅನುದಾನದಲ್ಲಿ ಕಂಕಣವಾಡಿ-ಸವಸುದ್ದಿ ರಸ್ತೆ ಡಾಂಬರೀಕರಣ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ರೈತರು ಬೆಳೆದ ಬೆಳೆಗಳನ್ನು ಶೀಘ್ರ ಮಾರುಕಟ್ಟೆಗಳಿಗೆ ಸಾಗಿಸಲು ಮತ್ತು ಗ್ರಾಮೀಣ ಭಾಗದ ಜನರು ತಾಲೂಕು ಮತ್ತು ಜಿಲ್ಲಾ ಕೇಂದ್ರ ಸ್ಥಾನಗಳಿಗೆ ಪ್ರಯಾಣಿಸಲು ಗುಣಮಟ್ಟದ ರಸ್ತೆಗಳು ಅವಶ್ಯಕವಾಗಿದೆ. ಗುತ್ತಿಗೆದಾರರು ಗುಣಮಟ್ಟದ ರಸ್ತೆಗಳನ್ನು ಶೀಘ್ರವಾಗಿ ನಿರ್ಮಾಣ ಮಾಡುವುದರ ಮೂಲಕ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ತಿಳಿಸಿದರು.

ಜಿ.ಪಂ.ಎಇಇ ವಿ.ಆರ್.ಭಜಂತ್ರಿ, ಮುಖಂಡರಾದ ಸದಾಶಿವ ಘೋರ್ಪಡೆ, ರಾಜಶೇಖರ ಖನದಾಳೆ, ಅಪ್ಪಾಸಾಬ ಬ್ಯಾಕೂಡೆ, ನಟರಾಜ ಮಾವರಕರ, ಹಾಲಪ್ಪ ಪೀರಗೀಪಾಟೀಲ, ಭೀಮಪ್ಪ ನಾಯಿಕವಾಡಿ, ರಮೇಶ ಪೂಜಾರಿ, ಬಸವರಾಜ ಬೆಳಕೂಡ, ಮಹಾಂತೇಶ ಹತ್ತರಕಿ, ಅಶೋಕ ಪಾಮದಿನ್ನಿ, ವೀರೇಂದ್ರ ಬ್ಯಾಕೂಡೆ, ವಿಠ್ಠಲ ಗುಡೆನ್ನವರ ಸೇರಿ ಅನೇಕರು ಇದ್ದರು.

### ಶ್ರೀ ಸಿದ್ದೇಶ್ವರ ಸಹಕಾರಿ ಬ್ಯಾಂಕ್ ಆಡಳಿತ ಮಂಡಳಿ ಚುನಾವಣೆ ಸಮಾಲೋಚನಾ ಸಭೆ

# ಸಮರ್ಥವಾಗಿರುವ ಹಾಲಿ ಫೆನಲ್ ಗೆಲ್ಲಿಸಿ: ಸಚಿವ ಪಾಟೀಲ



**ಬಸವನಬಾಗೇವಾಡಿ:** ಶತಮಾನದ ಇತಿಹಾಸ ಹೊಂದಿರುವ ಶ್ರೀಸಿದ್ದೇಶ್ವರ ಸಹಕಾರಿ ಬ್ಯಾಂಕ್ ಶೇರುದಾರರು, ಮತದಾರರು ಬ್ಯಾಂಕ್ ಹಾಗೂ ಜಿಲ್ಲೆಯ ಹಿತದೃಷ್ಟಿಯಿಂದ ಹಾಲಿ ಫೆನಲ್ ಆಯ್ಕೆ ಮಾಡುವಂತೆ ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ, ವಿಜಯಪುರ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಅಧ್ಯಕ್ಷ ಶಿವಾನಂದ ಪಾಟೀಲ ಮನವಿ ಮಾಡಿದರು.

ಪಟ್ಟಣದ ಬಸವ ಭವನದಲ್ಲಿ ಶ್ರೀಸಿದ್ದೇಶ್ವರ ಸಹಕಾರಿ ಬ್ಯಾಂಕ್ ಆಡಳಿತ ಮಂಡಳಿ ಚುನಾವಣೆ ಹಿನ್ನೆಲೆಯಲ್ಲಿ ಶನಿವಾರ ಹಮ್ಮಿಕೊಂಡಿದ್ದ ಬಸವನಬಾಗೇವಾಡಿ, ಮುದ್ದೇಬಿಹಾಳ ತಾಲೂಕಿನ ಮತದಾರ ಶೇರುದಾರರು, ಸದಸ್ಯರ ಸಹಕಾರ ಸಮಾಲೋಚನಾ ಸಭೆಗೆ ಚಾಲನೆ ನೀಡಿ ಮಾತನಾಡಿದ ಅವರು, ಶತಮಾನದ ಇತಿಹಾಸ ಹೊಂದಿರುವ ಸಿದ್ದೇಶ್ವರ ಸಹಕಾರಿ ಬ್ಯಾಂಕ್ ಷಡ್ಯೂಲ್ ಬ್ಯಾಂಕ್ ಸ್ಥಾನಕ್ಕೆ ಪರಿವರ್ತನೆ ಆಗಲು ಅವಕಾಶವಿದೆ. ಹೀಗಾಗಿ ಸಾಲದ ಸಂಕಷ್ಟದಿಂದ ಲಾಭದತ್ತ ಕೊಂಡೊಯ್ದಿರುವ ಹಾಲಿ ಆಡಳಿತ ಮಂಡಳಿ ತಂಡವನ್ನೇ ಆಯ್ಕೆ ಮಾಡುವಂತೆ ಕೋರಿದರು.

ಲಾಭದಲ್ಲಿರುವ ಸದರಿ ಬ್ಯಾಂಕಿಗೆ ಚುನಾವಣೆ ವೆಚ್ಚ ತಪ್ಪಿಸಲು ಆಡಳಿತ ಮಂಡಳಿಯ ಅವಿರೋಧ ಆಯ್ಕೆಗೆ ಪ್ರಾಮಾಣಿಕ ಪ್ರಯತ್ನ ಮಾಡಿದರೂ ದುರ್ದೈವದಿಂದ ಚುನಾವಣೆ ಎದುರಾಗಿದೆ. ಹೀಗಾಗಿ ಹಾಲಿ ಫೆನಲ್ ಗೆಲ್ಲಿಸುವ ಮೂಲಕ ಸಹಕಾರಿ ರಂಗದ ಸಿದ್ದೇಶ್ವರ ಬ್ಯಾಂಕ್ ಹಿರಿಮೆ ಹೆಚ್ಚಿಸಿ ಎಂದು ಮನವಿ ಮಾಡಿದರು.

ಡಾ.ಫ.ಗು. ಹಳಕಟ್ಟಿ ಅವರಂತಹ ಮಹನೀಯರ ದೂರದೃಷ್ಟಿಯಿಂದ ಸ್ಥಾಪನೆಯಾಗಿರುವ ಶ್ರೀ ಸಿದ್ದೇಶ್ವರ ಸಹಕಾರಿ ಬ್ಯಾಂಕ್ ಒಂದು ಕಾಲದಲ್ಲಿ ಅತ್ಯಂತ ಉತ್ತುಂಗದಲ್ಲಿತ್ತು. ಆದರೆ ಮಧ್ಯದಲ್ಲಿ ಆಡಳಿತ ವೈಫಲ್ಯದಿಂದಾಗಿ ಹಾನಿಗೆ ಈಡಾಗಿತ್ತು. ಆದರೆ ಹಾಲಿ ಆಡಳಿತ ಮಂಡಳಿ ಕಳೆದ ಮೂರು ಅವಧಿಗೆ ಸಮರ್ಥ ಆಡಳಿತದಿಂದ ಹಾನಿಯಿಂದ ಮುಕ್ತವಾಗಿ ಲಾಭದಲ್ಲಿ ಸಾಗುತ್ತಿದ್ದು, ಇನ್ನೂ ಉತ್ತುಂಗಕ್ಕೆ ಕೊಂಡೊಯ್ಯಲು ಹಾಲಿ ತಂಡವನ್ನೇ ಆಯ್ಕೆ ಮಾಡಿ ಎಂದು ಕರೆ ನೀಡಿದರು.

ವೇದಿಕೆಯಲ್ಲಿ ಸಹಕಾರಿ ರಂಗದ ಪ್ರಮುಖರಾದ ಲೋಕನಾಥ ಅಗರವಾಲ, ಶಿವನಗೌಡ ಬಿರಾದಾರ, ಬಿ.ಎಸ್. ಪಾಟೀಲ ಯಾಳಗಿ, ಐ.ಸಿ.ಪಟ್ಟಣಶೆಟ್ಟಿ, ಚಂದ್ರಶೇಖರಗೌಡ ಪಾಟೀಲ ಮನಗೂಳಿ, ಶೇಖರ ದಳವಾಯಿ, ಅನಿಲ ದುಂಬಾಳೆ, ಸತೀಶ ಓಸ್ತವಾಲ, ಸುರೇಶ ಹಾರಿವಾಳ, ತಾನಾಜಿ ನಾಗರಾಳ, ಪ್ರೇಮು ಮ್ಯಾಗೇರಿ, ಬಾಲಚಂದ್ರ ಮುಂಜಾನೆ, ಅಣ್ಣುಗೌಡ ಬಿರಾದಾರ, ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ, ಶ್ರೀಸಿದ್ದೇಶ್ವರ ಸಹಕಾರಿ ಬ್ಯಾಂಕ್ ಹಾಲಿ ಆಡಳಿತ ಮಂಡಳಿ ನಿರ್ದೇಶಕರೂ ಆಗಿರುವ ಸ್ಪರ್ಧಾಕಣದಲ್ಲಿರುವ ವಿಜಯಕುಮಾರ ಇಜೇರಿ, ಐ.ಎಂ.ಪಟ್ಟಣಶೆಟ್ಟಿ, ವೈಜನಾಥ ಕರ್ಪೂರಮಠ, ಹರ್ಷಗೌಡ ಪಾಟೀಲ, ಡಾ.ಸಂಜೀವ ಪಾಟೀಲ ಮುಳವಾಡ, ಗುರು ಗಚ್ಚಿನಮಠ, ಬೋರಮ್ಮ ಗೊಬ್ಬೂರ, ಸೌಭಾಗ್ಯ ಭೋಗಶೆಟ್ಟಿ, ಕರುಣಾ ಅವರಂಗಾಬಾದ್, ಸುರೇಶ ಗಚ್ಚಿನಕಟ್ಟಿ, ರಮೇಶ ಬಿದನೂರು, ಪ್ರಕಾಶ ಬಗಲಿ, ಗುರುರಾಜ ಗಂಗನಹಳ್ಳಿ, ರಾಜು ಕತ್ತಿ, ರಾಜೇಂದ್ರ ಪಾಟೀಲ, ವಿಶ್ವನಾಥ ಪಾಟೀಲ, ಸಾಯಬಣ್ಣ ಭೋವಿ, ಅಮೋಘಸಿದ್ಧ ನಾಯ್ಕೋಡಿ ಸೇರಿದಂತೆ ಇತರರು ಇದ್ದರು. ರವಿ ರಾಠೋಡ ಸ್ವಾಗತಿಸಿದರು. ಸಂಗಮೇಶ ಓಲೇಕಾರ ನಿರೂಪಿಸಿದರು. ಶಂಕರಗೌಡ ಬಿರಾದಾರ ವಂದಿಸಿದರು.



# ಅಂತಾರಾಷ್ಟ್ರೀಯ ಹೆಣ್ಣು ಮಗು ದಿನಾಚರಣೆ

**ವಿಜಯಪುರ:** ಇಂದು ಅಂತಾರಾಷ್ಟ್ರೀಯ ಹೆಣ್ಣು ಮಗುವಿನ ದಿನ. ಈ ನಿಮಿತ್ತ ತಾಲೂಕಿನ ನಾಗಠಾಣ ಗ್ರಾಮದ ಹೆಣ್ಣು ಮಕ್ಕಳಾದ ಅನುಶ್ರೀ-ಶ್ರೀನಿಧಿ ಬಂಡೆ, ಸಮೃದ್ಧಿ-ದೀಪಾ, ಭಾಗ್ಯ-ಸನ್ನಿಧಿ ಅವರು ಪರಸ್ಪರ ಸಿಹಿ ಹಂಚಿಕೊಂಡು ಅಂತಾರಾಷ್ಟ್ರೀಯ ಹೆಣ್ಣು ಮಗುವಿನ ದಿನವನ್ನು ಆಚರಿಸಿದರು.

ಹೆಣ್ಣು ಎಂದರೆ ಮನೆಯ ಬೆಳಕು. ಹುಟ್ಟಿನಿಂದ ಸಾಯುವ ತನಕ ವಿವಿಧ ಪಾತ್ರಗಳನ್ನು ಸಮರ್ಥವಾಗಿ ನಿಭಾಯಿಸಿಕೊಂಡು ಹೋಗುವವಳು. ಜಗದ ಸೃಷ್ಟಿಕರ್ತೆಯೇ ಅವಳಾಗಿರುವಾಗ ಆಕೆ ಇಲ್ಲದೆ ಜೀವಿಸುವುದು ಕಷ್ಟದಾಯಕ. ಇಂದಿನ ದಿನಗಳಲ್ಲಿ ಹೆಣ್ಣು ಮಕ್ಕಳು ವಿವಿಧ ಕ್ಷೇತ್ರದಲ್ಲಿ ಸಾಧನೆಗೈದು ಮಾದರಿಯಾಗಿದ್ದಾರೆ. ಅಂತಾರಾಷ್ಟ್ರೀಯ ಹೆಣ್ಣು ಮಕ್ಕಳ ದಿನವನ್ನು ಬಾಲ್ಯವಿವಾಹ, ಶಿಕ್ಷಣ, ತಾರತಮ್ಯ ಮತ್ತು ಹಿಂಸೆ, ಲಿಂಗ ಆಧಾರಿತ ಅಸಮಾನತೆ, ಹೆಣ್ಣು ಮಕ್ಕಳ ಹಕ್ಕುಗಳು, ಹೆಣ್ಣು ಮಕ್ಕಳಿಗೆ ಸಮಾನ ಗೌರವ ಮತ್ತು ಹಕ್ಕುಗಳನ್ನು ನೀಡಲು, ಸುರಕ್ಷತೆ ಮತ್ತು ಸಮಾನತೆಯ ಬಗ್ಗೆ ಅವರಿಗೆ ಅರಿವು ಮೂಡಿಸುವ ಉದ್ದೇಶದಿಂದ ಈ ದಿನವನ್ನು ಆಚರಿಸಲಾಗುತ್ತದೆ.

# ಇಂದು ಬೆಳಗಾವಿಯಲ್ಲಿ ಕನ್ನಡ ದೀಕ್ಷೆ ಕಾರ್ಯಕ್ರಮ




ಬೆಳಗಾವಿ: ಇಂದು ಕನ್ನಡ ದೀಕ್ಷೆ ಕಾರ್ಯಕ್ರಮವನ್ನು ಕರ್ನಾಟಕ ರಕ್ಷಣಾ ವೇದಿಕೆಯ ಬೆಳಗಾವಿ ಜಿಲ್ಲಾ ಘಟಕದ ವತಿಯಿಂದ ಆಯೋಜಿಸಲಾಗಿದೆ. ಕರವೇ ರಾಜ್ಯಾಧ್ಯಕ್ಷ ಟಿ.ಎ ನಾರಾಯಣಗೌಡ ಅವರ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದು ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯ ಸಂಚಾಲಕ ಸುರೇಶ್ ಗವನ್ನವರ, ಜಿಲ್ಲಾಧ್ಯಕ್ಷ ದೀಪಕ್ ಗುಡಗನಟ್ಟಿ ತಿಳಿಸಿದರು.

ಬೆಳಗಾವಿ ನಗರದ ಕನ್ನಡ ಸಾಹಿತ್ಯ ಭವನದಲ್ಲಿ ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿದ ಅವರು, ಕನ್ನಡ ದೀಕ್ಷೆ ನೀಡಿ ಸ್ವಯಂ ಸೇವಕರನ್ನು ತಯಾರಿಸಲಾಗುತ್ತಿದೆ. ನೆಲ, ಜಲ ವಿಷಯದಲ್ಲಿ, ನಾಡಿನಲ್ಲಿ ಕನ್ನಡ ವಿಷದಲ್ಲಿ ಏನೇ ಸಮಸ್ಯೆಗಳು ಆದರು ಸ್ವಯಂ ಸೇವಕರು ಮುಂದೆ ಬಂದು ಕೆಲಸ ಮಾಡುತ್ತಾರೆ. ರಾಜ್ಯದ ಜಿಲ್ಲೆ ಜಿಲ್ಲೆಯಿಂದ ಸ್ವಯಂ ಸೇವಕರನ್ನು ತಯಾರು ಮಾಡುತ್ತಿದ್ದೇವೆ. ಕನ್ನಡದ ಮೇಲೆ ಆಗುತ್ತಿರುವ ಅನ್ಯಾಯವನ್ನು ಹೋಗಲಾಡಿಸಲು ನಾರಾಯಣ ಟಿ.ಎ ಗೌಡರು ದೀಕ್ಷೆ ಭೋದಿಸಲಿದ್ದಾರೆ. ಕರ್ನಾಟಕದಲ್ಲಿ ಕನ್ನಡವೇ ಸೌರ್ವಭೌಮ ಎಂದು ಜಿಲ್ಲೆಯ ಸ್ವಾಭಿಮಾನಿ ಕನ್ನಡಿಗರು ಕಾರ್ಯ ಕ್ರಮದಲ್ಲಿ ಭಾಗಿ ಆಗಬೇಕು. ಕರ್ನಾಟಕ ರಕ್ಷಣಾ ವೇದಿಕೆಗೆ ಸೇರಬೇಕು ಎಂದು ಕರೆ ನೀಡಿದರು.

ಬಳಿಕ ಮಾತನಾಡಿದ ಕರವೇ ಜಿಲ್ಲಾಧ್ಯಕ್ಷ ದೀಪಕ ಗುಡಗನಟ್ಟಿ, ಕರವೇ ರಾಜ್ಯಾಧ್ಯಕ್ಷ ಟಿ.ಎ ನಾರಾಯಗೌಡ ಅವರ ಆದೇಶದಂತೆ ಕನ್ನಡ ದೀಕ್ಷೆ ಕಾರ್ಯಕ್ರಮ ಆಗುತ್ತಿದೆ. ಪ್ರತಿ ಸಭೆ ಸಮಾರಂಭ, ಪ್ರತಿಭಟನೆ, ಕನ್ನಡ ವಿಷಕ್ಕೆ ಕನ್ನಡ ದೀಕ್ಷೆ ಪಡೆದ ಸ್ವಯಂ ಸೇವಕರು ಮುಂದಾಗಬೇಕು. ಜಿಲ್ಲೆಯಿಂದ 4000 ಸಾವಿರ ಸ್ವಯಂ ಸೇವಕರನ್ನು ಕೋಡುತ್ತಿದ್ದೇವೆ ಎಂದರು.

ಕಾರ್ಯಕ್ರಮಕ್ಕೆ ಸ್ವಾಮಿಗಳು, ಮಠಾಧೀಶರು ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಸಚಿವರು, ಶಾಸಕರು, ಸಂಸದರು. ಮಾಜಿ ಶಾಸಕರು. ಎಂ.ಎಲ್ಸಿ ಗಳು, ಸಾಹಿತಿಗಳು, ಚಿಂತಕರು, ವಿವಿಧ ಸಮುದಾಯ ಮುಖಂಡರು ಕನ್ನಡ ದೀಕ್ಷೆ ಕಾರ್ಯಕ್ರಮದಲ್ಲಿ ಇರಲಿದ್ದಾರೆ ಎಂದರು.

ಈ ಕಾರ್ಯಕಮ್ರಕ್ಕಾಗಿ ಒಂದು ತಿಂಗಳಕಾಲ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದೇವೆ. ಈ ಮುಂಚೆ ಹಾಸನದಲ್ಲಿ ಈ ರೀತಿ ಕಾರ್ಯಕ್ರಮ ಆಗಿದೆ. ಈಗ ಬೆಳಗಾವಿಯಲ್ಲಿ ಕಾರ್ಯಕ್ರಮ ಆಗುತ್ತಿದೆ. ಕಾರ್ಯಕ್ರಮದಲ್ಲಿ ಗಡಿ ವಿಷದ ಬಗ್ಗೆ ಚರ್ಚೆ ಆಗುತ್ತೆ. ಜಿಲ್ಲೆಯಲ್ಲಿ ಸಂಘಟನೆಯನ್ನು ಗಟ್ಟಿ ಮಾಡಲು ಕಾರ್ಯಕ್ರಮ ಮಾಡುತಿದ್ದೇವೆ ಎಂದು ತಿಳಿಸಿದರು.

# ಉಚಿತ ಕಣ್ಣು ತಪಾಸಣೆ ಶಿಬಿರ

**ಜಮಖಂಡಿ:** ರೋಟರಿ ಸಂಸ್ಥೆಯ ಅಡಿಯಲ್ಲಿ ಬಾಗಲಕೋಟೆಯ ಡಾ.ಮಾಸೂರಕರ ಅವರ ಕಣ್ಣಿನ ಆಸ್ಪತ್ರೆಯ ಆಶ್ರಯದಲ್ಲಿ ಬಡವರಿಗೆ ಉಚಿತವಾಗಿ ಕಣ್ಣು ತಪಾಸಣೆ ಶಿಬಿರ ಆಯೋಜಿಸಲಾಗುವುದು. ಶೇ 50ರ ರಿಯಾಯಿತಿ ದರದಲ್ಲಿ ಕನ್ನಡಕ ವಿತರಿಸಲಾಗುವುದು. ರೋಟರಿ ಸಂಸ್ಥೆ ಸೂಚಿಸುವ ಕಡೆ ಶಿಬಿರವನ್ನು ಆಯೋಜಿಸಲಾಗುವುದು ಎಂದು ರೋಟರಿ ಜಿಲ್ಲೆ 3170ದ ಸಹಾಯಕ ಗವರ್ನರ ನಾರಾಯಣ ಹೆರಕಲ್ ಹೇಳಿದರು.

ಇಲ್ಲಿನ ವಿಜಯಪುರ ರಸ್ತೆಯ ಹೊರವಲಯದಲ್ಲಿರುವ ರೋಟರಿ ಭವನದಲ್ಲಿ ರೋಟರಿ ಸಂಸ್ಥೆಯ ಆಶ್ರಯದಲ್ಲಿ ಶುಕ್ರವಾರ ಸಂಜೆ ನಡೆದ ವಾರದ ಸಭೆಯ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ಪಲ್ಸ್ ಪೋಲಿಯೋ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು. ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ವಿಶೇಷ ಉಪನ್ಯಾಸ ವ್ಯವಸ್ಥೆ ಮಾಡಬೇಕು. ಮಳೆ ನೀರು ಕೊಯ್ಲು, ಚೆಕ್ ಡ್ಯಾಂ ನಿರ್ಮಾಣದ ಮಹತ್ವ ಕುರಿತು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಶಿಕ್ಷಕರಿಗೆ ತರಬೇತಿ ಕಾರ್ಯಾಗಾರ, ಶಾಲಾ-ಕಾಲೇಜು ಮಕ್ಕಳಿಗೆ ಗಣಕಯಂತ್ರ ಮತ್ತು ಸೈಕಲ್ ವಿತರಿಸುವಂತ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲು ಸಲಹೆ ನೀಡಿದರು.

ಜಮಖಂಡಿ ರೋಟರಿ ಸಂಸ್ಥೆಯ ಅಧ್ಯಕ್ಷ ರಾಜಶೇಖರ ಕೋವಳ್ಳಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ರೋಟರಿ ಸಂಸ್ಥೆಯ ಖಜಾಂಚಿ ಶಂಕರ ತೇಲಿ ರೋಟರಿ ಸಂಸ್ಥೆಯ ಫೋರ್ ವೇ ಟೆಸ್ಟ್ ಓದಿದರು. ಕಾರ್ಯದರ್ಶಿ ಎಂ.ಎಚ್. ಕಡ್ಲಿಮಟ್ಟಿ ವಂದಿಸಿದರು.




# ಸಂಘಟನೆಯಿಂದ ಸಮಾಜಕ್ಕೇ ಒಳ್ಳೆಯದನ್ನು ಮಾಡಿ: ಮೇತ್ರಿ



**ಹಳ್ಳೂರ:** ಸಂವಿದಾನ ಶಿಲ್ಪಿ ಡಾ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಹೇಳಿದಂತೆ ಸಂಘಟನೆ, ಹೋರಾಟ, ಶಿಕ್ಷಣ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಸಮಾಜದಲ್ಲಿ ಮುಂದುವರೆಯಲು ಸಾಧ್ಯವಾಗುವುದು ಮಕ್ಕಳಿಗೆ ಶಿಕ್ಷಣ ನೀಡುವಲ್ಲಿ ಪ್ರಮುಖ ಪಾತ್ರ ಮಹತ್ವದ್ದು ಆಸೆ ಆಮಿಷಗಳಿಗೆ ಬಲಿಯಾಗದೆ ಸಂಘಟನೆಯಿಂದ ಸಮಾಜಕ್ಕೇ ಒಳ್ಳೆಯದನ್ನು ಮಾಡಿ ಅನ್ಯಾಯವಾದರೆ ನ್ಯಾಯ ಒದಗಿಸುವ ಪ್ರಾಮಾಣಿಕ ಪ್ರಯತ್ನ ಮಾಡಬೇಕೆಂದು ಭೀಮ ಆರ್ಮಿ ಸಂಘಟನೆ ರಾಜ್ಯಾಧ್ಯಕ್ಷ ಲವಿತ್ ಮೇತ್ರಿ ಹೇಳಿದರು .

ಅವರು ಗ್ರಾಮದಲ್ಲಿ ನಡೆದ ಭಿಮ್ ಆರ್ಮಿ ಮೂಲ ನಿವಾಸಿ ಏಕತಾ ಏಕತಾ ಪರಿಷತ್ ಕರ್ನಾಟಕ ಹಳ್ಳೂರ ಗ್ರಾಮ ಘಟಕ ಉದ್ಘಾಟನೆಯನ್ನು ನೆರವೇರಿಸಿ ಮಾತನಾಡಿದ ಸಮಾಜದಲ್ಲಿ ಕಷ್ಟದಲ್ಲಿದ್ದವರಿಗೆ ಸಹಾಯ ಸಹಕಾರ ನೀಡಿ ಮುಖ್ಯ ವಾಹಿನಿಗೆ ತರುವವುದೇ ಭೀಮ್ ಆರ್ಮಿ ಸಂಘಟನೆ ಉದ್ದೇಶವಾಗಿದೆಂದರು.

ದಲಿತ ಸಮಾಜದ ಮುಖಂಡರಾದ ಸಂತೋಷ ದೊಡಮನಿ ಮಾತನಾಡಿ ಅಕ್ಷರದ ಕ್ರಾಂತಿ ಮಾಡಿದವರು ಸಾವಿತ್ರಿ ಬಾಯಿ ಪುಲೆಯವರು, ಸಂಘಟನೆಯಲ್ಲಿ ತೂಕ ಬದ್ಧತೆ ಪ್ರಾಮಾಣಿಕತೆ ಪ್ರಬುದ್ಧತೆ ಹೊಂದಿರಬೇಕು. ಅಂಬೇಡ್ಕರ್ ಅವರು ಗ್ರಂಥಾಲಯಡಲ್ಲಿ ಹೆಚ್ಚು ಸಮಯ ಕಳಿಯುತ್ತಿದ್ದರು ಕೋರ್ಟು ಕಚೇರಿಗೆ ಹೋಗದೆ ನೇರವಾಗಿ ಸತ್ಯಕ್ಕೆ ನ್ಯಾಯ ಒದಗಿಸುವ ಕೆಲಸ ಕಾರ್ಯ ಮಾಡಿದ್ದಾರೆ. ಅಂಬೇಡ್ಕರ ತತ್ತ್ವ ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಅವರ ಅನುಯಾಯಿಗಳಾಗಲು ಸಾಧ್ಯ ಆಸೆ ಆಮಿಷಗಳಿಗೆ ಬಲಿಯಾಗಬೇಡಿ

ರಮಾಬಾಯಿ ಅವರಲ್ಲಿ ಸತ್ಯ ನಿಷ್ಠುರತೆ ಅವರಲ್ಲಿತ್ತು ಬೇರೆಯವರ ಹಣಕ್ಕೆ ಆಸೆ ಪಡುತ್ತಿರಲಿಲ್ಲ ನೀವೂ ಕೂಡ ಸ್ವತಃ ಸತ್ಯದ ಕಾಯಕ ಮಾಡಿ ಹಣ ಸಂಪಾದನೆ ಮಾಡಿರೆಂದು ಹೇಳಿದರು

ಸಮಾಜ ಸೇವಕ ಮುರಿಗೆಪ್ಪ ಮಾಲಗಾರ ಮಾತನಾಡಿ ಸಂಘಟನೆಯಿಂದ ವ್ಯಯಕ್ತಿಕ ಲಾಭ ವಿಚಾರಿಸದೆ ಸಮಾಜದ ಏಳ್ಗೆಗೆ ಪ್ರಾಮಾಣಿಕ ಪ್ರಯತ್ನ ಪಟ್ಟರೆ ತಕ್ಕ ಪಲ ದೊರೆಯುತ್ತದೆ.ಶಿಕ್ಷಣ ಎಂಬುದು ಹುಲಿ ಹಾಲು ಇದ್ದಂತೆ ಕುಡಿದವ ಗರ್ಜಿಸಲೇಬೇಕೆಂದು ಹೇಳಿದರು.

ಸುನೀಲ ಹರಿಜನ ಹಾಗೂ ರವಿ ಬೆಳಗಲಿ ಮಾತನಾಡಿ ಭೀಮ್ ಅರ್ಮಿ ಮೂಲ ನಿವಾಸಿ ಏಕತಾ ಪರಿಷತ್ ಸಂಘಟನೆಯಿಂದ ಸಮಾಜಕ್ಕೇ ಒಳ್ಳೆಯ ಸಂದೇಶ, ಕೊಡುಗೆಗಳನ್ನು ನೀಡುವಂತಾಗಬೇಕು ಸಮಾಜ ಬಾಂದವರು ಗ್ರಾಮ ಪಂಚಾಯತಿಯಿಂದ ಸರಕಾರದ ಸೌಲಭ್ಯಗಳು ಪಡೆದುಕೊಳ್ಳಬೇಕು ಎಂದು ಹೇಳಿದರು.

ಪ್ರಾರಂಭದಲ್ಲಿ ಗ್ರಾಮ ಪಂಚಾಯತಿಯಿಂದ ಜಾಥಾ ಮೂಲಕ ಆಗಮಿಸಿ ಭೀಮ ಆರ್ಮಿ ಮೂಲ ನಿವಾಸಿ ಏಕತಾ ಪರಿಷತ್ ನಾಮ ಫಲಕ ಉದ್ಘಾಟನೆ ನೆರವೇರಿಸಿದರು.

ಚೇತನ ಪೂಜೇರಿ. ಗಣೇಶ ಹೀರ್ಲಕ್ಕಿ. ವಿಠ್ಠಲ ಜುನ್ನೂರ ಸಂಘಟನೆ ಉದ್ದೇಶಗಳ ಬಗ್ಗೆ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಮಯದಲ್ಲಿ ಪ್ರಕಾಶ ಕೆಳಗಡೆ. ಅನೀಲ ಬರ್ಗಿ. ಶಿವಪ್ಪ ಹರಿಜನ. ಹನಮಂತ ಬಾಳವ್ವಗೋಳ . ಶಂಭುಲಿಂಗ ವೆಂಕಟಾಪುರ. ಭರಮಪ್ಪ ದೊಡಮನಿ. ಶ್ರೀಶೈಲ ಹರಿಜನ. ಬಾಬು ಹರಿಜನ. ಶಂಕರ ಹರಿಜನ. ಸುರೇಶ ಹರಿಜನ. ವಿಠ್ಠಲ ದೊಡಮನಿ. ಪ್ರಭು ಹರಿಜನ.ಸದಾಶಿವ ಕೆಳಗಡೆ. ಶ್ರಿಸೈಲ ದೊಡಮನಿ. ಪಾಂಡುರಂಗ ದೊಡಮನಿ. ಪಾಂಡುರಂಗ ವೆಂಕಟಾಪುರ. ಯಲ್ಲಪ್ಪ ಮ್ಯಾಗಾಡಿ.ರಾಮಪ್ಪ ದೊಡಮನಿ ಸೇರಿದಂತೆ ಭೀಮ ಆರ್ಮಿ ಮೂಲ ನಿವಾಸಿ ಏಕತಾ ಪರಿಷತ್ ಸಂಘಟಕರು ಗ್ರಾಮಸ್ಥರಿದ್ದರು.

# ಓಪನ್ ಚೆಸ್ ಟೋರ್ನಾಮೆಂಟ್ ಟ್ರೋಫಿ ಅನಾವರಣ



**ಬೆಳಗಾವಿ:** ಸತೀಶ ಜಾರಕಿಹೊಳಿ ಫೌಂಡೇಶನ್ ವತಿಯಿಂದ ಇಲ್ಲಿನ ಗೋವಾವೆಸ್ ಮಹಾವೀರ ಭವನದಲ್ಲಿ ಅ.25 ಮತ್ತು 26 ರಂದು ನಡೆಯಲಿರುವ ಸತೀಶ ಜಾರಕಿಹೊಳಿ ಓಪನ್ ಚೆಸ್ ಟೋರ್ನಾಮೆಂಟ್ ಟ್ರೋಫಿಯನ್ನು ಸಂಸದೆ ಪ್ರಿಯಂಕಾ ಜಾರಕಿಹೊಳಿ ಅವರು ಅನಾವರಣಗೊಳಿಸಿದರು.

ಈ ವೇಳೆ ಸಂಸದೆ ಪ್ರಿಯಂಕಾ ಜಾರಕಿಹೊಳಿ ಅವರು ಮಾತನಾಡಿ, ಸತತ ಮೂರು ವರ್ಷಗಳಿಂದ ಆಯೋಜಿಸಲಾದ ಚೆಸ್ ಚೆಸ್ ಟೋರ್ನಾಮೆಂಟ್ ಗೆ ಉತ್ತಮ ಸ್ಪಂದನೆ ದೊರತ್ತಿದೆ. ಇದರಿಂದ ನೂರಾರು ವಿದ್ಯಾರ್ಥಿಗಳು ಕನಸುಗಳು ಸಾಕಾರಗೊಂಡಿದೆ. ರಾಷ್ಟ್ರೀಯ ಚೆಸ್ ಟೋರ್ನಾಮೆಂಟ್ ಆದರಿಂದ ಚಾಂಪಿಯನ್ಸ್ ಸ್ಪರ್ಧಾಳುಗಳು ಆಗಮಿಸುವ ಸಾಧ್ಯತೆ ಇದೆ. ಅವರಿಗೆ ಸುಸಜ್ಜಿತ ವ್ಯವಸ್ಥೆ ಕಲ್ಪಿಸಬೇಕು. ಕ್ರೀಡಾ ತಂದೆಯವರು ಬಹಳಷ್ಟು ಕ್ರೀಡೆಗೆ ಪ್ರೋತ್ಸಾಹ ನೀಡುತ್ತಿದ್ದಾರೆ. ಚೆಸ್ ಪಂದ್ಯಾವಳಿಗಳು ಯಶಸ್ವಿಯಾಗಿ ನಡೆಯಲಿ ಎಂದು ಹಾರೈಸಿದರು.

ಉತ್ತರ ಕರ್ನಾಟಕ ಮಕ್ಕಳು ಬೆಳೆಯಲು ಇದೊಂದು ಅವಕಾಶವಿದೆ. ಹೆಚ್ಚಿನ ವಿದ್ಯಾರ್ಥಿಗಳು ಈ ಚೆಸ್ ಟೂರ್ನಮೆಂಟ್" ನಲ್ಲಿ ಪಾಲ್ಗೊಳ್ಳಬೇಕು ಎಂದು ಹೇಳಿದರು.

ನೀವು ನಿಮ್ಮ ಮೊದಲ ಟೂರ್ನಮೆಂಟ್‌ನಲ್ಲಿ ಆಡಿದ ನಂತರ, ನಿಮಗೆ ರೇಟಿಂಗ್ ಸಿಗುತ್ತದೆ. ನೀವು ಗೆದ್ದಾಗ ಅದು ಹೆಚ್ಚಾಗುತ್ತದೆ, ನೀವು ಸೋತಾಗ ಅದು ಕಡಿಮೆಯಾಗುತ್ತದೆ ಮತ್ತು ನೀವು ಡ್ರಾ ಮಾಡಿದಾಗ ಅದು ನೀವು ಯಾರೊಂದಿಗೆ ಆಡಿದ್ದೀರಿ ಎಂಬುದರ ಮೇಲೆ ಅವಲಂಭಿತವಾಗಿರುತ್ತದೆ. ನೀವು ಬಲಿಷ್ಠ ಆಟಗಾರನನ್ನು ಸೋಲಿಸಿದರೆ ನೀವು ಬಹಳಷ್ಟು ಮೇಲೇರುತ್ತೀರಿ, ನೀವು ಬಲಿಷ್ಠ ಆಟಗಾರನ ವಿರುದ್ಧ ಆಟವಾಡಿದರೆ ಮುಂದಿನ ಪದ್ಯಗಳನ್ನು ಎದುರಿಸಲು ವಿದ್ಯಾರ್ಥಿಗಳಿಗೆ ಸುಲಭದ ದಾರಿ ಇದೊಂದು ಭವಿಷ್ಯತ್ತಿನ ಪಂದ್ಯಗಳು ಮಕ್ಕಳು ಗೆದ್ದು ಟ್ರೋಫಿ ಎತ್ತಿ ಹಿಡಿಯಲಿ ಎಂದರು. ಈ ಸಂದರ್ಭದಲ್ಲಿ ಇಮ್ರಾನ್ ತಪ್ಪಕೀರ್, ಪಾಡುರಂಗ ರಂಗಸುಭೆ, ದಿಕ್ಷಿತಾ ಪೂಜಾರಿ ಹಾಗೂ ಇತರರು ಇದ್ದರು.

**ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯ ಸೂಚನೆ**

# ಬನವಾಸಿ, ಮಿರ್ಜಾನ್ ಕೋಟೆಯಲ್ಲಿ ಧ್ವನಿ ಬೆಳಕು ಕಾರ್ಯಕ್ರಮ

**ಕಾರವಾರ:** ಜಿಲ್ಲೆಯಲ್ಲಿ ಪ್ರವಾಸೋದ್ಯಮವನ್ನು ಆಕರ್ಷಿಸುವ ನಿಟ್ಟಿನಲ್ಲಿ ಐತಿಹಾಸಿಕ ಸ್ಥಳಗಳಾದ ಬನವಾಸಿ ಮತ್ತು ಮಿರ್ಜಾನ್ ಕೋಟೆಯಲ್ಲಿ ಧ್ವನಿ ಬೆಳಕು ಕಾರ್ಯಕ್ರಮವನ್ನು ಆಯೋಜಿಸುವ ಕುರಿತಂತೆ ಪ್ರಸ್ತಾವನೆಯನ್ನು ತಯಾರಿಸಿ,ಪ್ರಾಚ್ಯ ವಸ್ತು ಇಲಾಖೆಯ ಮೂಲಕ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿ, ಕಾರ್ಯಕ್ರಮ ಆಯೋಜನೆಗೆ ಕ್ರಮ ಕೈಗೊಳ್ಳುವಂತೆ ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯ ಸೂಚನೆ ನೀಡಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರವಾಸೋದ್ಯಮವನ್ನು ಆಕರ್ಷಿಸುವ ಜೊತೆಯಲ್ಲಿ ಪ್ರವಾಸಿ ಸ್ಥಳಗಳಲ್ಲಿ ಅಗತ್ಯ ಮೂಲ ಸೌಕರ್ಯಗಳನ್ನು ಒದಗಿಸಲು ಮತ್ತು ಬೀಚ್ ಗಳಲ್ಲಿ ಸುರಕ್ಷತೆಯನ್ನು ಬಲಪಡಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಿದ ಅವರು,ಮುರುಡೇಶ್ವರ ಕಡಲತೀರದಲ್ಲಿ ಪ್ರವಾಸಿಗರಿಗೆ ಲಗೇಜ್ ಮತ್ತು ಲಾಕರ್ ವ್ಯವಸ್ಥೆ ಒದಗಿಸಲು, ಸ್ನಾನಗೃಹಗಳ ನಿರ್ಮಾಣ ಮತ್ತು ಹೆಚ್ಚುವರಿ ಲೈಫ್ ಗಾರ್ಡ್‌ಗಳ ನೇಮಕ ಮಾಡುವಂತೆ ಮತ್ತು ತುರ್ತು ಸಂದರ್ಭದಲ್ಲಿ ನೆರವಾಗುವಂತೆ ಪ್ರಥಮ ಚಿಕಿತ್ಸಾ ಕೇಂದ್ರ ಮತ್ತು ನುರಿತ ಸಿಬ್ಬಂದಿಯನ್ನು ನಿಯೋಜಿಸುವಂತೆ ಸೂಚಿಸಿದರು.




ಹೊನ್ನಾವರ ತಾಲೂಕಿನ ಶರಾವತಿಯಲ್ಲಿ ಬೋಟಿಂಗ್ ಆರಂಭಿಸಲು ಈಗಾಗಲೇ ಅರ್ಜಿ ಸಲ್ಲಿಸಿರುವವರಿಗೆ ಬಂದರು ಇಲಾಖೆಯಿಂದ ನಿರಾಕ್ಷೇಪಣ ಪತ್ರ ನೀಡುವಲ್ಲಿ ವಿಳಂಬವಾಗುತ್ತಿರುವುದನ್ನು ಗಮನಿಸಿದ ಜಿಲ್ಲಾಧಿಕಾರಿಗಳು ಬಂದರು ಇಲಾಖೆಗೆ ಪ್ರಸ್ತುತ ಸಲ್ಲಿಕೆಯಾಗಿರುವ ಅರ್ಜಿಗಳನ್ನು ಒಂದು ವಾರದ ಒಳಗೆ ಇತ್ಯರ್ಥಪಡಿಸಿ ವರದಿ ನೀಡುವಂತೆ ಸೂಚಿಸಿ, ಬೋಟಿಂಗ್ ಸಂದರ್ಭದಲ್ಲಿ ಪ್ರವಾಸಿಗರಿಗೆ ಕಡ್ಡಾಯವಾಗಿ ಲೈಫ್ ಜಾಕೆಟ್ ಗಳನ್ನು ಒದಗಿಸಿರುವ ಬಗ್ಗೆ ಪರಿಶೀಲನೆ ನಡೆಸಬೇಕು ಮತ್ತು ನಿಯಮಬದ್ಧವಾಗಿರುವ ಮತ್ತು ಸೂಕ್ತ ದಾಖಲೆಗಳನ್ನು ಸಲ್ಲಿಸಿರುವ ಅರ್ಜಿಗಳನ್ನು ವಿಲೇ ಮಾಡಿ ಬೋಟಿಂಗ್ ನಡೆಸಲು ಅನುಮತಿ ನೀಡಬೇಕು ಎಂದರು. ಕಾಸರಕೋಡ, ಅಪ್ಸರಕೊಂಡ, ಧಾರೇಶ್ವರ ಕಡಲತೀರದಲ್ಲಿ ಜಲಸಾಹಸ ಕ್ರೀಡೆ ನಡೆಸಲು ಸಲ್ಲಿಕೆಯಾಗಿರುವ ಅರ್ಜಿಗಳ ಕುರಿತಂತೆ ಪೋಲೀಸ್, ಅರಣ್ಯ ಮತ್ತು ಸಂಬಂದಪಟ್ಟ ಇಲಾಖೆಗಳಿಂದ ನಿರಕ್ಷೇಪಣಾ ಪತ್ರ ಪಡೆದು ಅನುಮತಿ ನೀಡುವ ಬಗ್ಗೆ ಕ್ರಮ ಕೈಗೊಳ್ಳಬೇಕು ಹಾಗೂ ಅಪ್ಸರಕೊಂಡದಲ್ಲಿ ಪ್ರೀ ವೆಡ್ಡಿಂಗ್ ಶೂಟ್ ಗೆ ಅನುಮತಿ ನೀಡುವ ಮುನ್ನ ಸುರಕ್ಷತೆಯ ಬಗ್ಗೆ ಪರಿಶೀಲಿಸಿ ಎಂದು ನಿರ್ದೇಶಿಸಿದರು.

ಜಿಲ್ಲೆಯಾದ್ಯಂತ ಪ್ರವಾಸಿ ಸ್ಥಳಗಳಲ್ಲಿ ಸೈನೇಜ್ ಬೋರ್ಡ್‌ಗಳನ್ನು ಅಳವಡಿಸುವಂತೆ ತಿಳಿಸಿದ ಅವರು, ಕಾರವಾರದ ಕಡಲತೀರದಲ್ಲಿರುವ ಯುದ್ದ ನೌಕೆ ಮತ್ತು ಯುದ್ಧ ವಿಮಾನದ ಮಾಹಿತಿಯನ್ನು ಒಳಗೊಂಡ ಕ್ಯೂರ್ ಆರ್ ಕೋಡ್ ರಚಿಸಿ, ಸಾಮಾಜಿಕ ಮಾಧ್ಯಮಗಳ ಮೂಲಕ ಹೆಚ್ಚಿನ ಪ್ರಚಾರ ಒದಗಿಸಲು ಕ್ರಮ ಕೈಗೊಳ್ಳುವಂತೆ ತಿಳಿಸಿದರು.

ಸಭೆಯಲ್ಲಿ ಜಿ.ಪಂ.ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ದೀಪನ್, ಉಪ ವಿಭಾಗಾಧಿಕಾರಿ ಶ್ರವಣಕುಮಾರ್, ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ, ತರಬೇತಿ ನಿರತ ಐ.ಎ.ಎಸ್. ಅಧಿಕಾರಿ ಝೂಫಿಶಾನ್ ಹಕ್, ಹೆಚ್ಚುವರಿ ಪೋಲೀಸ್ ವರಿಷ್ಠಾಧಿಕಾರಿ ಕೃಷ್ಣಮೂರ್ತಿ , ಪ್ರವಾಸೋದ್ಯಮ ಇಲಾಖೆ ಉಪ ನಿರ್ದೇಶಕಿ ಮಂಗಳಗೌರಿ ಭಟ್ ಹಾಗೂ ವಿವಿಧ ಅಧಿಕಾರಿಗಳು ಹಾಜರಿದ್ದರು.

# ಎಸ್‌ಎಲ್ ಭೈರಪ್ಪ ನುಡಿ ನಮನ ಕಾರ್ಯಕ್ರಮ




**ಮೂಡಲಗಿ:** ಸಿರಿ ಸಂಗಮ ಸಮೀತಿ ಖಾನಟ್ಟಿ ಮತ್ತು ಸಾಯಿ ಸಿದ್ಧೇಶ್ವರ ಪೌಂಡೇಶನ್ ಬೆಳಗಾವಿ ಇವುಗಳ ಸಂಯುಕ್ತ ಆಶ್ರಯದಲ್ಲಿ ಸಮೀಪದ ಖಾನಟ್ಟಿ ಗ್ರಾಮದ ಸಿರಿ ಸಂಗಮ ಕಾರ್ಯಾಲಯದಲ್ಲಿ ಖ್ಯಾತ ಕಾದಂಬರಿಕಾರ ಎಸ್ ಎಲ್ ಭೈರಪ್ಪ ನುಡಿ ನಮನ ಕಾರ್ಯಕ್ರಮ ಜರುಗಿತು,

ಯುವಕವಿ ಶಿವಲಿಂಗ ದಾನನ್ನವರ ಮಾತನಾಡಿ, ಈ ನಾಡಿನಲ್ಲಿ ಬಹುತೇಕ ಲೇಖಕರು ಕಾದಂಬರಿಗಳನ್ನು ಬರೆದಿದ್ದಾರೆ ಆದ್ರೆ ಬೈರಪ್ಪನವರ ಕಾದಂಬರಿಗಳನ್ನು ಓದುತ್ತಾ ಹೋದ್ರೆ ಈ ಮನುಷ್ಯ ಕಾದಂಬರಿ ಬರೆಲೆಂದೆ ಹುಟ್ಟಿದ್ದಾರೆನೊ ಎನ್ನುವಷ್ಟು ಅವರ ಬರವಣಿಗೆ ಸೊಗಸಾಗಿದೆ ಓದುಗರನ್ನು ಬಹುಬೇಗ ಹಿಡಿದಿಟ್ಟಕೊಳ್ಳುವಂತ ಅವರ ಬರವಣಿಗೆ ಶೈಲಿ ಬಹಳ ಅದ್ಭುತವಾದ್ದು ಇಂತಹ ಮಹಾನ ಕಾದಂಬರಿಕಾರ ಈ ನಾಡಿನಲ್ಲಿ ಜನಿಸಿದ್ದು ಕನ್ನಡಿಗರ ಪುಣ್ಯ, ಇಂತಹ ಕನ್ನಡದ ಶ್ರೇಷ್ಠ ಕಾದಂಬರಿಕಾರನನ್ನು ಕಳೆದುಕೊಂಡು ಈ ನಾಡಿಗೆ ದೊಡ್ಡ ನಷ್ಟವಾಗಿದೆ ಕನ್ನಡ ಸ್ವಾರಸ್ವತ ಲೋಕದ ನಡುಗಂಬವಂದು ಮುರಿದಂತಾಗಿದೆ ಎಂದರು. ಖಾನಟ್ಟಿಯ ಶಿವಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಬಸಲಿಂಗ ನಿಂಗನೂರ ಮಾತನಾಡಿ. ಇಗಿನ ಮುಂದುವರೆದ ಕಾಲದಲ್ಲೂ ಬೈರಪ್ಪನವರಂತಹ ಕಾದಂಬರಿಕಾರರು ಓದುಗರನ್ನು ಹಿಡಿದಿಟ್ಟುಕೊಳ್ಳುವಲ್ಲಿ ಯಶಸ್ವಿಯಾದವರು ಇಂತಹ ಅಪರೂಪದ ಬರಹಗಾರನ ಪುಸ್ತಕಗಳನ್ನು ಇಂದಿನ ಯುವ ಜನಾಂಗ ಓದಿ ಬೈರಪ್ಪನವರ ವಿಚಾರಗಳನ್ನು ಮೈಗುಡಿಸಿಕೊಳ್ಳುವಂತಾಗಬೇಕೆಂದು ಹೇಳಿದರು.

ಇದೆ ಸಂದರ್ಭದಲ್ಲಿ ಖಾನಟ್ಟಿ ಗ್ರಾ.ಪಂ. ಉಪಾಧ್ಯಕ್ಷ ಗೋಪಾಲ ನಿಂಗನೂರ ಹಾಗೂ ಸತ್ಯಪ್ಪ ಡೋಣಿ. ಶಂಕರ್ ಸಣಸಟ್ಟಿ ಇದ್ದರು ಅಭಿಷೇಕ್ ಬಳಿಗಾರ ನಿರೂಪಿಸಿ ವಂದಿಸಿದರು.

## ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ

**ಕಾರವಾರ:** ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆಯ ಪ್ರಯುಕ್ತ ವಿಚಾರ ಸಂಕಿರಣ ಕಾರ್ಯಕ್ರಮವನ್ನು ಅಕ್ಟೋಬರ್ 15 ರಂದು ಬೆಳಗ್ಗೆ 10.30 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದ ಪೂರ್ವದಲ್ಲಿ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಬೆಳಗ್ಗೆ 9 ಗಂಟೆಗೆ ಜಾಥಕ್ಕೆ ಚಾಲನೆ ದೊರೆಯಲಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಕಿಟ್ ವಿತರಣೆ: ಅರ್ಜಿ ಆಹ್ವಾನ

**ಹುಬ್ಬಳ್ಳಿ:** ಕಾರ್ಮಿಕ ಇಲಾಖೆ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಧಾರವಾಡ ಜಿಲ್ಲೆಗೆ ಸಂಬಂಧಿಸಿದಂತೆ, ಸುರಕ್ಷಾ ಗೌಂಡಿ ಕಿಟ್ (3264), ಸುರಕ್ಷತಾ ಎಲೆಕ್ಟ್ರಿಷಿಯನ್ (812), ಸುರಕ್ಷತಾ ವೆಲ್ಡರ್(200), ಸುರಕ್ಷತಾ ಕಾರ್ಪೇಂಟರ್(634), ಸುರಕ್ಷತಾ ಪೆಂಟರ್(802), ಸುರಕ್ಷತಾ ಪ್ಲಂಬರ್ (260) ಕಿಟ್‌ಗಳನ್ನು ಅರ್ಹ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ವಿತರಿಸಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ನೋಂದಾಯಿತ ಕಟ್ಟಡ ಕಾರ್ಮಿಕರು ನವೀಕರಣಗೊಂಡ ಗುರುತಿನ ಚೀಟಿ, ಆಧಾರ ಕಾರ್ಡ, ಈ ಹಿಂದೆ ಕಿಟ್‌ಗಳನ್ನು ಪಡೆದಿರುವ ಬಗ್ಗೆ ಸ್ವಯಂ ಘೋಷಣಾ ಪತ್ರ ಮತ್ತು ಮೋಬೈಲ್ ಸಂಖ್ಯೆ ಸಲ್ಲಿಸಬೇಕು. ಅರ್ಜಿದಾರರು ನೇರವಾಗಿ ಸರ್ಕಾರಿ ಕಾರ್ಮಿಕ ಕಚೇರಿಗಳಿಗೆ ಅರ್ಜಿ ಸಲ್ಲಿಸಬೇಕು. ಮದ್ಯವರ್ತಿಗಳಿಗೆ ಅರ್ಜಿ ಸಲ್ಲಿಸಬಾರದು. ದಾಖಲಾತಿಗಳೊಂದಿಗೆ ಕಾರ್ಮಿಕ ಇಲಾಖೆಗಳ ಕಚೇರಿಗಳಾದ ಅಣ್ಣಿಗೇರಿ ಬಸ್ ನಿಲ್ದಾಣ ಹತ್ತಿರ, ನವಲಗುಂದ ಗವಿಮಠ, ಕಲಘಟಗಿ ಅನ್ವೇಕರ ಪ್ಲಾಟ್ ಜ್ಯೋತಿ ನಗರ, ಕುಂದಗೋಳ ಸರ್ಕಾರಿ ಇಲಾಖೆಗಳ ಸಂಕೀರ್ಣ ಕಟ್ಟಡ ಹಾಗೂ ಅಳ್ನಾವರ ಇಂದಿರಾ ನಗರ 1 ನೇ ಕ್ರಾಸ್ ಕಾರ್ಮಿಕ ನಿರೀಕ್ಷಕರ ಕಚೇರಿ ಮತ್ತು ಹಿರಿಯ ಕಾರ್ಮಿಕ ನಿರೀಕ್ಷಕರು 1,2,3 ಮತ್ತು 4ನೇ ವೃತ್ತ, ಹುಬ್ಬಳ್ಳಿ ಹಾಗೂ ಹಿರಿಯ ಕಾರ್ಮಿಕ ನಿರೀಕ್ಷಕರು 1&2ನೇ ವೃತ್ತ, ಧಾರವಾಡ ವೃತ್ತದ ಕಛೇರಿಗಳು, ಕಾರ್ಮಿಕ ಅಧಿಕಾರಿಯವರ ಕಛೇರಿ, ಉಪ ವಿಭಾಗ–1&2, ಹುಬ್ಬಳ್ಳಿ ಕಛೇರಿಗಳು ಹಾಗೂ ಸಹಾಯಕ ಕಾರ್ಮಿಕ ಆಯುಕ್ತರ ಕಛೇರಿ, ಕಾರ್ಮಿಕ ಭವನ, ಚೈತನ್ಯ ನಗರ, ಪ್ರಿಯದರ್ಶಿನಿ ಕಾಲೋನಿ, ಹುಬ್ಬಳ್ಳಿ ಕಚೇರಿಗಳಿಗೆ ನವೆಂಬರ್ 5 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ನಂತರ ಬಂದ ಅರ್ಜಿಗಳನ್ನು ಪುರಸ್ಕರಿಸಲಾಗುವುದಿಲ್ಲ ಹಾಗೂ ಬಂದಂತಹ ಅರ್ಜಿಗಳನ್ನು ನಿಯಮಾನುಸಾರ ಮತ್ತು ಜೇಷ್ಠತೆ ಅನುಸಾರ ಆಯ್ಕೆ ಮಾಡಿ ಕಿಟ್‌ಗಳನ್ನು ಹಂಚಿಕೆ ಮಾಡಲಾಗುವುದು. ಹೆಚ್ಚಿನ ಮಾಹಿತಿಗೆ ಕಾರ್ಮಿಕ ನಿರೀಕ್ಷಕರು, ಹಿರಿಯ ಕಾರ್ಮಿಕ ನಿರೀಕ್ಷಕರು ಮತ್ತು ಕಾರ್ಮಿಕ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಕಾರ್ಮಿಕ ಇಲಾಖೆಯ ಉಪ ವಿಭಾಗ 1&2ರ ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪದವಿ ಪ್ರವೇಶಕ್ಕೆ ಅ.15 ಕೊನೆಯ ದಿನ

**ವಿಜಯಪುರ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಪ್ರಾದೇಶಿಕ ಕೇಂದ್ರದಲ್ಲಿ 2025–26ನೇ ಸಾಲಿನ ಪದವಿ ಹಾಗೂ ಸ್ನಾತಕೋತ್ತರ ಪದವಿಗಳ ಜುಲೈ ಆವೃತ್ತಿಯ ಪ್ರವೇಶಾತಿ ಆರಂಭಗೊಂಡಿದ್ದು, ಆಸಕ್ತರು ಅಕ್ಟೋಬರ್ 15ರೊಳಗಾಗಿ ತಿತಿತಿ.ಇಂಣಟಥಿಣಡಿಣ. ಚಿಛಿ.ಟ ವೆಬ್‌ಸೈಟ್ ಅಥವಾ ಪ್ರಾದೇಶಿಕ ಕಚೇರಿಗೆ ನೇರವಾಗಿ ಭೇಟಿ ನೀಡಿ ಪ್ರವೇಶಾತಿ ಪಡೆಯಬಹುದಾಗಿದೆ.

ಬಿ.ಎ, ಬಿ.ಕಾಂ, ಬಿ.ಬಿ.ಎ, ಬಿ.ಸಿ.ಎ, ಬಿಎಸ್ಸಿ(ಐ.ಟಿ), ಬಿ.ಎಸ್ಸಿ (14 ಕಾಂಬಿನೇಷನ್ಸ್), ಬಿಎಸ್‌ಡಬ್ಲ್ಯೂ, ಬಿ.ಎಲ್.ಐ.ಎಸ್ಸಿ, ಎಂ.ಎ (14 ವಿಷಯಗಳಲ್ಲಿ), ಎಂ.ಕಾಂ, ಎಂ.ಬಿ.ಎ (8 ಕಾಂಬಿನೇಷನ್ಸ್), ಎಂ.ಎಲ್.ಐ.ಎಸ್ಸಿ, ಎಂ.ಎಸ್ಸಿ (17 ವಿಷಯಗಳಲ್ಲಿ), ಎಂ.ಸಿ.ಎ, ಎಂ.ಎಸ್.ಡಬ್ಲ್ಯೂ, ಪಿ.ಜಿ ಸರ್ಟಿಫಿಕೇಟ್ ಪ್ರೋಗ್ರಾಮ್ಸ್, ಡಿಪ್ಲೊಮಾ ಪ್ರೋಗ್ರಾಮ್ಸ್ ಹಾಗೂ ಸರ್ಟಿಫಿಕೇಟ್ ಪ್ರೋಗ್ರಾಮ್ಸ್‌ಗಳಿಗೆ ಪ್ರವೇಶಾತಿ ಪಡೆಯಬಹುದಾಗಿದೆ.

ಈ ಕುರಿತು ಹೆಚ್ಚಿನ ಮಾಹಿತಿಗಾಗಿ ವಿಜಯಪುರ ನಗರದ ನ್ಯಾಟಲೈಟ್ ಬಸ್ ನಿಲ್ದಾಣದ ಹತ್ತಿರ ಅಂಬಾ ಭವಾನಿ ದೇವಸ್ಥಾನದ ಎದುರಿರುವ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಪ್ರಾದೇಶಿಕ ಕೇಂದ್ರ ಅಥವಾ ಮೊಬೈಲ್ ಸಂಖ್ಯೆ 9483628267, 9483920065, 7892550053 ಹಾಗೂ 9110256738 ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಪ್ರತಿ ಎಕರೆಗೆ 50 ಸಾವಿರ ಪರಿಹಾರಕ್ಕೆ ಆಗ್ರಹ

**ತಾಳಿಕೋಟೆ:** ಕಳೆದ ತಿಂಗಳಾಂತ್ಯದಿಂದ ತಾಳಿಕೋಟೆ ತಾಲೂಕಿನಲ್ಲಿ ವರುಣನ ಆರ್ಭಟಕ್ಕೆ ತೊಗರಿ, ಹತ್ತಿ, ಅಲ್ಲದೇ ಇನ್ನಿತರ ಎಲ್ಲ ಬೆಳೆಗಳು ನೀರಿನಲ್ಲಿ ನಿಂತು ಸಂಪೂರ್ಣ ನಾಶವಾಗಿ ಹೋಗಿವೆ ಹತ್ತಿ ಬೆಳೆಯು ತಾಮ್ರ ರೋಗಕ್ಕೆ ತುತ್ತಾಗಿ ಕಾಯಿ ಒಡೆಯುವದೇ ನಿಂತು ನಾಶವಾಗಿ ಹೋಗಿದೆ ಈ ಬೆಳೆ ಹಾನಿಯ ಬಗ್ಗೆ ಜಂಟಿ ಸಮಿಕ್ಷೆ ನೆಪ ಹೇರುವದು ಸರಿಯಲ್ಲಾ ಕೂಡಲೇ ಪ್ರತಿ ಎಕರೆಗೆ 50 ಸಾವಿರ ರೂ. ಸರ್ಕಾರವು ಪರಿಹಾರ ಘೋಷಿಸಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸಂಘಟನೆಯ ಜಿಲ್ಲಾ ಅಧ್ಯಕ್ಷ ಸಂಗಮೇಶ ಸಗರ ಅವರು ಒತ್ತಾಯಿಸಿದರು.



ಶುಕ್ರವಾರರಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ತಹಶಿಲ್ದಾರರ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿ ಮಾತನಾಡುತ್ತಿದ್ದ ಅವರು ಜಂಟಿ ಸಮೀಕ್ಷೆ ನೆಪದಲ್ಲಿ ಯಾವುದೇ ಸಮಯವನ್ನು ಹಾಳು ಮಾಡದೆ ತಾಲೂಕಿನ ಪ್ರತಿಯೊಂದು ಗ್ರಾಮದ ಪ್ರತಿಯೊಬ್ಬ ರೈತರಿಗೂ ಒಣ ಬೇಸಾಯಕ್ಕೆ 50 ಸಾವಿರ ಹಾಗೂ ನೀರಾವರಿ ಭೂಮಿಗೆ ಒಂದು ಲಕ್ಷ ರೂಪಾಯಿ ಹಾಗೆ ಬಹು ವಾರ್ಷಿಕ ಬೆಳೆಗಳಿಗೆ 2ಲಕ್ಷ ಪರಿಹಾರವನ್ನು ಕೊಡಬೇಕೆಂದು ಈ ಮೂಲಕ ಜಿಲ್ಲಾಡಳಿತಕ್ಕೆ ಹಾಗೂ ರಾಜ್ಯ ಸರ್ಕಾರಕ್ಕೆ ಒತ್ತಾಯ ಮಾಡುತ್ತಿದ್ದೇವೆ ಎಂದರು.

ವಿಪರೀತ ಮಳೆಯಿಂದಾಗಿ ತಾಲೂಕಿನ ಕೃಷಿ ಬೆಳೆಗಳಾದ ತೊಗರಿ ಹತ್ತಿ ಮೆಕ್ಕೆಜೋಳ ಸಜ್ಜಿ ಸೇರಿದಂತೆ ಸಮಸ್ತ ಬೆಳೆಗಳು ಹಾಳಾಗಿವೆ ದ್ರಾಕ್ಷಿ ದಾಳಿಂಬ್ರಿ ಲಿಂಬೆ, ಬಾಳೆ ಸೇರಿದಂತೆ ಎಲ್ಲ ಬೆಳೆಗಳಲ್ಲಿ ನೀರು ನಿಂತು ಹಾಳಾಗಿವೆ ಆದ್ದರಿಂದ ಯಾವುದೇ ಜಂಟಿ ಸಮೀಕ್ಷೆ ವೈಮಾನಿಕ ಸಮೀಕ್ಷೆ ಎಂದು ನೆಪ ಹೇಳದೆ 15 ದಿನದ ಒಳಗಾಗಿ ಜಿಲ್ಲೆಯ ಎಲ್ಲರಿಗೂ ಪರಿಹಾರ ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿದ ಅವರು ಸಮಸ್ತ ಬೆಳೆಗಳು ಕೂಡ ನಷ್ಟಗೊಂಡಿರುವ ಹಿನ್ನೆಲೆಯಲ್ಲಿ ಯಾರಿಗೂ ತಾರತಮ್ಯ ಮಾಡದೆ ಎಲ್ಲರಿಗೂ ನಷ್ಟ ಪರಿಹಾರವನ್ನು ಹಾಕಬೇಕು ಅದೇ ರೀತಿಯಾಗಿ ಫಸಲು ಭೀಮಾ ಯೋಜನೆಯ ವಿಮೆವೂ ಕೂಡ ಆದಷ್ಟು ಬೇಗನೆ ಕೊಡಬೇಕೆಂದರು.

ತಾಲೂಕ ಅಧ್ಯಕ್ಷರಾದ ಶ್ರೀಶೈಲ್ ವಾಲಿಕಾರ ಅವರು ಮಾತನಾಡಿ ಭೀಮೆ, ಕೃಷ್ಣಾ ಹಾಗೂ ಡೋಣಿ ನದಿಯ ಪ್ರವಾಹದಿಂದಾಗಿ ಸಾಕಷ್ಟು ರೈತರ ಕೃಷಿ ಭೂಮಿಗಳ ಬೆಳೆಗಳು ಹಾಳಾಗಿರುವ ಜೊತೆಗೆ ಮನೆ ಮಠಗಳು ಕೂಡ ಬಿದ್ದು ಹಲವಾರು ಪ್ರಾಣಿಗಳು ಕೂಡ ನೀರಿನಲ್ಲಿ ಕೊಚ್ಚಿಕೊಂಡು ಹೋಗಿವೆ ಇದಕೆಲ್ಲ ಪರಿಹಾರ ನೀಡಬೇಕೆಂದು ಆಗ್ರಹ ಮಾಡುತ್ತಿದ್ದೇವೆ ಒಂದು ವೇಳೆ ತಡವಾದರೆ ಉಗ್ರ ಹೋರಾಟ ಮಾಡಲಾಗುವುದು ಎಂದರು.

ಮಹಿಳಾ ಘಟಕದ ತಾಲೂಕಾ ಅಧ್ಯಕ್ಷರಾದ ಸುಜಾತಾ ಅವಟಿ ಅವರು ಮಾತನಾಡಿದರು. ಮನವಿ ಸ್ವೀಕರಿಸಿ ಮಾತನಾಡಿದ ತಹಸೀಲ್ದಾರ್ ಅವರು ಈಗಾಗಲೇ ಮೊದಲೇ ಹಂತದ ಡೋಣಿನದಿಯಿಂದ ನಷ್ಟಗೊಂಡ ರೈತರಿಗೆ ಪರಿಹಾರಕ್ಕೆ ಗುರುತಿಸಲಾಗಿತ್ತು, ಮತ್ತೆ ಇತ್ತೀಚಿಗೆ ಹೆಚ್ಚಿನ ಮಳೆ ಉಂಟಾಗಿ ಅನೇಕ ರೈತರ ಜಮೀನುಗಳಲ್ಲಿ ನೀರು ನಿಂತು ನಷ್ಟಗೊಂಡಿರುವ ಕುರಿತು ಪ್ರಥಮ ವರದಿಯನ್ನು ಆಯಾ ಗ್ರಾಮ ಪಂಚಾಯತ್ ಅಥವಾ ತಲಾಟಿ ಕಚೇರಿ ಮುಂದೆ ಅಂಟಿಸಲಾಗಿದೆ. ಇನ್ನು ಯಾವ್ ರೈತರು ನಷ್ಟಗೊಂಡವರು ಉಳಿದಿದ್ದರೆ ಅಂಥವರು ದಾಖಲೆಗಳನ್ನು ಕೊಡುವಂತೆ ತಿಳಿಸಿದರು.

ಈ ಸಮಯದಲ್ಲಿ ಬಾಗೇವಾಡಿ ತಾಲೂಕಾ ಅಧ್ಯಕ್ಷರಾದ ಮುದಕಣ್ಣ ಬಾಗೇವಾಡಿ, ನಿಂಗಣ್ಣ ಸುಣದಳ್ಳಿ, ಈರಯ್ಯ ಅಲಾಳಮಠ, ಶಿವಶಂಕ್ರಪ್ಪ ಸಜ್ಜನ್, ಲಿಂಗರಾಜ ಮೇಟಿ, ರಮೇಶಗೌಡ ವಡವಡಗಿ, ದೇವರೆಡ್ಡಿ ಬಿರಾದಾರ, ದೇವೀಂದ್ರಪ್ಪಗೌಡ್ ಪಾಟೀಲ್, ಮಹದೇವ್ಪಾಗೌಡ ಜಲಪುರ್, ದೇವಿಂದ್ರಪ್ಪಾಗೌಡ ಕೊನಾಳ, ಸಂಗನಗೌಡ ಬೆಂಡೆಗೊಂದಳ, ಈರಣ್ಣ ಸಿಂಪಿಗೆರೆ, ಮಡಿವಾಳಪ್ಪ ಸಿಂಪಿಗೆರೆ, ಶಿವಾಜಿ ಮೊಪಗಾರ, ಸಿದ್ದಪ್ಪತಳವಾರ್, ಅಪ್ಪಸಾಹೇಬ್ ಸಜ್ಜನ್, ಮುರ್ತುಜ ಹಳ್ಳದಮನಿ. ಮಲ್ಲು ಮುದನೂರ್, ಅಪ್ಪಯ್ಯ ಕಾರಕಳ್ಳಿಮಠ. ಶಿವಶಂಕರಪ್ಪ ಟಕಳಕ್ಕಿ, ಬಸವರಾಜ್ ನಾಟಿಕಾರ್, ಭೀಮಣ್ಣ ಸಜ್ಜನ, ಬೋರಮ್ಮ ಕುಂಬಾರ, ಸುಧಾ ಮಡ್ಡಿ, ದ್ರಾಕ್ಷಿಯಿಣಿ ಲಿಂಗದಳ್ಳಿ,ತ ರೇಣುಕಾ ಹಂಚಾಟೆ, ಲಕ್ಷ್ಮಿಬಾಯಿ ಸಜ್ಜನ ಸೇರಿದಂತೆ ನೂರಾರು, ರೈತರು ಇದ್ದರು.


## ಪೂರ್ವಭಾವಿ ಸಭೆ

**ಹಾವೇರಿ:** ಜಿಲ್ಲಾಡಳಿತದಿಂದ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಆಚರಣೆ ಕುರಿತು ಪೂರ್ವಭಾವಿ ಸಭೆ ಅಕ್ಟೋಬರ್ 15 ರಂದು ಬೆಳಿಗ್ಗೆ 11–30 ಗಂಟೆಗೆ ಜಿಲ್ಲಾಧಿಕಾರಿಗಳ ಕೋರ್ಟ್‌ಹಾಲ್‌ನಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಯೋಜಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಹಾಯವಾಣಿ ಸ್ಥಾಪನೆ

**ಹಾವೇರಿ:** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂ ಕರ್ನಾಟಕ ರಾಜ್ಯದ ನಾಗರೀಕರ ಸಾಮಾಜಿಕ ಶೈಕ್ಷಣಿಕ ಸ್ಥಿತಿಗತಿಗಳ ಸಮೀಕ್ಷೆ ಕುರಿತು ಸಲಹೆ, ಸೂಚನೆ ಮತ್ತು ದೂರುಗಳಿಗೆ ಸಂಬಂಧಿಸಿದಂತೆ ಶಿಗ್ಗಾಂವ ತಹಶೀಲ್ದಾರ ಕಚೇರಿಯಲ್ಲಿ ಸಹಾಯವಾಣಿ 08378–255044 ಆರಂಭಿಸಲಾಗಿದೆ ಎಂದು ಶಿಗ್ಗಾಂವ ತಹಶೀಲ್ದಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಾಲ್ಮೀಕಿ ಸಮುದಾಯ ಭವನ ನಿರ್ಮಾಣಕ್ಕೆ ಪ್ರಯತ್ನ




**ರಬಕವಿ–ಬನಹಟ್ಟಿ:** ರಬಕವಿ ಬನಹಟ್ಟಿ ಪ್ರದೇಶದಲ್ಲಿ ವಾಲ್ಮೀಕಿ ಸಮುದಾಯ ಭವನವನ್ನು ನಿರ್ಮಾಣ ಮಾಡಲು ಸೂಕ್ತ ಸ್ಥಳವನ್ನು ನೀಡುವ ನಿಟ್ಟಿನಲ್ಲಿ ಪ್ರಯತ್ನ ಮಾಡಲಾಗುವುದು ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ಅವರು ಈಚೇಗೆ ಇಲ್ಲಿನ ನೀಲಕಂಠೇಶ್ವರ ಸಮುದಾಯ ಭವನದಲ್ಲಿ ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ರಬಕವಿ ಬನಹಟ್ಟಿ ತಾಲ್ಲೂಕು ಘಟಕದ ಆಶ್ರಯದಲ್ಲಿ ನಡೆದ ವಾಲ್ಮೀಕಿ ಜಯಂತ್ಯುತ್ಸವದ ಅಂಗವಾಗಿ ನಡೆದ ಸಮಾರಂಭದಲ್ಲಿ ಮಾತನಾಡಿದರು. ಜಗತ್ತಿಗೆ ಆಧ್ಯಾತ್ಮಿಕ ಜ್ಞಾನವನ್ನು ನೀಡಿದವರು ವಾಲ್ಮೀಕಿಯವರು. ಸಿಂಧೂರ ಲಕ್ಷಣ, ಮದಕರಿ ನಾಯಕ, ಚಿತ್ರದುರ್ಗದ ನಾಯಕರು, ಹಲಗಲಿಯ ಬೇಡರು, ಏಕಲವ್ಯ, ಶಬರಿ ಮತ್ತು ರಾಜಾ ವೆಂಕಟಪ್ಪ ನಾಯಕ ಇವರೆಲ್ಲರೂ ವಾಲ್ಮೀಕಿ ಇವರ ತತ್ವ ಆದರ್ಶಗಳನ್ನು ಸಮುದಾಯದ ಜನರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ಸ್ಥಳೀಯ ಎಸ್ ಆರ್ ಎ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಎಫ್. ಬಿ. ತಳವಾರ ಮಾತನಾಡಿ, ನಾರದ ಮುನಿಗಳ ಮೂಲಕ ಮನಸ್ಸನ್ನು ಪರಿವರ್ತನೆ ಮಾಡಿಕೊಂಡು ಪಾಪದಿಂದ ಮುಕ್ತಿಯನ್ನು ಪಡೆದವರು. ನಾರದ ಮುನಿಗಳೇ ಅವರಿಗೆ ವಾಲ್ಮೀಕಿ ಎಂದು ನಾಮಕರಣ ಮಾಡಿದರು. ವಾಲ್ಮೀಕಿ ನಾಯಕ ಸಮುದಾಯದವರು ತ್ಯಾಗ ಧೈರ್ಯ ಮತ್ತು ಬಲಿದಾನಕ್ಕೆ ಹೆಸರುವಾಸಿಯಾದವರು ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಶೀರಾಯ ನಾಯಕ ಮಾತನಾಡಿದರು.

ವೇದಮೂರ್ತಿ ಶ್ರೀಶೈಲಯ್ಯ ಹಿರೇಮಠ, ಜ್ಯೋತಿಷಿ ಶಂಕರ ಗೂರೂಜಿ, ತಹಶೀಲ್ದಾರ್ ಗಿರೀಶ ಸ್ವಾದಿ, ವಿದ್ಯಾ ಧಬಾಡಿ, ದಾನಪ್ಪ ಹುಲಜತ್ತಿ, ಚಿದಾನಂದ ಮಠಪತಿ, ಬಸವರಾಜ ಕೊಣ್ಣೂರ, ಕವಿತಾ ಸಿದ್ದು ಕೊಣ್ಣೂರ, ಕಾಡಪ್ಪ ಮಂಟೂರ, ಪರಸಪ್ಪ ನಾಯಕ, ಹನಮಂತ ನಾಯಕ, ಕಾಶಿನಾಥ ಬಡಚಿ, ಪ್ರಭು ಅಮಾತ್ಯನವರ, ಸುರೇಶ ವಾಲೀಕಾರ, ರಮೇಶ ಮೆಳ್ಳಿಗೇರಿ, ಮಲ್ಲಪ್ಪ ಜಕನೂರ, ರಾಮಪ್ಪ ಚಿನಗುಂಡಿ ಸೇರಿದಂತೆ ರಬಕವಿ ಬನಹಟ್ಟಿ ತಾಲ್ಲೂಕಿನ ವಾಲ್ಮೀಕಿ ನಾಯಕ ಸಮುದಾಯದವರು ಇದ್ದರು.


# ಸರ್ವ-ಧರ್ಮ ಮಹಾಸಂಗಮ: ಪರಿಕರ ಬಿಡುಗಡೆ

**ರಬಕವಿ–ಬನಹಟ್ಟಿ:** ಬರುವ ದಿ.13 ರಂದು ಸಮೀಪದ ಬಂಡಿಗಣಿಯ ಬಸವಗೋಪಾಲ ನೀಲಮಾಣಿಕಮಠದಲ್ಲಿ ಜರುಗುವ ವಿಶ್ವಶಾಂತಿಗಾಗಿ ಸರ್ವ–ಧರ್ಮ ಮಹಾಸಂಗಮ ಕಾರ್ಯಕ್ರಮದ ಪರಿಕರಗಳನ್ನು ಚಕ್ರವರ್ತಿ ದಾನೇಶ್ವರಶ್ರೀಗಳು ಬಿಡುಗಡೆಗೊಳಿಸಿದರು.

ಬಂಡಿಗಣಿಯ ಬಸವಗೋಪಾಲ ನೀಲಮಾಣಿಕಮಠದಲ್ಲಿ ಕಾರ್ಯಕ್ರಮದ ಪರಿಕರ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಶ್ರೀಮಠದ ಆವರಣದಲ್ಲಿ ಸೋಮವಾರ ಬೆಳಿಗ್ಗೆ 10 ಗಂಟೆಗೆ ನಾಡಿನ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆಂದರು.

ಮುಖ್ಯ ಅತಿಥಿಗಳಾಗಿ ಸಚಿವರುಗಳಾದ ಆರ್.ಬಿ. ತಿಮ್ಮಾಪೂರ, ಎಚ್.ಕೆ. ಪಾಟೀಲ, ಸತೀಶ ಜಾರಕಿಹೊಳಿ, ಶಿವರಾಜ ತಂಗಡಗಿ, ಎಂ.ಬಿ. ಪಾಟೀಲ, ಜಮೀರ ಅಹ್ಮದ ಖಾನ್, ರಮೇಶ ಕುಮಾರ, ಸಿದ್ದು ಸವದಿ, ಲಕ್ಷ್ಮಣ ಸವದಿ, ಸಂಸದ ಪಿ.ಸಿ. ಗದ್ದಿಗೌಡರ ಆಗಮಿಸಲಿದ್ದಾರೆ.

ಅತಿಥಿಗಳಾಗಿ ಈರಣ್ಣ ಕಡಾಡಿ, ಸುನೀಲಗೌಡ ಪಾಟೀಲ, ಎಚ್.ವಾಯ್. ಮೇಟಿ, ನಾರಾಯಣಸಾ ಬಾಂಡಗೆ, ಜೆ.ಟಿ. ಪಾಟೀಲ, ವಿಜಯಾನಂದ ಕಾಶಪ್ಪನವರ, ಜಗದೀಶ ಗುಡಗುಂಟಿಮಠ, ವಿಶ್ವಾಸ ವೈದ್ಯ, ದುರ್ಯೋಧನ ಐಹೊಳಿ, ಮಹೇಶ ತಮ್ಮಣ್ಣವರ, ಭೀಮಸೇನ ಚಿಮ್ಮನಕಟ್ಟಿ, ಪ್ರಕಾಶ ಹುಕ್ಕೇರಿ, ಉಮಾಶ್ರೀ, ಪಿ.ಎಚ್. ಪೂಜಾರ, ಎಸ್.ಜಿ. ನಂಜಯ್ಯನಮಠ, ಆನಂದ ನ್ಯಾಮಗೌಡ, ಪಿ.ರಾಜೀವ್, ಸಿದ್ದು ಕೊಣ್ಣುರ, ಶಂಕರ ತಿಮ್ಮಾಪೂರ ಸೇರಿದಂತೆ ಅನೇಕರು ಆಗಮಿಸಲಿದ್ದಾರೆಂದು ತಿಳಿಸಿದರು.



ವಿಶೇಷ ಆಮಂತ್ರಿತರಾಗಿ ಹೆಸರಾಂತ ಸಂಗೀತ ಸಂಯೋಜಕ, ಸಾಹಿತಿ ಹಂಸಲೇಖ ಅಗಮಿಸಲಿದ್ದಾರೆ. ಖ್ಯಾತ ಬಾಲ ಗಾಯಕಿ ಕುಮಾರಿ ದಿಯಾ ಹೆಗಡೆ ಹಾಗು ಪ್ರವೀಣ ಗಸ್ತಿ ತಂಡದಿಂದ ಸಂಗೀತ ಕಾರ್ಯಕ್ರಮ ಜರುಗಲಿದೆಯೆಂದರು.

ಸುಮಾರು 2 ಲಕ್ಷಕ್ಕೂ ಅಧಿಕ ಜನರು ಸೇರಲಿದ್ದು, ಕಾರ್ಯಕ್ರಮ ಐತಿಹ್ಯಕ್ಕೆ ಸಾಕ್ಷಿಯಾಗಲಿದೆಯೆಂದು ದಾನೇಶ್ವರಶ್ರೀಗಳು ತಿಳಿಸಿದರು. ಇದೇ ಸಂದರ್ಭ ಶಿವಾನಂದ ಹಿರೇಮಠ, ಅಲ್ಲಪ್ಪ ಗಣೇಶನವಾಡಿ ಮಹಾಲಿಂಗ ದುರದಂಡಿ, ಭೀಮಪ್ಪ ಇಂಗಳಗಿ ಸೇರಿದಂತೆ ಅನೇಕರಿದ್ದರು.

# ರೋಡ್ ಸೈಕ್ಲಿಂಗ್: ಹೊನ್ನಪ್ಪ ರಾಷ್ಟ್ರಮಟ್ಟಕ್ಕೆ ಆಯ್ಕೆ

**ಮಹಾಲಿಂಗಪುರ:** ಸಮೀಪದ ಮಾರಾಪುರ ಗ್ರಾಮ ನಿವಾಸಿ ಹೊನ್ನಪ್ಪ ಚಿದಾನಂದ ಧರ್ಮಟ್ಟಿ ಬೆಳಗಾವಿಯಲ್ಲಿ ಇತ್ತೀಚೆಗೆ ನಡೆದ 16ನೇ ರಾಜ್ಯಮಟ್ಟದ ರೋಡ್ ಸೈಕ್ಲಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಭಾಗವಹಿಸಿ ದ್ವಿತೀಯ ಸ್ಥಾನ ಪಡೆದು ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದಾನೆ.



ರಾಮದುರ್ಗ ತಾಲೂಕಿನ ಚಂದರಗಿ ಕ್ರೀಡಾಶಾಲೆಯಲ್ಲಿ ಪಿಯುಸಿ ಪ್ರಥಮ ವರ್ಷದಲ್ಲಿ ಓದುತ್ತಿರುವ ಹೊನ್ನಪ್ಪ ಶಾಲೆಯನ್ನು ಪ್ರತಿನಿಧಿಸಿ 16 ವಯೋಮಿತಿಯ ಬಾಲಕರ ರಾಜ್ಯಮಟ್ಟದ ರೋಡ್ ಸೈಕ್ಲಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಭಾಗವಹಿಸಿ 21.12 ನಿಮಿಷದಲ್ಲಿ ಗುರಿ ತಲುಪಿ ದ್ವಿತೀಯ ಸ್ಥಾನ ಪಡೆದಿದ್ದಾನೆ. ಕೇವಲ 11 ಸೆಕೆಂಡ್ ನಲ್ಲಿ ಪ್ರಥಮ ಸ್ಥಾನ ಕೈ ತಪ್ಪಿದೆ. ಈ ಹಿಂದೆ ವಿಜಯಪುರದಲ್ಲಿ ನಡೆದಿದ್ದ ರಾಷ್ಟ್ರಮಟ್ಟದ ರೋಡ್ ಸೈಕ್ಲಿಂಗ್ ಸ್ಪರ್ಧೆಯಲ್ಲಿ ಭಾಗವಹಿಸಿ 14 ವಯೋಮಿತಿಯ ಬಾಲಕರ ವಿಭಾಗದಲ್ಲಿ ಬೆಳ್ಳಿ ಪದಕ ಪಡೆದಿದ್ದನ್ನು ಸ್ಮರಿಸಬಹುದು.

ಬಾಗಲಕೋಟೆ ಜಿಲ್ಲೆಗೂ ಮತ್ತು ರಬಕವಿ ಬನಹಟ್ಟಿ ತಾಲೂಕಿಗೂ ಗಡಿಯಲ್ಲಿರುವ ಕೊನೆಯ ಗ್ರಾಮ ಮಾರಾಪುರದಲ್ಲಿ ರೈತನ ಮಗನಾಗಿ ಸೈಕ್ಲಿಂಗ್ ಕ್ರೇಜ್ ಬೆಳೆಸಿಕೊಂಡು ಕೊರತೆಗಳ ಮಧ್ಯೆಯೂ ಸಾಧನೆಯ ಸೈಕಲ್ ತುಳಿಯುತ್ತಿರುವ ಹೊನ್ನಪ್ಪನಿಗೆ ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡುವ ಆಸೆ ಇದೆ. ಆದರೆ ಪ್ರತಿಸ್ಪರ್ಧಿಗಳ ಬಳಿ ಇರುವಂಥ ಹೈಟೆಕ್ ಸೈಕಲ್ ಇಲ್ಲದ್ದರಿಂದ ಕ್ಷಣಗಳ ಅಂತರದಲ್ಲಿ ಪ್ರಥಮ ಸ್ಥಾನ ಕೈ ಜಾರುತ್ತಿದೆ. ಉತ್ತಮ ಗುಣಮಟ್ಟದ ಸೈಕಲ್ ಸಿಕ್ಕರೆ ಖಂಡಿತ ಚಾಂಪಿಯನ್ ಆಗುತ್ತೇನೆ ಎಂದು ಆಶಯ ವ್ಯಕ್ತಪಡಿಸಿದ್ದಾನೆ.

# ಅ.15ರಂದು ಜಿಲ್ಲಾ ಮಟ್ಟದ ಯುವಜನೋತ್ಸವ

**ವಿಜಯಪುರ:** ಜಿಲ್ಲಾಡಳಿತ, ಜಿಲ್ಲಾಪಂಚಾಯತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬಿ.ಎಲ್.ಡಿ.ಇ ಅಸೋಸಿಯೇಶನ್ ಎ.ವಿ.ಎಸ್. ಆಯುರ್ವೇದ ಮಹಾವಿದ್ಯಾಲಯ ಹಾಸ್ಪಿಟಲ್ ಮತ್ತು ರಿಸರ್ಚ ಸೆಂಟರ್ ಹಾಗೂ ನೆಹರು ಯುವ ಕೇಂದ್ರ ಹಾಗೂ ರಾಷ್ಟ್ರೀಯ ಸೇವಾ ಯೋಜನೆ ಇವರ ಸಂಯುಕ್ತಾಶ್ರಯದಲ್ಲಿ ಪ್ರಸಕ್ತ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರವನ್ನು ಬಿ.ಎಲ್.ಡಿ.ಇ ಅಸೋಸಿಯೇಶನ್ ಎ.ವಿ.ಎಸ್. ಆಯುರ್ವೇದ ಮಹಾವಿದ್ಯಾಲಯದ ವಾಗ್ಭಟ ಸಭಾಂಗಣದಲ್ಲಿ ಅಕ್ಟೋಬರ್ 15ರಂದು ಆಯೋಜಿಸಲಾಗಿದೆ.

ಅಂದು ಬೆಳಿಗ್ಗೆ 10.30ಕ್ಕೆ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಂ.ಬಿ.ಪಾಟೀಲ ಅವರು ಕಾರ್ಯಕ್ರಮವನ್ನು ಉದ್ಘಾಟನೆ ಮಾಡಲಿದ್ದು, ಶಾಸಕರಾದ ಬಸನಗೌಡ ಆರ್.ಪಾಟೀಲ (ಯತ್ನಾಳ) ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಜವಳಿ ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಎಸ್.ಪಾಟೀಲ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ರವಿಕುಮಾರ ಎನ್., ಸರ್ಕಾರದ ನವದೆಹಲಿ ವಿಶೇಷ ಪ್ರತಿನಿಧಿ–2 ಪ್ರಕಾಶ ಹುಕ್ಕೇರಿ, ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜೆಂಟ್ ನಿಯಮಿತ ಅಧ್ಯಕ್ಷರಾದ ಶಾಸಕ ಅಪ್ಪಾಜಿ ಸಿ.ಎಸ್.ನಾಡಗೌಡ, ಸಂಸದ ರಮೇಶ ಜಿಗಜಿಣಗಿ, ಡಾ.ಸುಧಾ ಮೂರ್ತಿ, ಶಾಸಕರುಗಳಾದ ಯಶವಂತರಾಯಗೌಡ ವ್ಹಿ.ಪಾಟೀಲ, ಹಣಮಂತ ಆರ್.ನಿರಾಣಿ, ಸುನೀಲಗೌಡ ಪಾಟೀಲ, ಪಿ.ಎಚ್.ಪೂಜಾರ, ವಿಠ್ಠಲ ಧೋಂಡಿಬಾ ಕಟಕದೊಂಡ, ಭೀಮನಗೌಡ (ರಾಜುಗೌಡ) ಬಸನಗೌಡ ಪಾಟೀಲ, ಅಶೋಕ ಮನಗೂಳಿ, ಕೇಶವಪ್ರಸಾದ ಎಸ್., ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷೆ ಕಾಂತಾ ನಾಯ್ಕ, ಕರ್ನಾಟಕ ಬಾಲವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಮಹಾನಗರ ಪಾಲಿಕೆ ಮಹಾಪೌರ ಮಡಿವಾಳಪ್ಪ ಕರಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕನ್ನಾನ್ ಮುಶ್ರೀಫ್, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಇಲಿಯಾಸ ಬೋರಾಮಣಿ, ಬಿಎಲ್‌ಡಿಇ ಅಸೋಸಿಯೇಶನ್ ಆರ್ಯುವೇದ ಮಹಾವಿದ್ಯಾಲಯದ ಪ್ರಾಂಶುಪಾಲ ಅಶೋಕ ಪಾಟೀಲ ಅವರು ಭಾಗವಹಿಸಲಿದ್ದಾರೆ.



## ಕಬ್ಬಡಿ ಕ್ರೀಡಾಕೂಟ: ರಾಜ್ಯ ಮಟ್ಟಕ್ಕೆ ಆಯ್ಕೆ

**ಮೂಡಲಗಿ:** ಹಾರೂಗೇರಿಯ ಎಸ್ ಎಮ್ ನಾರಗೊಂಡ ಪದವಿ ಪೂರ್ವ ಮಹಾವಿದ್ಯಾಲಯಲ್ಲಿ ಹಮ್ಮಿಕೊಂಡ ಸನ್ 2025 26 ನೇ ಸಾಲಿನ ಚಿಕ್ಕೋಡಿ ಶೈಕ್ಷಣಿಕ ಜಿಲ್ಲಾ ಮಟ್ಟದ ಕಬ್ಬಡಿ ಕ್ರೀಡಾಕೂಟದಲ್ಲಿ ತಾಲೂಕಿನ ಕಲ್ಲೋಳಿ ಗ್ರಾಮದ ಬಸವೇಶ್ವರ ಶಿಕ್ಷಣ ಸಂಸ್ಥೆಯ ಪದವಿ ಪೂರ್ವ ಮಹಾವಿದ್ಯಾಲಯ ವಿದ್ಯಾರ್ಥಿಗಳು ಭಾಗವಹಿಸಿ ದ್ವಿತೀಯ ಸ್ಥಾನ ಪಡೆದುಕೊಂಡು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ವಿದ್ಯಾರ್ಥಿಗಳಿಗೆ ಸಂಸ್ಥೆಯ ಅಧ್ಯಕ್ಷ ರಮೇಶ ಬೆಳಕೂಡ ಆಡಳಿತ ಅಧಿಕಾರಿ ಪ್ರಕಾಶ ಗರಗಟ್ಟಿ ದೈಹಿಕ ಶಿಕ್ಷಣ ಸಂಯೋಜಕ ಶಾನೂರ ದಾಸನಾಳ ಅಭಿನಂದಿಸಿದ್ದಾರೆ.

## ಅ. 14 ರಂದು ಪೂರ್ವಭಾವಿ ಸಭೆ

**ಧಾರವಾಡ:** ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಅಕ್ಟೋಬರ್ 23 ರಂದು, ಕಿತ್ತೂರು ರಾಣಿ ಚನ್ನಮ್ಮ ಜಯಂತಿಯನ್ನು ಆಚರಿಸುವ ಹಿನ್ನಲೆಯಲ್ಲಿ ಜಯಂತಿಯ ಪೂರ್ವಭಾವಿ ಸಭೆಯನ್ನು ಅಕ್ಟೋಬರ್ 14, 2025 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ನೂತನ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಸದರಿ ಸಭೆಗೆ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಸಮಾಜದ ಮುಖಂಡರು ಭಾಗವಹಿಸಿ ಸಲಹೆ, ಸೂಚನೆ ನೀಡಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

# ರಜೆ ವಿಸ್ತರಣೆ: ಶಿಕ್ಷಕರ ಸಂಘದಿಂದ ಅಭಿನಂದನೆ

**ಅಥಣಿ:** ಕಳೆದ 15 ದಿನಗಳಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಪಾಲ್ಗೊಂಡ ರಾಜ್ಯದ ಶಿಕ್ಷಕರಿಗೆ ದಸರಾ ರಜೆಯನ್ನು ಹತ್ತು ದಿನ ಮುಂದುವರಿಸಿರುವುದಕ್ಕೆ ಕಾಗವಾಡ ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎಂ ಜಿ ಸಂಕಪಾಳ ಹಾಗೂ ಪ್ರಧಾನ ಕಾರ್ಯದರ್ಶಿ ಕೆ ಎನ್ ಗಾಣಿಗೇರ ಅಭಿನಂದನೆ ತಿಳಿಸಿದರು. ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಕಳೆದ ದಸರಾ ರಜೆಯಿಂದ ಸಮೀಕ್ಷೆಯಲ್ಲಿ ಪಾಲ್ಗೊಂಡ ಶಿಕ್ಷಕರಿಗೆ ಹೆಚ್ಚುವರಿಯಾಗಿ ಅವಧಿ ಬೇಕಾಗಿರುವುದನ್ನು ಮನಗಂಡು ರಜೆ ಅವಧಿ ವಿಸ್ತರಣೆ ಮಾಡಿ ಹಾಗೂ ಮಹಿಳಾ ನೌಕರರಿಗೆ ವೇತನ ಸಹಿತ ಒಂದು ದಿನದ ಋತುಚಕ್ರ ರಜೆ ಮಂಜೂರಿಸಿದ ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ, ಉಪಮುಖ್ಯಮಂತ್ರಿಗಳಾದ ಡಿ ಕೆ ಶಿವಕುಮಾರ, ಸಚಿವ ಮಧು ಬಂಗಾರಪ್ಪ ಹಾಗೂ ಈ ರಜೆ ಮಂಜೂರಿಸಲು ಸತತವಾಗಿ ಶ್ರಮಿಸಿದ ವಿಧಾನ ಪರಿಷತ್ ಸದಸ್ಯರಾದ ಪುಟ್ಟಣ್ಣ,ಶಾಸಕ ರಾಜು ಕಾಗೆ ಸರ್ಕಾರದ ಪ್ರಧಾನ ಕಾರ್ಯದರ್ಶಿ ಶಾಲಿನಿ ರಜನಿ, ರಾಜ್ಯಾಧ್ಯಕ್ಷ ಚಂದ್ರಶೇಖರ್ ನುಗ್ಲಿ ಪ್ರಧಾನ ಕಾರ್ಯದರ್ಶಿ ಚೇತನ್ ಎಸ್, ಅವರಿಗೆ ಕಾಗವಾಡ ತಾಲೂಕು ಪ್ರಾಥಮಿಕ ತಾಲ್ಲೂಕು ಘಟಕದ ಪದಾಧಿಕಾರಿಗಳಿಂದ ಅಭಿನಂದನೆಗಳನ್ನು ತಿಳಿಸಿದರು.

### ಧಾರವಾಡ ಕೃಷಿ ವಿಶ್ವವಿದ್ಯಾಲಯದ 39ನೇ ಸಂಸ್ಥಾಪನಾ ದಿನಾಚರಣೆ

# ಕೃಷಿ ಪ್ರೋತ್ಸಾಹಿಸಲು ಖಾಸಗಿ ಕೃಷಿ ಕಾಲೇಜುಗಳ ಸ್ಥಾಪನೆಗೆ ಅವಕಾಶ

**ಧಾರವಾಡ:** ಕೃಷಿ ಕ್ಷೇತ್ರದಲ್ಲಿ ಸಂಶೋಧನೆ ಹಾಗೂ ಕೃಷಿ ವಿಸ್ತರಣಾ ಕಾರ್ಯಚಟುವಟಿಕೆಗಳನ್ನು ಉತ್ತೇಜಿಸಲು ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳು ನಿರಂತರವಾಗಿ ಸಂಶೋಧನಾ ಕಾರ್ಯಗಳನ್ನು ಕೈಗೊಳ್ಳುತ್ತಿವೆ. ಕೃಷಿ ವಿಶ್ವವಿದ್ಯಾಲಯಗಳಿಗೆ ಪೂರಕವಾಗಿ ಖಾಸಗಿ ಕೃಷಿ ಕಾಲೇಜುಗಳನ್ನು ಸ್ಥಾಪಿಸುವ ಮೂಲಕ ಕೃಷಿ ಶೈಕ್ಷಣಿಕ ಚಟುವಟಿಕೆಗಳನ್ನು ವಿಸ್ತರಿಸಿ, ಪ್ರೋತ್ಸಾಹಿಸಲು ರಾಜ್ಯ ಸರ್ಕಾರವು ಕ್ರಮ ವಹಿಸಿದೆ ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಅವರು ಹೇಳಿದರು.

ಅವರು ಶುಕ್ರವಾರ ಬೆಳಿಗ್ಗೆ ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ ಕೃಷಿ ವಿಶ್ವವಿದ್ಯಾಲಯದ 39 ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದರು.

ದೇಶದಲ್ಲಿ 70 ಕ್ಕೂ ಹೆಚ್ಚು ಕೃಷಿ ವಿಶ್ವವಿದ್ಯಾಲಯಗಳಿವೆ. ಕರ್ನಾಟಕದ ಕೃಷಿ ವಿಶ್ವವಿದ್ಯಾಲಯಗಳು ರಾಷ್ಟ್ರಕ್ಕೆ ಮಾದರಿಯಾಗುವ ಸಂಶೋಧನೆಗಳನ್ನು, ಉತ್ತಮ ಬೀಜದ ತಳಿಗಳನ್ನು ಸಂಶೋಧಿಸಿ ಕೃಷಿ ವಲಯಕ್ಕೆ ನೀಡಿವೆ. ವಿಶೇಷವಾಗಿ ಧಾರವಾಡ ಮತ್ತು ಬೆಂಗಳೂರು ಕೃಷಿ ವಿಶ್ವವಿದ್ಯಾಲಯಗಳು ಹೆಚ್ಚು ಶ್ರಮ ವಹಿಸಿವೆ ಎಂದು ಅವರು ಹೇಳಿದರು.

ದೇಶದಲ್ಲಿಯೇ ಪ್ರತಿಷ್ಠಿತ ರೈತರ ವಿಶ್ವವಿದ್ಯಾಲಯವೆಂದೇ ಪ್ರಖ್ಯಾತಿ ಹೊಂದಿರುವ ಧಾರವಾಡ ಕೃಷಿ ವಿಶ್ವವಿದ್ಯಾಲಯವು ಅಕ್ಟೋಬರ್ 1, 1986 ರಂದು ಕರ್ನಾಟಕದಲ್ಲಿ 2ನೇ ಕೃಷಿ ವಿಶ್ವವಿದ್ಯಾಲಯವಾಗಿ ಸ್ಥಾಪಿತವಾಗಿದ್ದು, ಈವರೆಗೆ 36 ವರ್ಷಗಳನ್ನು ಪೂರೈಸಿದ ಈ ಅವಿಸ್ಮರಣೀಯ ದಿನವನ್ನು ಸಂಸ್ಥಾಪನಾ ದಿನವಾಗಿ ಆಚರಿಸುತ್ತಿರುವುದು ವಿಶೇಷವಾಗಿದೆ.

ಕಳೆದ ಮೂರೂವರೆ ದಶಕಗಳ ಅವಧಿಯಲ್ಲಿ ಶೈಕ್ಷಣಿಕ, ಸಂಶೋಧನಾ ಹಾಗೂ ವಿಸ್ತರಣಾ ಕಾರ್ಯಗಳಲ್ಲಿ ಈ ವಿಶ್ವವಿದ್ಯಾಲಯದಿಂದ ಗಣನೀಯ ಪ್ರಮಾಣದಲ್ಲಿ ಪ್ರಗತಿಯನ್ನು ದಾಖಲಿಸಿದೆ. ಭಾರತೀಯ ಕೃಷಿ ಸಂಶೋಧನಾ ಮಂಡಳಿಯು




(ಐ.ಸಿ.ಎ.ಆರ್.) ಐದು ವರ್ಷಗಳ ಅಂದರೆ 2024–2029 ಅವಧಿಗಾಗಿ ಈ ವಿಶ್ವವಿದ್ಯಾಲಯಕ್ಕೆ ಎ ದರ್ಜೆಯೊಂದಿಗೆ ಮಾನ್ಯತೆ ಪಡೆದಿರುವುದನ್ನು ಅಭಿನಂದಿಸುತ್ತೇನೆ.

ಇದೇ ಪ್ರಥಮ ಬಾರಿಗೆ ಕೃಷಿ ವಿಶ್ವವಿದ್ಯಾಲಯ, ಧಾರವಾಡದಿಂದ ಖಾಸಗಿ ಕೃಷಿ ಮಹಾವಿದ್ಯಾಲಯವನ್ನು ಆರಂಭಿಸಲು ಕೆ.ಎಲ್.ಇ. ಸಂಸ್ಥೆಗೆ ಅನುಮೋದನೆ ನೀಡಿದ್ದು, ಸವದತ್ತಿ ತಾಲ್ಲೂಕಿನ ತೆನಿಕೊಳ್ಳ ಗ್ರಾಮದಲ್ಲಿ ಪದವಿ ಪ್ರಾರಂಭವಾಗಲಿದೆ. ಪ್ರತಿ ವರ್ಷ ಜೆ.ಆರ್. ಎಫ್., ಎಸ್.ಆರ್., ಎಫ್. ಹಾಗೂ ಎ.ಆರ್.ಎಸ್. ಪರೀಕ್ಷೆಗಳಲ್ಲಿ ಅತ್ಯಧಿಕ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಯಶಸ್ವಿಯಾಗಿ ರಾಷ್ಟದಲ್ಲಿ ಅನೇಕ ಬಾರಿ ಪ್ರಥಮ ಹಾಗೂ ದ್ವಿತೀಯ ಸ್ಥಾನವನ್ನು ಪಡೆಯುತ್ತಾ ಬಂದಿರುವುದರಿಂದ ಈ ವಿಶ್ವವಿದ್ಯಾಲಯದಲ್ಲಿ ಕಲಿಕೆಗೆ ಸೂಕ್ತ ಪರಿಸರ ರೂಪುಗೊಂಡಿದೆ.

ವಿಶ್ವವಿದ್ಯಾಲಯದಿಂದ ಇಲ್ಲಿಯವರೆಗೆ ಬೆಳೆ ಸುಧಾರಣೆಯಲ್ಲಿ ಒಟ್ಟು 267 ವಿವಿಧ ಬೆಳೆಗಳ ತಳಿಗಳು, 241 ಉತ್ಪಾದನ ತಂತ್ರಜ್ಞಾನಗಳು ಹಾಗೂ ಬೆಳೆ ಸಂರಕ್ಷಣೆ ವಿಭಾಗದಲ್ಲಿ ಒಟ್ಟು 331 ತಾಂತ್ರಿಕತೆಗಳನ್ನು ಅಭಿವೃದ್ಧಿ ಪಡಿಸಲಾಗಿದ್ದು, ಒಟ್ಟಾರೆ 1139 ತಂತ್ರಜ್ಞಾನಗಳು ಅಭಿವೃದ್ಧಿಗೊಂಡಿವೆ ಎಂದು ಕೃಷಿ ಸಚಿವರು ತಿಳಿಸಿದರು. ವಿಶ್ವವಿದ್ಯಾಲಯದಿಂದ 2006 ರಲ್ಲಿ ಬಿಡುಗಡೆಯಾಗಿರುವ ಜಗತ್ತಿನಲ್ಲಿಯೇ ಮೊಟ್ಟಮೊದಲ ಹೈಬ್ರಿಡ್ ವರಲಕ್ಷ್ಮಿ ಹಾಗೂ ಜಯಲಕ್ಷ್ಮಿ ಹತ್ತಿ ತಳಿಗಳು ಈ ಭಾಗದ ರೈತರ ಆರ್ಥಿಕ ಸ್ವಾವಲಂಬನೆಗೆ ಗಣನೀಯ ಕೊಡುಗೆ ನೀಡಿವೆ. ಅದೇ ರೀತಿ ಈ ಭಾಗದ ಮುಖ್ಯ ಬೆಳೆಗಳಾದ ಕಡಲೆ, ಹೆಸರು, ಹಿಂಗಾರಿ ಜೋಳ, ಕುಸುಬೆ ಮುಂತಾದ ಬೆಳೆಗಳ ಅಧಿಕ ಇಳುವರಿ ನೀಡುವ ಹಾಗೂ ಸೋಯಾಬಿನ್ ಬೆಳೆಯಲ್ಲಿ ರೋಗ ನಿರೋಧಕ ತಳಿಗಳಾದ ಆಖಃ–21 ಹಾಗೂ ಆಖಃ–34 ತಳಿಗಳು ಲಕ್ಷಾಂತರ ರೈತರಿಗೆ ವರದಾನವಾಗಿವೆ ಎಂದರು.

ಸಾವಯವ ಕೃಷಿಯನ್ನು ಪ್ರೋತ್ಸಾಹಿಸಲು ಅಗತ್ಯಗಳನ್ನು ಪೂರೈಸುವ ನಿಟ್ಟಿನಲ್ಲಿ 2006 ರಲ್ಲಿ ದೇಶದಲ್ಲಿಯೇ ಮೊಟ್ಟಮೊದಲ ಸಾವಯವ ಕೃಷಿ ಸಂಸ್ಥೆಯನ್ನು ಸ್ಥಾಪಿಸಲಾಯಿತು. ಈ ಸಂಸ್ಥೆಯು ತಯಾರಿಸುವ ಜೈವಿಕ ಗೊಬ್ಬರಗಳು ಹಾಗೂ ಜೈವಿಕ ರೋಗ, ಕೀಟನಾಶಕಗಳಿಗೆ ರೈತರಿಂದ ಭಾರಿ ಬೇಡಿಕೆಯಿದ್ದು, ಸಾವಿರಾರು ರೈತರು ಅವುಗಳ ಪ್ರಯೋಜನ ಪಡೆಯುತ್ತಿದ್ದಾರೆ ಎಂದು ಸಚಿವರು ತಿಳಿಸಿದರು.

ವಿಶ್ವವಿದ್ಯಾಲಯದಲ್ಲಿ 2018–19 ರಲ್ಲಿ ಸ್ಥಾಪಿತವಾದ ಕೃಷಿಕ್–ನವೋದ್ಯಮ ಪೋಷಣ ಕೇಂದ್ರದ ವತಿಯಿಂದ ಈವರೆಗೆ ಒಟ್ಟು 10 ತಂಡಗಳಿಗೆ ತರಬೇತಿ ನೀಡಲಾಗಿದ್ದು, 111 ಸ್ಮಾರ್ಟ್ ಅಪ್‌ಗಳಿಗೆ ರೂ. 12 ಕೋಟಿ ಅನುದಾನ ಶಿಫಾರಸು ಮಾಡಲಾಗಿದ್ದು, ಈವರೆಗೆ ರೂ. 8.19 ಕೋಟಿ ವಿತರಿಸಲಾಗಿದೆ. ಇವುಗಳು ಒಟ್ಟಾರೆಯಾಗಿ ರೂ. 20 ಕೋಟಿ ಆದಾಯ ಗಳಿಸಿದ್ದು, ಕೃಷಿ ಹಾಗೂ ಸಂಬಂಧಿತ ವಲಯಗಳಲ್ಲಿ 957 ಉದ್ಯೋಗಗಳನ್ನು ಸೃಷ್ಟಿಸಿವೆಯಲ್ಲದೇ 25 ಮಹಿಳಾ ನೇತೃತ್ವದ ಸ್ಮಾರ್ಟ್ ಅಪ್‌ಗಳು 11 ಪೇಟೆಂಟ್‌ಗಳನ್ನು ಕೂಡಾ ಪಡೆದುಕೊಂಡಿವೆ ಎಂದರು.

**ಆಕ್ಸಿಯೋಮ್–4 ಮಿಷನ್ ಅಡಿಯಲ್ಲಿ ಬಾಹ್ಯಾಕಾಶಕ್ಕೆ ಕೃಷಿ:** ವಿಶ್ವವಿದ್ಯಾಲಯ, ಧಾರವಾಡದಿಂದ ಸಂಶೋಧನಾ ಪ್ರಯೋಗಕ್ಕಾಗಿ ಕಳುಹಿಸಿದ ಹೆಸರು ಮತ್ತು ಮೆಂತೆ ಕಾಳುಗಳ ಮೊಳಕೆ ಪರೀಕ್ಷೆ ಯಶಸ್ವಿಯಾಗಿದ್ದು, ಸಂಶೋಧನೆ ಮುಂದುವರೆದಿದೆ. ಈ ಯಶಸ್ಸಿಗಾಗಿ ನಮ್ಮ ವಿಶ್ವವಿದ್ಯಾಲಯದ ವಿಜ್ಞಾನಿ ಡಾ. ರವಿಕುಮಾರ ಹೊಸಮನಿಯವರನ್ನು ಹಾಗೂ ಕುಲಪತಿಗಳಾದ ಡಾ. ಪಿ.ಎಲ್. ಪಾಟೀಲ್ ಇವರನ್ನು ನವದೆಹಲಿಯಲ್ಲಿ ನಡೆದ ಸಮಾರಂಭದಲ್ಲಿ ಸನ್ಮಾನಿಸಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ. ಪಿ.ಎಲ್.ಪಾಟೀಲ ಅವರು ಮಾತನಾಡಿದರು. ವೇದಿಕೆಯಲ್ಲಿ ಶಾಸಕರಾದ ರವಿ ಗಣಿಗ, ಮಧು ಜಿ. ಮಾದೇಗೌಡ, ಕೃಷಿ ವಿಶ್ವವಿದ್ಯಾಲಯದ ಆಡಳಿತ ಮಂಡಳಿಯ ಸದಸ್ಯರಾದ ಪಾರ್ವತಿ ಎಸ್. ಕುರಲೇ, ಬಸವರಾಜ ಕುಂದಗೋಳಮಠ, ವೀರನಗೌಡ ಪೊಲೀಸಪಾಟೀಲ್, ರವಿಕುಮಾರ ಮಾಳಿಗೇರ, ಮಾಲತೇಶ ಜಿ. ಶ್ಯಾಗೋಟಿ ಸೇರಿದಂತೆ ಇತರ ಸದಸ್ಯರು, ಕುಲಸಚಿವೆ ಜಯಶ್ರೀ ಶಿಂತ್ರಿ ಇದ್ದರು.

ಕಾರ್ಯಕ್ರಮದಲ್ಲಿ ಕೃಷಿ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳು, ಡೀನ್‌ರು, ಪ್ರಾಧ್ಯಾಪಕರು ಮತ್ತು ಧಾರವಾಡ ಕೃಷಿ ವಿಶ್ವವಿದ್ಯಾಲಯದ ವಿವಿಧ ಸಂಶೋಧನಾ ಕೇಂದ್ರಗಳ, ಮಹಾವಿದ್ಯಾಲಯಗಳ, ಕ್ಯಾಂಪಸ್‌ಗಳ ಪ್ರಾಧ್ಯಾಪಕರು, ವಿದ್ಯಾರ್ಥಿಗಳು, ಸಿಬ್ಬಂದಿಗಳು ಭಾಗವಹಿಸಿದ್ದರು.

## ಮರಗಳ ತೆರವಿಗೆ ಬಹಿರಂಗ ಹರಾಜು

**ಧಾರವಾಡ:** ಹುಬ್ಬಳ್ಳಿ ಶಹರದ ವಿವಿಧ ಬಡಾವಣೆಗಳ ರಸ್ತೆ ಬದಿ ಹಾಗೂ ವಿವಿಧ ಕಚೇರಿ ಆವರಣದಲ್ಲಿ ಅಪಾಯಕಾರಿ ಸ್ಥಿತಿಯಲ್ಲಿರುವ 84 ಮರಗಳು ಮತ್ತು 172 ಮರದ ಟೊಂಗೆಗಳನ್ನು ತೆರುವುಗೊಳಿಸಲು ಹುಬ್ಬಳ್ಳಿ ವಲಯ ಅರಣ್ಯ ಅಧಿಕಾರಿ ಕಛೇರಿಯಲ್ಲಿ ಅಕ್ಟೋಬರ್ 14, 2025 ಮತ್ತು ಅಕ್ಟೋಬರ್ 29, 2025 ರಂದು ಮಧ್ಯಾಹ್ನ 3 ಗಂಟೆಗೆ ಬಹಿರಂಗ ಹರಾಜು ಮಾಡಲಾಗುವುದು. ಮರ ಸಂರಕ್ಷಣಾ ಕಾಯ್ದೆ 1976 ರ ಸೆಕ್ಷನ್ 8 (3) (VII) ರ ಸೆಕ್ಷನ್‌ಗಳಲ್ಲಿ ಅಗತ್ಯ ಪಡಿಸಿರುವಂತೆ ಈ ಬಗ್ಗೆ ತಕರಾರು ಸಲ್ಲಿಸಬಯಸುವವರು ತಮ್ಮ ತಕರಾರನ್ನು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಧಾರವಾಡ ಉಪ ವಿಭಾಗ, ಧಾರವಾಡ ಹಾಗೂ ಧಾರವಾಡದ ಕೆ.ಸಿ.ಪಾರ್ಕ ಎದುರು ಅರಣ್ಯ ಸಂಕೀರ್ಣದಲ್ಲಿರುವ ಮರ ಅಧಿಕಾರಿಯವರಿಗೆ ಲಿಖಿತ ರೂಪದಲ್ಲಿ ಅಕ್ಟೋಬರ್ 12, 2025 ರ ಒಳಗಾಗಿ ಸಲ್ಲಿಸಬಹುದುದಾಗಿದೆ ಎಂದು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶ್ರೀ ಕರೆಮ್ಮದೇವಿ ಜಾತ್ರಾ ಮಹೋತ್ಸವದಲ್ಲಿ ಲಖನ ಜಾರಕಿಹೊಳಿ ಕರೆ

# ಯುವ ಜನತೆ ಧಾರ್ಮಿಕ ಕಾರ್ಯಗಳಲ್ಲಿ ಭಾಗವಹಿಸಿ



ನಗರದ ಸಬ್‌ಜೈಲ್ ಹಿಂಭಾಗದ ಶ್ರೀ ಕರೇಮ್ಮದೇವಿ ದೇವಸ್ಥಾನದ ಜಾತ್ರಾ ಮಹೋತ್ಸವದಲ್ಲಿ ವಿಧಾನ ಪರಿಷತ ಸದಸ್ಯ ಲಖನ ಜಾರಕಿಹೊಳಿ ಭಾಗವಹಿಸಿರುವದು.

**ಗೋಕಾಕ:** ಧಾರ್ಮಿಕ ಕಾರ್ಯಗಳಲ್ಲಿ ತೋಡಗಿಸಿ ಕೊಳ್ಳುವದರಿಂದ ದೇವರ ಅನುಗ್ರಹದೊಂದಿಗೆ ನೆಮ್ಮದಿಯ ಬದುಕು ಸಾಧ್ಯವೆಂದು ವಿಧಾನ ಪರಿಷತ ಸದಸ್ಯ ಲಖನ ಜಾರಕಿಹೊಳಿ ಹೇಳಿದರು.

ಅವರು, ಶುಕ್ರವಾರದಂದು ನಗರದ ಸಬ್‌ಜೈಲ್ ಹಿಂಭಾಗದ ಶ್ರೀ ಕರೇಮ್ಮದೇವಿ ದೇವಸ್ಥಾನದ ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸಿ ಮಾತನಾಡುತ್ತಿದ್ದರು.

ದೇಶ ಸುಸಂಸ್ಕೃತ ನಾಡಾಗಿದ್ದು ಧಾರ್ಮಿಕ ಕಾರ್ಯಗಳು ಹೆಚ್ಚು ಹೆಚ್ಚು ನಡೆಯುತ್ತವೆ. ದೇವರ ಅನುಗ್ರಹದಿಂದಲೇ ದೇಶ ಸುಃಖ ಶಾಂತಿ ನೆಮ್ಮದಿಯಿಂದ ಸಮೃದ್ಧವಾಗಿ ನಾವೆಲ್ಲ ಸುಂದರವಾದ ಬದುಕನ್ನು ಕಂಡುಕೊಂಡಿದ್ದೇವೆ.

ಇಂದಿನ ಯುವ ಜನತೆ ನಮ್ಮ ಪೂರ್ವಜರು ಹಾಕಿಕೊಟ್ಟ ಮಾರ್ಗದಲ್ಲಿ ನಡೆಯುತ್ತ ಧಾರ್ಮಿಕ ಕಾರ್ಯಗಳಲ್ಲಿ ಹೆಚ್ಚೆಚ್ಚು ಪಾಲ್ಗೊಳ್ಳುವಂತೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಯುವ ನಾಯಕರಾದ ಅಮರನಾಥ ಜಾರಕಿಹೊಳಿ, ಸರ್ವೋತ್ತಮ ಜಾರಕಿಹೊಳಿ, ಬಿಜೆಪಿ ನಗರ ಘಟಕ ಅಧ್ಯಕ್ಷ ಭೀಮಶಿ ಭರಮಣ್ಣವರ, ನಗರಸಭೆ ಸದಸ್ಯ ಜಯಾನಂದ ಹುಣಚ್ಯಾಳ, ಉದ್ಯಮಿ ಕಿಶೋರ ಶೆಟ್ಟಿ, ಸದಾನಂದ ಕಲಾಲ, ಮಲ್ಲಪ್ಪ ಮದಿಹಳ್ಳಿ, ಮೋಹನ ಗೌಡ, ಪ್ರದೀಪ ನಾಗನೂರ, ಬಸವರಾಜ ಬರಗಿ, ವಿಲಾಸ ವಾಕುಡೆ, ಆನಂದ ಪಟ್ಟಣಶೆಟ್ಟಿ, ಮಹಾದೇವ ಮೆಟಗುಡ್ಡ, ಸತೀಶ ಮನ್ನಿಕೇರಿ, ಶಂಕರ ಭರಮನ್ನವರ, ಬಸವರಾಜ ಭರಮನ್ನವರ, ಇಮಾದ ಬೆಟಗೆರಿ, ಶಿವಾನಂದ ಹೂಗಾರ, ಅಮೀತ ಕಲಾಲ ಸೇರಿದಂತೆ ಅನೇಕರು ಇದ್ದರು.

# ಗಳಗನಾಥರು, ರಾಜಪುರೋಹಿತರು ಕನ್ನಡ ಸಾಹಿತ್ಯದ ದಿಗ್ಗಜರು

**ಹಾವೇರಿ:** ಕನ್ನಡದ ಪರಿಸ್ಥಿತಿ ಶೋಚನೀಯವಾಗಿದ್ದ ಕಾಲದಲ್ಲಿ ನಾಡು–ನುಡಿಗಾಗಿ ದುಡಿದ ಸಾಹಿತಿ, ಸಂಶೊಧಕರ ಹೆಸರುಗಳಲ್ಲಿ ಕನ್ನಡ ಕಾದಂಬರಿ ಪಿತಾಮಹ ಗಳಗನಾಥರು ಹಾಗೂ ರಾಜಪುರೋಹಿತರ ಹೆಸರುಗಳು ಅತ್ಯಂತ ಪ್ರಮುಖವಾದವುಗಳು. ಇವರು ಕನ್ನಡ ಸಾಹಿತ್ಯದ ದಿಗ್ಗಜರು ಎಂದು ಪ್ರಾಚಾರ್ಯ ಡಿ.ಟಿ. ಪಾಟೀಲ ಹೇಳಿದರು.

ತಾಲೂಕಿನ ಕಳ್ಳಿಹಾಳ ಎಸ್.ಸಿ. ಎಸ್.ಟಿ ವಸತಿಯುತ ಪ್ರಥಮ ದರ್ಜೆ ಕಾಲೇಜಿನಲ್ಲಿ ಕರ್ನಾಟಕ ಸರ್ಕಾರ ಶ್ರೀಗಳಗನಾಥ ಮತ್ತು ನಾ.ಶ್ರೀ ರಾಜಪುರೋಹಿತ ಪ್ರತಿಷ್ಠಾನದಿಂದ ಗುರುವಾರ ಏರ್ಪಡಿಸಿದ್ದ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕನಕ, ಶರೀಪ ಸರ್ವಜ್ಞ ಮುಂತಾದವರು ಈ ಜಿಲ್ಲೆಯ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಹೆಚ್ಚಿಸಿದ್ದಾರೆ. ಸಂತರ, ಶರಣರ ದಾರ್ಶನಿಕ ಚರಿತ್ರೆಗಳನ್ನು ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕು ವಾಚನಾಭಿರುಚಿ ಬೆಳೆಸಿಕೊಳ್ಳಬೇಕು ಕರೆ ನೀಡಿದರು.

ಹಿರೇಕೆರೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಉಪನ್ಯಾಸಕ ಡಾ. ಕಾಂತೇಶರಡ್ಡಿ ಗೊಡಿಹಾಳ ಅವರು ಗಳಗನಾಥರು ಮತ್ತು ನಾ.ಶ್ರೀ. ರಾಜಪುರೋಹಿತರ ಬದುಕು–ಬರಹ ಕುರಿತು ಮಾತನಾಡಿ, ಕನ್ನಡ ಕಾದಂಬರಿಯ ಉನ್ನತ ಸೌಧದ ತಳಪಾಯವನ್ನು ಹಾಕಿದವರೇ ಗಳಗನಾಥರು. ಅವರು ಕನ್ನಡ ಕಾದಂಬರಿಯ ಪಿತಾಮಹ. ಇತಿಹಾಸ ಸಂಶೋಧಕ ರಾಜಪುರೋಹಿತರು ಇಂದಿನ ಸಂಶೋಧಕರಿಗೆ ಪ್ರೇರಣೆ ಹಾಗೂ ಸ್ಫೂರ್ತಿಯಾಗುತ್ತಾರೆ. ಈ ಮಹನೀಯರು ಹಾವೇರಿ ತಾಲೂಕಿನ ಅಗಡಿ ಗ್ರಾಮದವರು ಎಂದು ಹೇಳಲು ಹೆಮ್ಮೆ ಎನಿಸುತ್ತದೆ ಎಂದರು.



ರಟೀಹಳ್ಳಿ ಪ್ರಿಯದರ್ಶಿನಿ ಪದವಿ ಕಾಲೇಜಿನ ಉಪನ್ಯಾಸಕ ಡಾ. ಚಾಮರಾಜ ಕಮ್ಮಾರ ಶಾಸನಗಳ ಓದು ಕುರಿತು ಮಾತನಾಡಿ, ಶಿಲಾಶಾಸನಗಳ, ಸ್ಮಾರಕಗಳು ಹಾವೇರಿ ಜಿಲ್ಲೆಯಲ್ಲಿಯೇ ಅತೀ ಹೆಚ್ಚು ಕಂಡುಬಂದಿವೆ.

ಶಾಸನಗಳು ಎಂದರೆ ಪ್ರಾಚೀನ ಕಾಲದ ಜನಗಳೆಂದರೆ ಸಮಗ್ರ ದೃಷ್ಟಿಯಿಂದ ನೋಡುವುದು. ಶಾಸನಗಳ ಹಾಗೂ ಸ್ಮಾರಕಗಳ ಬಗ್ಗೆ ನಿರ್ಲಕ್ಷ್ಯ ಸಲ್ಲದು, ಅವುಗಳ ರಕ್ಷಣೆ ನಮ್ಮೆಲ್ಲರ ಜಬಾಬ್ದಾರಿಯಾಗಿದೆ. ವಿದ್ಯಾರ್ಥಿಗಳು ಇತಿಹಾಸಕಾರರ ಚರಿತ್ರೆಗಳನ್ನು ಅಧ್ಯಯನ ಮಾಡಬೇಕು ಎಂದರು.

ಪ್ರತಿಷ್ಠಾನದ ಸದಸ್ಯ ವೆಂಕಟೇಶ ಗಳಗನಾಥ ಉಪನ್ಯಾಸಕರನ್ನು ಹಾಗೂ ಪ್ರಾಚಾರ್ಯರರನ್ನು ಗೌರವಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ. ಬಿ. ಹಿರೇಮಠ ಸ್ವಾಗತಿಸಿ, ಪ್ರಸ್ತಾವಿಕವಾಗಿ ಮಾತನಾಡಿದರು. ಪ್ರತಿಷ್ಠಾನದ ಸದಸ್ಯ ಹನುಮಂತಗೌಡ ಗೊಲ್ಲರ ನಿರೂಪಿಸಿದರು. ಇನ್ನೊರ್ವ ಸದಸ್ಯ ಪ್ರಮೋದ ನಲವಾಗಲ ವಂದಿಸಿದರು.

## ನ.9ಕ್ಕೆ ಪತ್ರಕರ್ತರ ಸಂಘದ ಚುನಾವಣೆ

**ಗದಗ:** ರಾಜ್ಯದ ಕಾರ್ಯನಿರತ ಪತ್ರಕರ್ತರ ಪ್ರತಿಷ್ಠಿತ ಪ್ರಾತಿನಿಧಿಕ ಸಂಘಟನೆಯಾದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕಾನಿಪ) 2025–28 ನೆ ಅವಧಿಯ ಆಡಳಿತ ಮಂಡಳಿ ಆಯ್ಕೆಯಾಗಿ ಚುನಾವಣೆ ಘೋಷಣೆಯಾಗಿದೆ. ಸಂಘದ ರಾಜ್ಯ ಘಟಕವೂ ಸೇರಿದಂತೆ ಗದಗ ಜಿಲ್ಲಾ ಘಟಕದ ಆಡಳಿತ ಮಂಡಳಿಗೆ ಏಕಕಾಲದಲ್ಲಿ ಚುನಾವಣೆ ನಡೆಯಲಿದೆ. ಅ. 13 ರಂದು ಸೋಮವಾರ ಚುನಾವಣಾ ಅಧಿಸೂಚನೆ ಹೊರಡಿಸಲಾಗುವುದು. ಅಂದೇ ವೇಳಾಪಟ್ಟಿ ಪ್ರಕಟಗೊಳ್ಳಲಿದ್ದು, ಮತದಾರರ ಕರಡು ಪ್ರತಿ ಪ್ರಕಟವಾಗಲಿದೆ. ಅ. 19ರಿಂದ ನಾಮಪತ್ರ ಸಲ್ಲಿಕೆ ಆರಂಭವಾಗಲಿದೆ. ಅ.27 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನ. ಅ.28 ನಾಮಪತ್ರಗಳ ಪರಿಶೀಲನೆ, ಅ. 30 ನಾಮಪತ್ರಗಳನ್ನು ಹಿಂತೆಗೆದುಕೊಳ್ಳುವ ಕೊನೆಯ ದಿನವಾಗಿರುತ್ತದೆ. ನ. 9 ಭಾನುವಾರ ಗದಗ ಪತ್ರಿಕಾ ಭವನದಲ್ಲಿ ಬೆಳಗ್ಗೆ 9 ರಿಂದ ಮದ್ಯಾಹ್ನ 3ಗಂಟೆ ವರೆಗೆ ಮತದಾನ ನಡೆಯಲಿದೆ. ಮತದಾನ ಬಳಿಕ ಅದೇ ದಿನ ಮತ ಎಣಿಕೆ ನಡೆದು ಫಲಿತಾಂಶ ಪ್ರಕಟವಾಗಲಿದೆ ಎಂದು ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಚುನಾವಣಾ ಅಧಿಕಾರಿ ಶಿವಾನಂದ ಹಿರೇಮಠ ಪ್ರಕಟಣೆ ತಿಳಿಸಿದ್ದಾರೆ.

# ಹಳಿಯಾಳ: ಪರಿಸರ ಜಾಗೃತಿ ಕಾರ್ಯಕ್ರಮ

**ಕಾರವಾರ:** ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸ್ಥಾಪನೆಗೊಂಡು 50 ವರ್ಷಗಳಾದ ಹಿನ್ನೆಲೆಯಲ್ಲಿ ಮಂಡಳಿಯ ಸುವರ್ಣ ಮಹೋತ್ಸವ ಆಚರಣೆಯ ಪ್ರಯುಕ್ತ ಜಿಲ್ಲಾಡಳಿತ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಚೇರಿ ಕಾರವಾರ ಹಾಗೂ ಮೆ. ಇಐಡಿ ಪ್ಯಾರಿ, ಇಂಡಿಯಾ ಲಿಮಿಟೆಡ್, ಹಳಿಯಾಳ ಇವರ ಸಹಯೋಗದೊಂದಿಗೆ ಹಳಿಯಾಳದ ಮೆ. ಇಐಡಿ ಪ್ಯಾರಿ ಇಂಡಿಯಾ ಲಿಮಿಟೆಡ್‌ನಲ್ಲಿ ಪರಿಸರ ಜಾಗೃತಿ ಕಾರ್ಯಕ್ರಮವು ಶುಕ್ರವಾರ ನಡೆಯಿತು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪರಿಸರ ಅಧಿಕಾರಿ ಬಿ.ಕೆ. ಸಂತೋಷ್ ಕಂಪನಿಯ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಏಕ ಬಳಕೆಯ ಪ್ಲಾಸ್ಟಿಕ್ ವಸ್ತುಗಳ ಬಳಕೆಯಿಂದ ಪರಿಸರದ ಮೇಲೆ ಆಗುವ ದುಷ್ಪರಿಣಾಮಗಳು, ಹಾಗೂ ಪ್ಲಾಸ್ಟಿಕ್ ತ್ಯಾಜ್ಯಗಳ ನಿರ್ವಹಣೆ ವಿಲೇವಾರಿ ಬಗ್ಗೆ, ಜಲ ಮಾಲಿನ್ಯ, ವಾಯು ಮಾಲಿನ್ಯ, ಶಬ್ದಮಾಲಿನ್ಯ ಜೀವ ವೈದ್ಯಕೀಯ ತ್ಯಾಜ್ಯ, ಅಪಾಯಕಾರಿ ತ್ಯಾಜ್ಯ ಇವುಗಳ ನಿರ್ವಹಣೆ




ಹಾಗೂ ಇವುಗಳ ನಿರ್ವಹಣೆಯಲ್ಲಿ ಮಂಡಳಿಯ ಕಾರ್ಯವೈಖರಿಯನ್ನು ಶಕ್ತಿ ಬಿಂದು ಪ್ರದರ್ಶನ ಮೂಲಕ ತಿಳಿಸಿದರು.

ನಿಷೇಧಿತ ಏಕ ಬಳಕೆಯ ಪ್ಲಾಸ್ಟಿಕ್ ವಸ್ತುಗಳನ್ನು (ಪ್ಲಾಸ್ಟಿಕ್ ಕ್ಯಾರಿ ಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಬಾವುಟ, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚ, ಸ್ಟ್ರಾಗಳು, ಕ್ಲಿಂಗ್ ಫಿಲ್ಮ್ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆ ಹಾಗೂ ಥರ್ಮೋಕಾಲ್ ಮತ್ತು ಪ್ಲಾಸ್ಟಿಕ್ ಮೈಕ್ರೋ ಬೀಡ್ಸನಿಂದ ತಯಾರಾದಂತಹ ವಸ್ತುಗಳು) ಉಪಯೋಗಿಸದಂತೆ ಜಾಗೃತಿ ಮೂಡಿಸಿ, ಏಕ ಬಳಕೆಯ ಪ್ಲಾಸ್ಟಿಕ್ ವಸ್ತುಗಳ ಉಪಯೋಗವನ್ನು ಸಂಪೂರ್ಣವಾಗಿ ನಿಷೇಧಿ ಬದಲಾಗಿ ಅಡಿಕೆ ಎಲೆ / ಕಟ್ಟಿಗೆ / ಗಾಜು / ಪೇಪರ್ / ಸ್ಟೀಲ್‌ನಿಂದ ತಯಾರಿಸಿದ ವಸ್ತುಗಳನ್ನು ಬಳಸುವಂತೆ ತಿಳಿಸಲಾಯಿತು. ಕೇವಲ ಬಟ್ಟೆ ಚೀಲಗಳನ್ನು ಬಳಸುವಂತೆ ಹಾಗೂ ಪ್ಲಾಸ್ಟಿಕ್ ಚೀಲಗಳನ್ನು ಬಳಸಿದಲ್ಲಿ ದಂಡವನ್ನು ವಿಧಿಸಲಾಗುವುದು ಎಂದು ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ಕಂಪನಿಯ ಅಧಿಕಾರಿ ರಾಜೇಂದ್ರ ಆಚಾರ್ಯ, ಮ್ಯಾನೇಜರ್ (ಮ್ಯಾಕೆನಿಕಲ್) ಉಸ್ಮಾನ್ ಸಿ, ಡಿವೈ ಮ್ಯಾನೇಜರ್ (ಪರಿಸರ) ಪ್ರೀತಮ್ ಪಾಟೀಲ್, ಹಿರಿಯ ಕಾರ್ಯಕಾರಿ ಅಧಿಕಾರಿ (ಪರಿಸರ) ವಿಶ್ವನಾಥ ಬಿ.ಎಮ್ ಹಾಜರಿದ್ದರು.

# ಪರಿಶಿಷ್ಠ ಪಂಗಡಕ್ಕೆ ಸೇರಿಸುವಂತೆ ಆಗ್ರಹಿಸಿ ಮನವಿ

**ಗೋಕಾಕ:** ಕರ್ನಾಟಕ ರಾಜ್ಯದ ಕುರುಬ ಸಮುದಾಯವನ್ನು ಪರಿಶಿಷ್ಠ ಪಂಗಡಕ್ಕೆ ಸೇರಿಸುವಂತೆ ಕೇಂದ್ರ ಸರಕಾರಕ್ಕೆ ಶೀಘ್ರವಾಗಿ ಶಿಫಾರಸ್ಸು ಮಾಡುವಂತೆ ಇಲ್ಲಿಯ ಶ್ರೀ ಕನಕದಾಸ ಯುವ ವೇದಿಕೆಯವರು ಶುಕ್ರವಾರದಂದು ತಹಶೀಲದಾರ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಕುರುಬ ಸಮುದಾಯವು ಕರ್ನಾಟಕದ ಪ್ರಾಚೀನ ಸಮಾಜವಾಗಿದ್ದು, ನಮ್ಮ ಸಮಾಜದ ಮೂಲ ಉದ್ಯೋಗ ಕುರಿಗಾಹಿಕೆ ಮತ್ತು ಕಂಬಳಿ ನೇಕಾರಿಕೆಯಾಗಿದೆ. ನಾವು ಅಲೆಮಾರಿ ಜೀವನವನ್ನು ಬದುಕುತ್ತಿದ್ದೇವೆ. ಆಧುನಿಕತೆಯಿಂದ ಕಂಬಳಿ ನೇಕಾರಿಕೆ ಉದ್ಯೋಗವು ನಿಂತು ಹೋಗಿದೆ. ನಾವು ಸಾಮಾಜಿಕವಾಗಿ ಶೈಕ್ಷಣಿಕವಾಗಿ ತೀರಾ ಹಿಂದುಳಿದಿದ್ದೇವೆ. ಆದ್ದರಿಂದ ನಮ್ಮ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಕೇಂದ್ರ ಸರಕಾರಕ್ಕೆ ಶಿಫಾರಸ್ಸು ಮಾಡುವಂತೆ ಮನವಿಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಲಕ್ಷ್ಮಣ ಮಂಗಿ, ಮಾಯಪ್ಪ ಬೆಣಚಿನಮರ್ಡಿ, ಲಕ್ಷ್ಮಣ ತಿರಕನ್ನವರ, ಆನಂದ ಬಂಗಿ ಸೇರಿದಂತೆ ಅನೇಕರು ಇದ್ದರು.



## ಸೇನೆಗೆ ಆಯ್ಕೆ

**ರಾಯಬಾಗ:** ತಾಲೂಕಿನ ನಸಲಾಪುರ ಗ್ರಾಮದ ನಿವಾಸಿ ಕಾರ್ತಿಕ ಅಜೀತಕುಮಾರ ಪಾಟೀಲ ಅವರು ಭಾರತೀಯ ಸೇನೆಗೆ ಆಯ್ಕೆಯಾಗಿದ್ದಾರೆ.



ಯುಪಿಎಸ್ಸಿ ಕಂಡಕ್ಟ್ ಮಾಡಿರುವ ಎನ್. ಡಿ. ಎ. ಪರೀಕ್ಷೆಯಲ್ಲಿ ದೇಶಕ್ಕೆ 175 ನೇ ರ್ಯಾಂಕ್ ಪಡೆದುಕೊಂಡು ಪಾಸಾಗಿದ್ದಾರೆ. ಡೆಹ್ರಾಡೂನ್ ನಲ್ಲಿ ಸರ್ವಿಸಸ್ ಸೆಲೆಕ್ಷನ್ ಬೋರ್ಡ್(ಎಸ್. ಎಸ್. ಬಿ) ಇಂಟರ್ವ್ಯೂ ಕ್ಲಿಯರ್ ಮಾಡಿಕೊಂಡು ಪಾಸಾಗಿದ್ದಾರೆ. ಅವರಿಗೆ ಗ್ರಾಮಸ್ಥರು, ಪಾಟೀಲ ಕುಟುಂಬದವರು, ಸಮಾಜೆ ಕುಟುಂಬದವರು ಮತ್ತು ಮಿತ್ರರು ಶುಭ ಕೋರಿರುತ್ತಾರೆ.

# ಮಾನಸಿಕ ಆರೋಗ್ಯ ಸೌಲಭ್ಯಗಳ ಅರಿವು ಮೂಡಿಸಿ

**ವಿಜಯಪುರ:** ಮಾನಸಿಕ ಆರೋಗ್ಯದ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದ ಅತ್ಯವಶ್ಯಕವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹಿರಿಯ ಸಿವ್ಹಿಲ್ ನ್ಯಾಯಾಧೀಶ ಅರವಿಂದ ಹಾಗರಗಿ ಅವರು ಹೇಳಿದರು.

ಜಿಲ್ಲಾ ಆಡಳಿತ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಘಟಕ ವಿಜಯಪುರ ಹಾಗೂ ವಿವಿದ ನರ್ಸಿಂಗ್ ಕಾಲೇಜು ಹಾಗೂ ಮನೋಜ್ಯೋತಿ ಫೌಂಡೇಶನ್ ವಿಜಯಪುರ ಇವರ ಸಂಯುಕ್ತ ಆಶ್ರಯದಲ್ಲಿ ಶುಕ್ರವಾರ ಹಮ್ಮಿಕೊಂಡ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆಯ ಜನಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಪದ್ಮಶ್ರೀ ಪ್ರಶಸ್ತಿ ವಿಜೇತರರು ಹಾಗೂ ಹಿರಿಯ ಮನೋರೋಗ ತಜ್ಞ ಡಾ॥ ಸಿ.ಆರ್. ಚಂದ್ರಶೇಖರ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ॥ ಸಂಪತ್ತ ಗುಣಾರಿ ಅವರೊಂದಿಗೆ ಜಂಟಿಯಾಗಿ ಹಸಿರು




ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದಲ್ಲಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಾನಸಿಕ ಕಾಯಿಲೆಯು ಪುರಾತನ ಕಾಲದಿಂದ ಮನುಷ್ಯನನ್ನು ಕಾಡುತ್ತಾ ಬಂದಿದೆ ಇದಕ್ಕೆ ಸರಳವಾದ ಚಿಕಿತ್ಸೆ ಇರಲಿಲ್ಲ ಈಗ ಆ ಕಾಲ ಬದಲಾಗಿದೆ. ರಾಷ್ಟ್ರೀಯ ಮಾನಸಿಕ ಆರೋಗ್ಯ ಕಾರ್ಯಕ್ರಮ ಬಂದ ನಂತರ ಸಮುದಾಯಕ್ಕೆ ಆರೋಗ್ಯದ ಅರಿವು ಮತ್ತು ಜ್ಞಾನವನ್ನು ಕೊಡಲಾಗುತ್ತಿದ್ದು, ಅಲ್ಲದೇ ಮಾನಸಿಕ ಖಾಯಿಲೆಗಳಿಗೆ ಉಚಿತ ಚಿಕಿತ್ಸೆ ಹಾಗೂ ಆಪ್ತಸಮಾಲೋಚನೆ ಮೂಲಕ ಮಾನಸಿಕ ಸಮಸ್ಯೆಗಳಿಗೆ ಪರಿಹಾರ ನೀಡಲಾಗುತ್ತಿದೆ. ಸಾರ್ವಜನಿಕರು ಇದರ ಸೌಲಭ್ಯಗಳನ್ನು ಪಡೆದುಕೊಂಡು ತಮ್ಮ ಜೀವನ ಶೈಲಿಯ ಬದಲಾವಣೆಯಿಂದ ಮಾನಸಿಕವಾಗಿ ಆರೋಗ್ಯವಂತರಾಬೇಕು ಎಂದು ಅವರು ಹೇಳಿದರು.

ಮಾನಸಿಕ ಆರೋಗ್ಯದ ಬಗೆಗೆ ಸಾರ್ವಜನಿಕರಲ್ಲಿ ಅರಿವುವನ್ನು ಮೂಡಿಸುವುದು ಬಹಳ ಅತ್ಯವಶ್ಯಕ ಎಂಬುದನ್ನು ಮನಗಂಡು 1948ರಲ್ಲಿ ವಿಶ್ವ ಮಾನಸಿಕ ಆರೋಗ್ಯ ಒಕ್ಕೂಟ ಸ್ಥಾಪನೆಯಾಯಿತು. 1992ರಲ್ಲಿ ಮೊದಲ ಬಾರಿಗೆ ಒಕ್ಕೂಟದ ವತಿಯಿಂದ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆಯನ್ನು ಆಚರಿಸಲಾಯಿತು ಎಂದು ಅವರು ಹೇಳಿದರು.

ಡಾ॥ ಸಿ.ಆರ್. ಚಂದ್ರಶೇಖರ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರು ಹಾಗೂ ಹಿರಿಯ ಮನೋರೋಗ ತಜ್ಞರು ಮಾತನಾಡುತ್ತಾ ದೈಹಿಕ ರೋಗಗಳನ್ನು ಗುಣಪಡಿಸಲು ಚಿಕಿತ್ಸೆ ನೀಡುವಂತೆ ಮಾನಸಿಕ ರೋಗಗಳನ್ನು ಚಿಕಿತ್ಸೆ ನೀಡಿ ಗುಣಪಡಿಸಬಹುದು ಇದಕ್ಕಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ವಿವಿಧ ಕೇಂದ್ರಗಳನ್ನು ಪ್ರಾರಂಭಿಸಿ ಚಿಕಿತ್ಸಾ ಸೌಲಭ್ಯಗಳನ್ನು ನೀಡುತ್ತಿದೆ. ಈ ಸೌಲಭ್ಯದ ಅರಿವು ರೋಗಿಗಳಿಗೆ ಮೂಡಿಸುವುದು ದಿನಾಚರಣೆಯ ಉದ್ದೇಶವಾಗಿದೆ ಎಂದು ಅವರು ಹೇಳಿದರು.

ಜಾಥಾ ಹಾಗೂ ವೇಧಿಕೆ ಕಾರ್ಯಕ್ರಮದಲ್ಲಿ ಜಿಲ್ಲಾ ಕುಷ್ಠರೋಗ ನಿಮೂಲನಾ ಅಧಿಕಾರಿ ಡಾ॥ ಅರ್ಚನಾ ಕುಲಕರ್ಣಿ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಪರಶುರಾಮ ಹಿಟ್ನಳ್ಳಿ, ಜಿಲ್ಲಾ ಮಲೇರಿಯಾ ಅಧಿಕಾರಿ ಡಾ.ಜಾನ್ ಕಟವಟೆ, ಮನೋರೋಗ ತಜ್ಞ ಡಾ.ಚೌಕಿಮಠ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಜಿ.ಎಂ.ಕೋಲೂರ, ಸುರೇಶ ಹೊಸಮನಿ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೇಖಾ ದಶವಂತ, ಕೆ.ಬಿ ಬಾಗವಾನ ಕ್ಲಿನಿಕ್ ಸೈಕಾಲೋಜಿಸ್ಟ್, ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗದವರು, ವಿವಿಧ ನರ್ಸಿಂಗ ಕಾಲೇಜಿನ ಭೋದಕ ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿ/ವಿದ್ಯಾರ್ಥಿನಿಯರು ಹಾಗೂ ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ಅ.17 ರಂದು ಜಿಲ್ಲಾ ಮಟ್ಟದ ಯುವಜನೋತ್ಸವ

**ಕಾರವಾರ:** ಪ್ರಸಕ್ತ ಸಾಲಿನಲ್ಲಿ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕಾರವಾರ ಹಾಗೂ ಯುವಕ ಸಂಘಗಳ ಸಂಯುಕ್ತ ಆಶ್ರಯದಲ್ಲಿ ಅ.17 ರಂದು ಬೆಳಗ್ಗೆ 10 ಗಂಟೆಗೆ ಭಟ್ಕಳದಲ್ಲಿ ಹಮ್ಮಿಕೊಳ್ಳಲಾಗಿದೆ.

ಯುವ ಜನೋತ್ಸವದ ಅಂಗವಾಗಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಅಯೋಜಲಾಗಿದ್ದು, ಜಾನಪದ ನೃತ್ಯ (ತಂಡ), ಜಾನಪದ ಗೀತೆ (ತಂಡ) ಪ್ರಾದೇಶಿಕ ಭಾಷೆ, ಕಥೆ ಬರೆಯುವುದು (1000 ಪದಗಳಿಗೆ ಮೀರದಂತೆ)– ಹಿಂದಿ/ಆಂಗ್ಲ ಪ್ರಾದೇಶಿಕ ಭಾಷೆಯಲ್ಲಿ, ಚಿತ್ರಕಲೆ J3 Size i.e 11.7”x16.5”, Declamation (ಘೋಷಣೆ) ಹಿಂದಿ ಮತ್ತು ಆಂಗ್ಲ ಭಾಷೆಯಲ್ಲಿ ಇರಬೇಕು. ಸ್ಪರ್ಧಿಗಳು ಸಿದ್ದಪಡಿಸಿಕೊಂಡಿರುವ ಆಯ್ದ ವಿಷಯಗಳ ಬಗ್ಗೆ 7 ನಿಮಿಷಗಳ ಭಾಷಣ ಮಾಡಬೇಕು, ಕವಿತೆ ಬರೆಯುವುದು (ವೈಯಕ್ತಿಕ– ಹಿಂದಿ/ಆಂಗ್ಲ/ಪ್ರಾದೇಶಿಕ ಭಾಷೆಯಲ್ಲಿ, Innovation Track: ವಿಜ್ಞಾನ ಪ್ರದರ್ಶನ ಮೇಳ ರಾಜ್ಯ ಮಟ್ಟದವರೆಗೆ ಮಾತ್ರ ಆಯೋಜಿಸಲಾಗುವುದು.

**ಸೂಚನೆ:** ಸ್ಪರ್ಧಿಗಳು ಉತ್ತರ ಕನ್ನಡ ಜಿಲ್ಲೆಯವರಾಗಿರಬೇಕು. (ವಾಸಸ್ಥಳ ದೃಢೀಕರಣ ಪತ್ರವನ್ನು ಕಡ್ಡಾಯವಾಗಿ ನೀಡಬೇಕು). 15 ರಿಂದ 29 ವರ್ಷದ ಒಳಗಿರಬೇಕು. ವಯಸ್ಸಿನ ದೃಢೀಕರಣ ಪತ್ರ ಕಡ್ಡಾಯವಾಗಿ ನೀಡಬೇಕು. (ಆಧಾರ ಕಾರ್ಡ ಮೂಲ ಪ್ರತಿ/ ಎಸ್.ಎಸ್.ಎಲ್.ಸಿ ಅಂಕಪಟ್ಟಿ ಅಥವಾ ಜನನ ಪ್ರಮಾಣ ಪತ್ರದ ದಾಖಲೆಯನ್ನು ತರತಕ್ಕದ್ದು.) ಯುವಜನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವವರು ಅ.17 ರಂದು ಬೆಳಿಗ್ಗೆ 9 ಗಂಟೆಗೆ ಭಟ್ಕಳದಲ್ಲಿ ಸಂಘಟಕರಲ್ಲಿ ವರದಿ ಮಾಡಿಕೊಳ್ಳತಕ್ಕದ್ದು.

ಪಕ್ಕ ವಾದ್ಯ, ಧ್ವನಿ ಮುದ್ರಿತ ಕ್ಯಾಸೆಟ್‌ಗಳು, ರಂಗ ಸಜ್ಜಿಕೆ, ವೇಷಭೂಷಣ ಇತ್ಯಾದಿ ಪೂರಕ ಉಪಕರಣಗಳನ್ನು ಸ್ಪರ್ಧಿಗಳೇ ಸಿದ್ದ ಪಡಿಸಿಕೊಳ್ಳಬೇಕು. ಯಾವುದೇ ಸ್ಪರ್ಧೆಗಳಲ್ಲಿ ಚಲನಚಿತ್ರ ಗೀತೆಗಳಿಗೆ ಅವಕಾಶವಿರುವುದಿಲ್ಲ. ಜಾನಪದ ನೃತ್ಯ ಮತ್ತು ಗೀತೆ ವಿಭಾಗದಲ್ಲಿ ಪೂರ್ತಿ ಭಾರತೀಯ/ಕರ್ನಾಟಕದ ಜಾನಪದದ ಪ್ರಕಾರ ಮಾತ್ರ ಇರಬೇಕು. ರಾಷ್ಟ್ರ ಮಟ್ಟದ ಯುವಜನೋತ್ಸವದಲ್ಲಿ ಸತತವಾಗಿ 3 ವರ್ಷಗಳು ಭಾಗವಹಿಸಿದ ಅಥವಾ ಒಂದು ಬಾರಿ ಪದಕ ಪಡೆದ ಸ್ಪರ್ಧಿಗಳು ಜಿಲ್ಲಾ ಹಂತದಿಂದಲೇ ಸ್ಪರ್ಧಿಸುವಂತಿಲ್ಲ. ಭಾಗವಹಿಸುವಂತಹ ಸ್ಪರ್ಧಾಳುಗಳಿಗೆ ಹೋಗಿಬರುವ ಸಾಮಾನ್ಯ ಪ್ರಯಾಣ ಭತ್ಯೆಯನ್ನು ಸ್ಥಳದಲ್ಲೇ ನೀಡಲಾಗುವುದು ಮತ್ತು ಊಟದ ವ್ಯವಸ್ಥೆ ಮಾಡಲಾಗುವುದು. ಸ್ಪರ್ಧಾ ಕಾರ್ಯಕ್ರಮದಲ್ಲಿ ಕೇವಲ ಪ್ರಥಮ ಸ್ಥಾನವನ್ನು ಪಡೆದವರು ಮಾತ್ರ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಲು ಅರ್ಹರಾಗಿರುತ್ತಾರೆ. ವಿಜೇತ ಸ್ಪರ್ಧಾಳುಗಳಿಗೆ ಟ್ರೋಪಿ, ಮೆಡಲ್ಸ್ ನೀಡಲಾಗುವುದು ತೀರ್ಪುಗಾರರ ತೀರ್ಮಾನವೇ ಅಂತಿಮವಾಗಿರುತ್ತದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅ.15ರಂದು ಜಿಲ್ಲಾಮಟ್ಟದ ಯುವಜನೋತ್ಸವ

**ಬಾಗಲಕೋಟೆ:** ಪ್ರಸಕ್ತ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವವನ್ನು ಅಕ್ಟೋಬರ್ 15 ರಂದು ಬೆಳಗ್ಗೆ 9:30ಕ್ಕೆ ನವನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜು ಸೆಕ್ಟರ್ ನಂ.43 ರಲ್ಲಿ ಆಯೋಜಿಸಲಾಗಿದೆ. ಈ ಕಾರ್ಯಕ್ರಮವನ್ನು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ನೆಹರೂ ಯುವ ಕೇಂದ್ರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಸಂಯುಕ್ತ ಆಶ್ರಯದಲ್ಲಿ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆಸಲಾಗುತ್ತಿದೆ. 15 ರಿಂದ 29 ವರ್ಷದ ಯುವಕರು ಹಾಗೂ ಯುವತಿಯರಿಗಾಗಿ ಜನಪದ ನೃತ್ಯ, ಜನಪದ ಗೀತೆ, ಕಥೆ ಬರೆಯುವುದು, ಚಿತ್ರಕಲೆ, ಘೋಷಣೆ, ಕವಿತೆ ಬರೆಯುವುದು ಮತ್ತು ವಿಜ್ಞಾನ ಮೇಳ ಸೇರಿದಂತೆ ವಿವಿಧ ಸ್ಪರ್ಧೆಗಳು ನಡೆಯಲಿವೆ. ವಿಜೇತರಿಗೆ ನಗದು ಬಹುಮಾನ ನೀಡಿ, ಪ್ರಥಮ ಸ್ಥಾನ ಪಡೆದವರನ್ನು ರಾಜ್ಯ ಮಟ್ಟದ ಯುವಜನೋತ್ಸವಕ್ಕೆ ಆಯ್ಕೆ ಮಾಡಲಾಗುತ್ತದೆ. ಸ್ಪರ್ಧಾಳುಗಳಿಗೆ ಊಟ ಮತ್ತು ಉಪಹಾರದ ವ್ಯವಸ್ಥೆ ಮಾಡಲಾಗಿದೆ. ಭಾಗವಹಿಸುವವರು ನೊಂದಣಿಯ ವೇಳೆ ಆಧಾರ್ ಕಾರ್ಡ್ ಕಡ್ಡಾಯವಾಗಿ ಹಾಜರುಪಡಿಸಬೇಕು. ಹೆಚ್ಚಿನ ಮಾಹಿತಿಗಾಗಿ 08354–235896, 9945284771 ಅಥವಾ 9731352524 ಸಂಖ್ಯೆಗೆ ಸಂಪರ್ಕಿಸಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ಬಾಗಲಕೋಟೆ:** ಪ್ರಸಕ್ತ ಶೈಕ್ಷಣಿಕ ವರ್ಷಕ್ಕಾಗಿ ಅನಿವಾಸಿ ಭಾರತೀಯರು, ಅವರ ಮಕ್ಕಳು ಹಾಗೂ ಅವರಿಂದ ಪ್ರಾಯೋಜಿತ ಅಭ್ಯರ್ಥಿಗಳಿಗೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟದಲ್ಲಿ "ಬಿ.ಎಸ್ಸಿ. (ಹಾನರ್ಸ್) ತೋಟಗಾರಿಕೆ, ಬಿ.ಟೆಕ್ (ಆಹಾರ ತಂತ್ರಜ್ಞಾನ)"ಪದವಿ ಕಾರ್ಯಕ್ರಮಗಳಲ್ಲಿ ಭರ್ತಿಯಾಗದೇ ಖಾಲಿ ಉಳಿದಿರುವ ಸೀಟುಗಳ ಪ್ರವೇಶಕ್ಕಾಗಿ ಕೌನ್ಸಲಿಂಗ್ ಮೂಲಕ ಅಕ್ಟೋಬರ್ 16 ರಂದು ಭರ್ತಿಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಯನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್ https://uhsbagalkot.karnataka.gov.in ನಿಂದ ಪಡೆಯಬಹುದಾಗಿದೆ ಎಂದು ವಿಶ್ವವಿದ್ಯಾಲಯದ ಕುಲಸಚಿವ ಮಹಾದೇವ ಮುರಗಿ ಪ್ರಕಟಣೆ ತಿಳಿಸಿದ್ದಾರೆ.

## ಅ. 16ರಂದು ಜಿಲ್ಲಾ ಮಟ್ಟದ ಯುವಜನೋತ್ಸವ

**ಧಾರವಾಡ:** 2025–26 ನೇ ಸಾಲಿನ ಧಾರವಾಡ ಜಿಲ್ಲಾ ಮಟ್ಟದ ಯುವಜನೋತ್ಸವದ ಸ್ಪರ್ಧೆಗಳನ್ನು ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ, ರಾಷ್ಟ್ರೀಯ ಸೇವಾ ಯೋಜನಾ ಕೋಶ, ಕರ್ನಾಟಕ ವಿಶ್ವವಿದ್ಯಾಲಯ ಮತ್ತು ಜೆ.ಎಸ್. ಎಸ್. ಸಮೂಹ ಸಂಸ್ಥೆಗಳು ವಿದ್ಯಾಗಿರಿ, ಧಾರವಾಡ ಇವರ ಸಂಯುಕ್ತ ಆಶ್ರಯದಲ್ಲಿ ಅಕ್ಟೋಬರ್ 16, 2025 ರಂದು ಬೆಳಿಗ್ಗೆ 9:30 ಗಂಟೆಗೆ ಧಾರವಾಡದ ವಿದ್ಯಾಗಿರಿಯ ಜೆ.ಎಸ್.ಎಸ್. ಕಾಲೇಜು ಆವರಣದಲ್ಲಿನ ಉತ್ಸವ ಕಲಾಕ್ಷೇತ್ರದಲ್ಲಿ ಆಯೋಜಿಸಲಾಗಿದೆ. ಆಸಕ್ತಿಯುಳ್ಳ 15 ರಿಂದ 29 ವರ್ಷ ವಯೋಮಿತಿಯ ಸ್ಪರ್ಧಾಳುಗಳು ಹಾಗೂ ಯುವಕ, ಯುವತಿ ಮಂಡಳದ ಸದಸ್ಯರು, ಕಾಲೇಜು ಯುವಕ, ಯುವತಿಯರು ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಬಹುದಾಗಿದೆ. ಅಕ್ಟೋಬರ್ 16, 2025 ರಂದು ಬೆಳಿಗ್ಗೆ 9:30 ರೊಳಗಾಗಿ ಉತ್ಸವ ಕಲಾಕ್ಷೇತ್ರದಲ್ಲಿ ಹೆಸರು ನೊಂದಾಯಿಸಿಕೊಳ್ಳಬೇಕು.

**ಸ್ಪರ್ಧೆಗಳು:** ಜನಪದ ನೃತ್ಯ, ಜನಪದ ಗೀತೆ, ವಿಜ್ಞಾನ ಮೇಳದ ಪ್ರದರ್ಶನ ಸ್ಪರ್ಧೆಗಳು (ತಂಡಗಳು), ಕಥೆ ಬರೆಯುವುದು, ಚಿತ್ರಕಲೆ, ಕವಿತೆ ಬರೆಯುವುದು (ವಯಕ್ತಿಕ) ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಸ್ಪರ್ಧೆಗಳ ನಿಯಮಾವಳಿ ಹಾಗೂ ಷರತ್ತುಗಳ ಕುರಿತು ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0836–2447424ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾ ಪಂಚಾಯತ ಸಿಇಓ ಭುವನೇಶ ಪಾಟೀಲ ನಿರ್ದೇಶನ

## ಕುಡಿಯುವ ನೀರಿನ ಘಟಕದ ನೀರಿನ ಮಾದರಿ ಪರೀಕ್ಷೆ



**ಧಾರವಾಡ:** ಮಿಶ್ರಿಕೋಟಿ ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳಿಂದ ಅಶುದ್ಧ ನೀರು ಸರಬರಾಜು ಆಗುತ್ತಿದೆ ಎಂಬ ಸಾರ್ವಜನಿಕ ದೂರಿನ ಬಗ್ಗೆ ಇಂದೇ ಪರಿಶೀಲಿಸಿ, ಸೂಕ್ತ ಕ್ರಮವಹಿಸಲು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ನಿರ್ದೇಶನ ನೀಡಿದ ಹಿನ್ನಲೆಯಲ್ಲಿ ಇಂದು (ಅ.10) ಬೆಳಿಗ್ಗೆ ಮಿಶ್ರಿಕೋಟಿ ಗ್ರಾಮಕ್ಕೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು ಗ್ರಾಮಕ್ಕೆ ಭೇಟಿ ನೀಡಿ, ಪರಿಶೀಲಿಸಿದರು.

ಮಿಶ್ರಿಕೋಟಿ ಗ್ರಾಮದಲ್ಲಿ ಗ್ರಾಮಸ್ಥರಿಗೆ ಕುಡಿಯುವ ನೀರು ಸರಬರಾಜು ಮಾಡಲು ಮೂರು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ. ಲೋಕೋಪಯೋಗಿ ಇಲಾಖೆಯ ರಸ್ತೆ ಕಾಮಗಾರಿ ಹಿನ್ನಲೆಯಲ್ಲಿ ನೀರು ಸರಬರಾಜು ಪೈಪ್ ಒಡೆದು ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಿದ್ದು, ಶೀಘ್ರದಲ್ಲಿ ಗ್ರಾಮಪಂಚಾಯತಿಯಿಂದ ಪೈಪ್ ದುರಸ್ತಿ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ.

ಉಳಿದಂತೆ ಗ್ರಾಮದ ಎರಡು ಶುದ್ಧ ಕುಡಿಯುವ ನೀರಿನ ಘಟಕಗಳಿಂದ ನಿರಂತರವಾಗಿ ಸಾರ್ವಜನಿಕರಿಗೆ ನೀರು ಸರಬರಾಜು ಮಾಡಲಾಗುತ್ತಿದೆ. ಆದರೆ ಕೆಲವರು ಘಟಕಗಳಿಂದ ಅಶುದ್ಧ ನೀರು ಬರುತ್ತಿದೆ ಎಂದು ದೂರು ನೀಡಿದ್ದ ಹಿನ್ನಲೆಯಲ್ಲಿ ಕಳೆದ ಸಪ್ಟೆಂಬರ 15 ರಂದು ಮತ್ತು ನಿನ್ನೆ ಅಕ್ಟೋಬರ 09 ರಂದು ಈ ಎರಡು ಘಟಕಗಳಿಂದ ನೀರಿನ ಮಾದರಿಯನ್ನು ಸಂಗ್ರಹಿಸಿ, ಪ್ರಯೋಗಾಲಯದಲ್ಲಿ ಕುಡಿಯುವ ನೀರಿನ ಪರೀಕ್ಷೆ ಕೈಗೊಳ್ಳಲಾಗಿದೆ. ಎರಡೂ ಸಲ ಪರೀಕ್ಷಿಸಿದಾಗ ಕುಡಿಯಲು ಯೋಗ್ಯವಿರುವ ನೀರು ಎಂದು ವರದಿ ಬಂದಿದೆ. ಆದ್ದರಿಂದ ಸಾರ್ವಜನಿಕರು ಯಾವುದೇ ಆತಂಕವಿಲ್ಲದೇ ಕುಡಿಯಲು ಈ ಎರಡು ಘಟಕಗಳ ನೀರನ್ನು ಬಳಸಬಹುದೆಂದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರ ಎಚ್.ಪಿ. ರಜಪೂತ ಅವರು ತಿಳಿಸಿದ್ದಾರೆ.

ನೀರು ಪರೀಕ್ಷಾ ಸಮಯದಲ್ಲಿ ಇಲಾಖೆಯ ಸೆಕ್ಷನ್ ಅಧಿಕಾರ ಜಯದೀಪ್ ಪಾಟೀಲ, ಜೆಇ ಸುಜೀತ್, ಮಿಶ್ರಿಕೋಟಿ ಗ್ರಾಮ ಪಂಚಾಯತ ಕಾರ್ಯದರ್ಶಿ ಶಂಭುಲಿಂಗಪ್ಪ ಹೊಸಮನಿ, ಗ್ರಾಮಸ್ಥರಾದ ಮುತ್ತು ಪಾಟೀಲ, ಡಾ. ಮಹೇಶ ತಿಮ್ಮಣ್ಣವರ, ಸದಾನಂದ ಅಂಗಡಿ ಸೇರಿದಂತೆ ಇತರರು ಇದ್ದರು.

## ಮನೆ ಮನೆ ಭೇಟಿ ನೀಡಿ ಇ ಕೆವೈಸಿ ಪ್ರಕ್ರಿಯೆ ನಡೆಸಿದ ತಾಪಂ ಇಓ

**ಮುಂಡರಗಿ:** ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿ ಕೆಲಸ ಮಾಡುತ್ತಿರುವ ಕೂಲಿಕಾರರಿಗೆ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದಿಂದ ಇ–ಕೆವೈಸಿ ಕಡ್ಡಾಯವಾಗಿರುವ ಹಿನ್ನೆಲೆ ತಾಪಂ ಇಓ ವಿಶ್ವನಾಥ ಹೊಸಮನಿ ಕೊರ್ಲಹಳ್ಳಿ ಗ್ರಾಪಂ ವ್ಯಾಪ್ತಿಯ ಬೆಣ್ಣಿಹಳ್ಳಿ ಗ್ರಾಮದ ಮನೆಮನೆಗಳಿಗೆ ಭೇಟಿ ನೀಡಿ ಇ–ಕೆವೈಸಿ ಪ್ರಕ್ರಿಯೆಯನ್ನು ಖುದ್ದು ಅವರೇ ನಿರ್ವಹಿಸಿದರು.

ನರೇಗಾ ಯೋಜನೆಯ ವಿಶ್ವಾಸಾರ್ಹತೆ ಹಾಗೂ ಪಾರದರ್ಶಕತೆ ಹೆಚ್ಚಿಸುವ ನಿಟ್ಟಿನಲ್ಲಿ ಇ ಕೆವೈಸಿ ಪ್ರಕ್ರಿಯೆ ಪೂರ್ಣಗೊಂಡರೆ ಕೂಲಿ ಪಾವತಿಗೆ ವೇಗ ಸಿಗಲಿದೆ. ಈ ಪ್ರಕ್ರಿಯೆಯಲ್ಲಿ ಫೇಸ್ ಅಥೆಂಟಿಕೇಶನ್ ಮೂಲಕ ಮಾಹಿತಿಯನ್ನು ನಿಖರವಾಗಿ ದಾಖಲಿಸಬಹುದು. ಕಾಮಗಾರಿ ನಂತರ ಕೂಲಿಕಾರರ ಪೋಟೋ ಮತ್ತವರ ಆಧಾರ್ ಸಂಖ್ಯೆಯೊಂದಿಗೆ ಹಾಜರಾತಿ ದೃಢೀಕರಣವು ನಡೆಯಲಿದೆ.

ಎನ್ ಎಂಎಂಎಸ್ (ನ್ಯಾಷನಲ್ ಮೋಬೈಲ್ ಮಾನಿಟರಿಂಗ್ ಸಿಸ್ಟಂ) ಇ ಕೆವೈಸಿ ಪ್ರಕ್ರಿಯೆ ನರೇಗಾ ಕೂಲಿಕಾರರಿಗೆ ಕಡ್ಡಾಯವಾಗಿದ್ದು, ಮುಂಡರಗಿ ತಾಲೂಕಿನಲ್ಲಿ ಈ ಪ್ರಕ್ರಿಯೆ ಜಾರಿಯಲ್ಲಿದೆ. ಇದನ್ನು ತೀವ್ರತರದಲ್ಲಿ ಪ್ರಗತಿ ಸಾಧಿಸುವ ನಿಟ್ಟಿನಲ್ಲಿ ತಾಪಂ ಇಓ ವಿಶ್ವನಾಥ ಅವರು, ಬೆಣ್ಣಿಹಳ್ಳಿ ಗ್ರಾಮದ ನರೇಗಾ ಕೂಲಿಕಾರರ ಮನೆಮನೆಗೆ ಭೇಟಿ ನೀಡಿ ಖುದ್ದು ತಾವೇ ಮೋಬೈಲ್ ಮೂಲಕ ಪ್ರಕ್ರಿಯೆಯನ್ನು ನಿರ್ವಹಿಸಿದರು. ನರೇಗಾ ಯೋಜನೆ ಮೂಲಕ ಗ್ರಾಮೀಣ ಜನರಿಗೆ, ಕೂಲಿಕಾರರಿಗೆ 100 ದಿನಗಳ ಉದ್ಯೋಗ ಖಾತ್ರಿಯಾಗಿದ್ದು, ಪಾರದರ್ಶಕತೆಯಿಂದ ಕೇಂದ್ರ ಹಾಗೂ ರಾಜ್ಯ ಸರಕಾರಗಳ ಮಹತ್ವಾಕಾಂಕ್ಷಿ ಯೋಜನೆಯ ಕಾಮಗಾರಿಗಳ ಸಮರ್ಪಕ ಅನುಷ್ಠಾನದ ಜೊತೆಗೆ ಪಾರದರ್ಶಕ ಹಾಜರಾತಿಗೆ ಇ ಕೆವೈಸಿ ವಿಧಾನ ವರದಾನವಾಗಿದೆ.

### ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ, ೯೦ ದಿನಗಳ ವಿಶೇಷ ಅಭಿಯಾನ ಯಶಸ್ವಿ

## ಮಧ್ಯಸ್ಥಿಕೆ ಮೂಲಕ 235 ಪ್ರಕರಣಗಳು ಇತ್ಯರ್ಥ



**ಬಾಗಲಕೋಟೆ:** ರಾಷ್ಟ್ರವ್ಯಾಪ್ತಿ ಮಧ್ಯಸ್ಥಿಕೆ ಅಭಿಯಾನದ ಅಂಗವಾಗಿ ಜಿಲ್ಲಾ ನ್ಯಾಯಾಲಯ ಹಾಗೂ ಅಧೀನ ನ್ಯಾಯಾಲಯಗಳಲ್ಲಿ ಹಮ್ಮಿಕೊಂಡ 90 ದಿನಗಳ ವಿಶೇಷ ಅಭಿಯಾನದಲ್ಲಿ ಒಟ್ಟು 235 ಪ್ರಕರಣಗಳನ್ನು ಮಧ್ಯಸ್ಥಿಕೆಯ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎನ್.ವಿ.ವಿಜಯ್ ತಿಳಿಸಿದ್ದಾರೆ.

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ, ಮಧ್ಯಸ್ಥಿಕೆ ಮತ್ತು ಸಂದಾನ ಯೋಜನಾ ಸಮಿತಿ ಹಾಗೂ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಜಿಲ್ಲೆಯಲ್ಲಿ ಜುಲೈ 1 ರಿಂದ ಅಕ್ಟೋಬರ 7 ವರೆಗೆ ಬಾಗಲಕೋಟೆ ಜಿಲ್ಲೆಯ ಎಲ್ಲ ನ್ಯಾಯಾಲಯಗಳಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ 90 ದಿನಗಳ ವಿಶೇಷ ಅಭಿಯಾನ ಯಶಸ್ವಿಯಾಗಿ ನಡೆಸಲಾಗಿದ್ದು, ಈ ಅಭಿಯಾನದಲ್ಲಿ ಒಟ್ಟು 235 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. ಈ ಅಭಿಯಾನದಲ್ಲಿ 1640 ಪ್ರಕರಣಗಳನ್ನು ಮಧ್ಯಸ್ಥಿಕೆ ಅಭಿಯಾನದಲ್ಲಿ ತೆಗೆದುಕೊಳ್ಳಲಾಗಿದ್ದು, ಈ ಪೈಕಿ 403 ಪ್ರಕರಣಗಳ ಮಧ್ಯಸ್ಥಿಕೆ ನಡೆಸಲಾಯಿತು. ಮಧ್ಯಸ್ಥಿಕೆಯಲ್ಲಿ ಒಟ್ಟು 235 ಪ್ರಕರಣಗಳು ಇತ್ಯರ್ಥಗೊಂಡಿರುತ್ತವೆ. ಅದರಲ್ಲಿ ಮೂರು ವೈವಾಹಿಕ ವಿವಾದಗಳು, 4 ಅಪಘಾತದ ಹಕ್ಕು ಪ್ರಕರಣಗಳು, 6 ಚೆಕ್ ಬೌನ್ಸ್ ಪ್ರಕರಣಗಳು, 10 ಕ್ರೀಮಿನಲ್ ಕಂಪೌಂಡೇಬಲ್ ಪ್ರಕರಣಗಳು, 59 ವಿಭಜನೆ ಪ್ರಕರಣಗಳು, 126 ಭೂಸ್ವಾಧೀನ ಪ್ರಕರಣಗಳು ಹಾಗೂ 27 ಇತರೆ ನಾಗರಿಕ ವಿವಾದಗಳನ್ನು ಮಧ್ಯಸ್ಥಿಕೆಯ ಮೂಲಕ ಇತ್ಯರ್ಥಗೊಂಡಿವೆ. ಮಧ್ಯಸ್ಥಿಕೆ ಅಭಿಯಾನದ ಯಶಸ್ವಿಗೆ ಸಹಕರಿಸಿದ ವಕೀಲರು, ಕಕ್ಷಿದಾರರು, ಮಧ್ಯಸ್ಥಿಕೆದಾರರು ಹಾಗೂ ಸಾರ್ವಜನಿಕರಿಗೆ ಅಭಿನಂದನೆ ಸಲ್ಲಿಸಿದ್ದಾರೆ.



**ಬನಹಟ್ಟಿಯ ಅಲ್ಲಮಪ್ರಭುದೇವರ ಮಠದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಅಡಿಯಲ್ಲಿ ಬನಹಟ್ಟಿ ಮತ್ತು ಯಲ್ಲಟ್ಟಿಯ ವಲಯದ ಒಕ್ಕೂಟ ಪದಾಧಿಕಾರಿಗಳ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಶ್ರೀಶೈಲ ಪಾನಶೆಟ್ಟಿ, ನಿಂಗಪ್ಪ ಗುಡಸಲಮನಿ, ಶಿವಾನಂದ ಎಂ.ವೈ. ಶೋಭಾ ಅಂಬಿ, ಲಕ್ಷ್ಮಿ ತೇಲಿ, ಶಶಿಕಾಂತ ಕಾಂಬಳೆ, ಜ್ಯೋತಿ ಸೇರಿದಂತೆ ಅನೇಕರಿದ್ದರು.**

### ಡಿ.12 ರಿಂದ ಬೃಹತ್ ಸಿದ್ಧಚಕ್ರ ಆರಾಧನೆ

## ಪೂಜಾ ಕಿಟ್ ಬಿಡುಗಡೆ: ಪ್ರಚಾರಕ್ಕೆ ಚಾಲನೆ



**ಹಾವೇರಿ:** ಹಾವೇರಿ ನಗರದಲ್ಲಿ ಮೊದಲಬಾರಿಗೆ ಸಿದ್ಧಚಕ್ರ ಮಹಾಮಂಡಲ ಆರಾಧನೆ ದಿನಾಂಕ 12–12–2025 ರಿಂದ 20–12–2025ರವರೆಗೆ ಹಮ್ಮಿಕೊಳ್ಳಲಾಗಿದೆ. ಈ ಸಿದ್ಧಚಕ್ರ ಆರಾಧನೆ ವಿಧಾನದಲ್ಲಿ ಎಲ್ಲರೂ ಸಕ್ರಿಯವಾಗಿ ಪಾಲ್ಗೊಂಡು ಧರ್ಮದ ಲಾಭ ಪಡೆದುಕೊಳ್ಳಬೇಕು ಎಂದು ಮುನಿಶ್ರೀ 108 ವಿಧಿತಸಾಗರಜಿ ಮಹಾರಾಜರ ಹೇಳಿದರು.

ಹಾವೇರಿ ನಗರದ ಜಿನಮಂದಿರದಲ್ಲಿ ಗುರುವಾರ ಸಿದ್ಧಚಕ್ರ ಆರಾಧನೆ ಪೂಜಾ ಸಿದ್ಧಚಕ್ರ ಆರಾಧನಾ ಕಿಟ್‌ನ್ನು ಬಿಡುಗಡೆಗೊಳಿಸಿದರು ಹಾಗೂ ಪ್ರಚಾರಕ್ಕೆ ಚಾಲನೆ ನೀಡಿ ಆಶೀರ್ವಚನ ನೀಡಿದರು.

ಸಿದ್ಧಚಕ್ರ ಆರಾಧನೆಗೆ ಅಗತ್ಯ ಸಿದ್ಧತೆಗಳು ಈಗಾಗಲೇ ಆರಂಭವಾಗಿದ್ದು, ಪೂಜಾ, ಆಹಾರ, ವಸತಿ , ಮೆರವಣಿಗೆ, ಅಲಂಕಾರ, ಸಾಂಸ್ಕೃತಿಕ ಸಮಿತಿಗಳನ್ನು ರಚಿಸಲಾಗಿದ್ದು, ಆಯಾ ಸಮಿತಿಗಳು ಯಾವುದೇ ವ್ಯತ್ಯಯವಾಗದಂತೆ ಅತ್ಯಂತ ಅಚ್ಚುಕಟ್ಟಾಗಿ ಆಯೋಜನೆಗೆ ಸಿದ್ಧತೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಪೂಜಾ ಕಿಟ್‌ನಲ್ಲಿ, ಎರಡು ಬಿಳಿ ಕಾಟನ್ ಸೀರೆ ಮತ್ತು ಎರಡು ಸೆಟ್ ಧೋತಿ ದುಪ್ಪಟ್ಟ, ಕಿರೀಟ, ಜಪ ಮಾಲೆ, ಕಳಸ, ಪೂಜಾ ಪಾತ್ರೆ, ಪುರುಷರಿಗೆ ಒಂದು ಟೀ ಶರ್ಟ್ ಇರುತ್ತದೆ. ಪೂಜೆ ಕುಳಿತುಕೊಳ್ಳುವವರಿಗೆ ಶುದ್ಧ ಆಹಾರ, ಅವಶ್ಯಕತೆ ಇದ್ದವರಿಗೆ ವಸತಿ ವ್ಯವಸ್ಥೆ ಕಲ್ಪಿಸಲಾಗಿದೆ. ಈ ಕುರಿತು ಹಾವೇರಿ ನಗರ, ಸುತ್ತಮಲಿನ ಗ್ರಾಮಗಳು, ಅಕ್ಕಪಕ್ಕದ ಜಿಲ್ಲೆಗೆಗಳಲ್ಲಿ ವ್ಯಾಪಕ ಪ್ರಚಾರ ಕೈಗೊಂಡು ಸಿದ್ಧಚಕ್ರ ಆರಾಧನೆ ಕುರಿತು ಮಾಹಿತಿ ನೀಡಬೇಕು ಎಂದು ಪ್ರಚಾರ ಸಮಿತಿಗೆ ಸಲಹೆ ನೀಡಿದರು.

ಸಿದ್ಧಚಕ್ರ ಆರಾಧಾನ ಕಮೀಟಿ, ಭಗವಾನ ಶ್ರೀ 1008 ನೇಮಿನಾಥ ದಿಗಬಂದ ಜೈನ ಮಂದಿರ ಕಮೀಟಿ, ರತ್ನತ್ರಯ ಮಹಿಳಾ ಸಮಾಜ, ಭಾರತೀಯ ಜೈನ್ ಮಿಲನ್, ಸಮ್ಯಕ್ ಜ್ಞಾನ ಜಿನಧರ್ಮ ಪ್ರಭಾವನಾ ಯುವಕ ಸಂಘದ ಸರ್ವ ಸದಸ್ಯರು, ಸಮಸ್ತ ಶ್ರಾವಕ ಹಾಗೂ ಶ್ರಾವಕಿಯರು ಭಾಗವಹಿಸಿದ್ದರು.

**ಆರಾಧನೆಗೆ ಆಹ್ವಾನ:** ಹಾವೇರಿ ನಗರದಲ್ಲಿ ಶುಕ್ರವಾರ ಕಮೀಟಿ ಸದಸ್ಯರು ಮನೆ ಮನೆಗೆ ಭೇಟಿ ನೀಡಿ, ಸಿದ್ಧಚಕ್ರ ಆರಾಧನೆ ಪತ್ರಿಕೆ ನೀಡುವ ಮೂಲಕ ಸಿದ್ಧಚಕ್ರ ಆರಾಧನೆಗೆ ಆಹ್ವಾನ ನೀಡಿದರು.

## ತಾಳಿಕೋಟೆಯಲ್ಲಿ ಇಂದು ಆರ್‌ಎಸ್‌ಎಸ್ ಪಥಸಂಚಲನ

**ವರದಿ: ಜಿ.ಪಿ. ಘೋರ್ಪಡೆ.**




**ತಾಳಿಕೋಟೆ:** ಭಗವಾ ಧ್ವಜವೆಂಬುದು ಅನಾಧಿಕಾಲದಿಂದಲೂ ಹಿಂದೂ ಸಂಸ್ಕೃತಿಯನ್ನು ಬಿಂಬಿಸುತ್ತಿರುವ ಧರ್ಮದ ಸಂಕೇತವಾಗಿದ್ದು ಇದು ಶ್ರೇಷ್ಠ ಪರಂಪರೆಯನ್ನು ಬಿಂಬಿಸುವಂತಹದ್ದಾಗಿದೆ. ಇದನ್ನು ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಲಾಂಛನವಾಗಿ ಅಳವಡಿಸಿಕೊಳ್ಳಲಾಯಿತು.

ಮುಖ್ಯವಾಗಿ ಹಿಂದೂ ರಾಷ್ಟ್ರೀಯವಾದಿಗಳು ಶೌರ್ಯ ಮತ್ತು ಹಿಂದುತ್ವದ ಸಿದ್ದಾಂತದ ಸಂಕೇತವಾಗಿ ಬಳಸಿದ್ದಾರೆ ಇದು ಅಲ್ಲದೇ ಓಂಕಾರ ಎಂಬುದು ಹಾಗೂ ಸ್ವಸ್ತಿಕ ಎಂಬವುಗಳು ಧಾರ್ಮಿಕ ಚಿಹ್ನೆಗಳೆಂದು ಬಳಸಲಾಗುತ್ತಾ ಸಾಗಿಬರಲಾಗಿದೆ ಅಂತಹ ಮಹತ್ವದ ಶೌರ್ಯದ ಸಂಕೇತವಾಗಿರುವ ಭಗವಾಧ್ವಜಗಳನ್ನು ತಾಳಿಕೋಟೆ ಪಟ್ಟಣದಲ್ಲಿ ವಿವಿಧ ಪ್ರಮುಖ ಸ್ಥಳಗಳಲ್ಲಿ ಈಗಾಗಲೇ ರಾಷ್ಟ್ರೀಯ ಸ್ವಯಂ ಸೇವಕರು ಇದೇ ದಿ. 12 ರಂದು ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಶತಮಾನೋತ್ಸವ ಅಂಗವಾಗಿ ಜರುಗಲಿರುವ ಆರ್‌ಎಸ್‌ಎಸ್ ಪಥಸಂಚಲನದ ಪ್ರಮುಖ ಮಾರ್ಗಗಳ ಮಧ್ಯದಲ್ಲಿ ಹಾಗೂ ಎಡಬಲದಲ್ಲಿ ಧ್ವಜಗಳನ್ನು ನೆಡಲಾಗಿದ್ದು ಅವುಗಳು ಹೋಗುಬರುವವರಿಗೆ ಧರ್ಮ ಸಂಖ್ಯೇತವನ್ನು ಬಿಂಬಿಸುತ್ತಾ ಸಾಗಿವೆ.

ದಿ. 12 ರವಿವಾರರಂದು ಮಧ್ಯಾಹ್ನ 3 ಘಂಟೆಗೆ ಸಂಪತ್ ಸಾಯಂಕಾಲ 4 ಘಂಟೆ 10 ನಿಮಿಷಕ್ಕೆ ಬಸ್ ನಿಲ್ದಾಣದ ಎದುರಿಗಿರುವ ಕನ್ನಡ ಶಾಲಾ ಮೈದಾನದಿಂದ ಗಣವೇಷಧಾರಿ ಅಸಂಖ್ಯಾತ ಸ್ವಯಂ ಸೇವಕರ ಪಥ ಸಂಚಲನವು 2 ಮಾರ್ಗದತ್ತ ಅದೇ ಸಮಯಕ್ಕನುಸಾರ ಪ್ರಾರಂಭಗೊಳ್ಳಲಿದೆ.

ಮಾರ್ಗ ಒಂದನೇಯದ್ದರಿಂದ ಪ್ರಾರಂಭಗೊಳ್ಳಲಿರುವ ಅದೇ ಸಮಯದಲ್ಲಿಯ ಆರ್‌ಎಸ್‌ಎಸ್ ಸ್ವಯಂ ಸೇವಕರ ಪಥಸಂಚಲನವು ಪ್ರಾರಂಭಗೊಂಡು ವಿದ್ಯಾನಗರ ಬಡಾವಣೆ, ಡಾ. ಆನಂದ ಭಟ್ ಮನೆ ಮುಂಬಾಗ, ಹುಣಸಗಿ ರಸ್ತೆ, ಬಿ.ಎಸ್ ಪಾಟೀಲ ಕಾಂಪ್ಲೆಕ್ಸ್ ಮಗ್ಗಲು, ಅರುಣ ಕನಕಗಿರಿ ಮನೆ ಮುಂಭಾಗ ರಸ್ತೆ, ಪೋಲೀಸ್ ಕ್ವಾಟರ್ಸ್ ಹಿಂದೆ ಹಾಯ್ದು ಹನುಮಾನ ಮಂದಿರದ ಪಕ್ಕದ ರಸ್ತೆಗುಂಟ ಸಾಗಿ ಪೋಲೀಸ್ ಠಾಣೆ ಮಾರ್ಗಗುಂಟಾ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಸರ್ಕಲ್ ಮಾರ್ಗ, ದಿ. ಭಾವಸಾರ ಅಂಬಾಭವಾನಿ ದೇವಸ್ಥಾನ ಮಾರ್ಗ, ಕತ್ರಿ ಬಜಾರ್ ಮಾರ್ಗವಾಗಿ ಶಿವಾಜಿ ಚೌಕ್, ಬಸ್ ನಿಲ್ದಾಣ ಮಾರ್ಗ ಬಸವೇಶ್ವರ ಸರ್ಕಲ್ ಮಾರ್ಗ, ಎಸ್.ಕೆ. ಪ.ಪೂ ಕಾಲೇಜ್ ಮೈದಾನಕ್ಕೆ ತಲುಪಿ ಅಲ್ಲಿ ಸಭೆಯಾಗಿ ಮಾರ್ಪಡಲಿದೆ.

ಮಾರ್ಗ ಎರಡನೇಯದ್ದು ಕನ್ನಡ ಶಾಲಾ ಮೈದಾನದಿಂದ ಪ್ರಾರಂಭಗೊಳ್ಳಲಿರುವ ಗಣವೇಷಧಾರಿ ಸ್ವಯಂ ಸೇವಕರ ಪಥಸಂಚಲನ ಕನ್ನಡ ಶಾಲಾ ಮೈದಾನದಿಂದ ಮಹಾರಾಣಾ ಪ್ರತಾಪ್‌ಸಿಂಗ್ ಸರ್ಕಲ್ ಮಾರ್ಗ, ಶಿವಾಜಿ ಚೌಕ್ ಮುಂಭಾಗ ರಸ್ತೆ, ನಾಗರಕಲ್ ಓಣಿ, ರಾಜವಾಡೆ, ಕತ್ರಿ ಬಜಾರ್ ಮಾರ್ಗ ವಾಸವಿ ಕಲ್ಯಾಣ ಮಂಟಪ ರಸ್ತೆ, ಮಹಲ್ ಗಲ್ಲಿ ಡಾ. ಅಂಬೇಡ್ಕರ್ ನಗರ, ರಜಪೂತ್ ಗಲ್ಲಿ, ಶ್ರೀ ಖಾಸ್ಗತೇಶ್ವರ ಮಠ, ಕತ್ರಿ ಬಜಾರ್ ಮಾರ್ಗದಿಂದ ಶಿವಾಜಿ ಚೌಕ್ ಮಹಾರಾಣಾಪ್ರತಾಪ್ ಸರ್ಕಲ್ ಬಸ್ ನಿಲ್ದಾಣ ಮಾರ್ಗ ಬಸವೇಶ್ವರ ಸರ್ಕಲ್ ಮಾರ್ಗದಿಂದ ಎಸ್.ಕೆ. ಪ.ಪೂ ಕಾಲೇಜ್ ಮೈದಾನದಲ್ಲಿ ಸಭೆಯಾಗಿ ಮಾರ್ಪಡುವದು.

ಸಾಯಂಕಾಲ 5 ಘಂಟೆಗೆ ಅದೇ ಸ್ಥಳವಾದ ಎಸ್.ಕೆ. ಪದವಿ ಪೂರ್ವ ಕಾಲೇಜ್ ಮೈದಾನದಲ್ಲಿ ಸಾರ್ವಜನಿಕ ಸಮಾರಂಭ ಜರುಗುವದು.

ಪಥಸಂಚಲನದ ಮಾರ್ಗದ ಮಗ್ಗಲಿನ ಮನೆಗಳ ಮುಂದೆ ವೀರ ಮಹಾಪುರುಷರ ಭಾವಚಿತ್ರಗಳನ್ನು ಇರಿಸಿ ಹಾಗೂ ಮಾರ್ಗದ ಉದ್ದಕ್ಕೂ ರಂಗೋಲಿಗಳಿಂದ ಅಲಂಕರಿಸಿ ಮಕ್ಕಳಿಗೆ ಮಹಾಪುರುಷರ ವೇಷ ಭೂಷಣ ತೊಡಿಸಿ ಪ್ರಮುಖ ವೃತ್ತಗಳಲ್ಲಿ ನಿಲ್ಲಿಸುವದರೊಂದಿಗೆ ಭಾರತ ಮಾತೆಗೆ ಗೌರವ ಸಲ್ಲಿಸುವದು ಎಲ್ಲರೂ ಮುಂದಾಗೋಣವೆಂಬ ಸಂದೇಶವನ್ನು ಆರ್‌ಎಸ್‌ಎಸ್ ನಗರ ಘಟಕ ಸಾರಿದೆ.



## ಚಿದಾನಂದ ಜವಳಗಿಗೆ ರಾಜ್ಯಪಾಲರಿಂದ ಪ್ರಶಸ್ತಿ ಪ್ರಧಾನ




**ರಬಕವಿ–ಬನಹಟ್ಟಿ:** ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಹಾಗೂ ಶಾಲಾ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ಮತ್ತು ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು (ರೀ) ಬೆಂಗಳೂರು. ಇವರ ಸಂಯುಕ್ತ ಆಶ್ರಯದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದ ಸ್ಕೌಟ್ ಆಂಡ್ ಗೈಡ್ಸ್ ಕ್ಯಾಂಪನಲ್ಲಿ ಒಂಬತ್ತು ದಿನಗಳ ಕಾಲ ಆಯೋಜಿಸಲಾಗಿದ್ದ "ನಾನು ವಿಜ್ಞಾನಿ–2025" ಕಾರ್ಯಕ್ರಮದ ರಾಜ್ಯಮಟ್ಟದ ಪ್ರಥಮ ಟೆಲಿಸ್ಕೋಪ್ ತರಬೇತಿ ಶಿಬಿರದ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಬಾಗಲಕೋಟ ಜಿಲ್ಲೆಯ ರಬಕವಿ–ಬನಹಟ್ಟಿ ತಾಲೂಕಿನ ಚಿದಾನಂದ ಸಂಜಯ ಜವಳಗಿ ಈತ ತಯಾರಿಸಿದ ಟೆಲಿಸ್ಕೋಪ್ ಅತ್ಯುತ್ತಮ ಗುಣಮಟ್ಟದಾಗಿದೆ ಎಂದು 160 ವಿದ್ಯಾರ್ಥಿಗಳಲ್ಲಿ ಆಯ್ಕೆಗೊಂಡಿದ್ದಾನೆ. ಹಳಿಂಗಳಿಯ ಸಿಬಿಎಸ್‌ಸಿ ಶಾಲೆಯ ವಿದ್ಯಾರ್ಥಿಯಾಗಿದ್ದು, ಬನಹಟ್ಟಿಯ ನಿವಾಸಿಯಾಗಿದ್ದಾನೆ.

ರಾಜ್ಯದ ವಿವಿಧ ಜಿಲ್ಲೆಗಳಿಂದ ಒಟ್ಟು ನೂರಾ ಅರವತ್ತು ವಿದ್ಯಾರ್ಥಿಗಳು ಟೆಲಿಸ್ಕೋಪ್ ತಯಾರಿಕಾ ವಿಶ್ವದಾಖಲೆ ತರಬೇತಿ ಶಿಬಿರದಲ್ಲಿ ಪಾಲ್ಗೊಂಡಿದ್ದರು. ಈ ಸಾಧನೆಯ ನಿಮಿತ್ಯವಾಗಿ, ಕರ್ನಾಟಕ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು, ಚಿದಾನಂದ ಜವಳಗಿ ಅವರಿಗೆ ಅಭಿನಂದಿಸಿ ವಿಶ್ವದಾಖಲೆಯ ಪದಕವನ್ನು ಪ್ರಧಾನ ಮಾಡಿದರು. ಕಾರ್ಯಕ್ರಮದಲ್ಲಿ ಇಸ್ರೋ ಸಂಸ್ಥೆಯ ಮಾಜಿ ಅಧ್ಯಕ್ಷರಾದ ಡಾ. ಕೆ ಎಸ್ ಕಿರಣ್ ಕುಮಾರ್, ಕರ್ನಾಟಕ ರಾಜ್ಯ ಸ್ಕೌಟ್ ಗೈಡ್ಸ್ ಮುಖ್ಯಸ್ಥರಾದ ಮಾನ್ಯ ಪಿ ಜಿ ಆರ್ ಸಿಂಧ್ಯಾ, ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಅಧ್ಯಕ್ಷ ಡಾಕ್ಟರ್ ಹುಲಿಕಲ್ ನಟರಾಜ್ ಹಾಗೂ ಅನೇಕ ವಿಜ್ಞಾನಿಗಳು ಭಾಗವಹಿಸಿದ್ದರು.

9 ದಿನಗಳ ಕಾಲ ಅನೇಕ ಮಹಾನ್ ವಿಜ್ಞಾನಿಗಳ ಒಡನಾಟವನ್ನು ಹೊಂದಿ ವೈಜ್ಞಾನಿಕ ಮನೋಭಾವನೆಯನ್ನು ಬೆಳೆಸಿಕೊಳ್ಳುವ ನಿಟ್ಟಿನಲ್ಲಿ ಈ ಕಾರ್ಯಕ್ರಮವು ಅನೂಕೂಲವಾಗಿದೆ. ಈ ಕಾರ್ಯಕ್ರಮವು ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವನೆಯನ್ನು ಬೆಳೆಸುವುದರೊಂದಿಗೆ ಅವರ ಮುಂದಿನ ಭಾವಿ, ಭವಿಷ್ಯತ್ ಗೆ ವಿಜ್ಞಾನಿಗಳಾಗಿ ಬೆಳೆಯುವ ನಿಟ್ಟಿನಲ್ಲಿ ಪ್ರೇರಣೆಯನ್ನು ನೀಡುವ, ಕಾರ್ಯಕ್ರಮವು ನಾಂದಿಯಾಯಿತು. ಚಿದಾನಂದ ಅವರ ಸಾಧನೆಯಿಂದ ಇಡೀ ಬಾಗಲಕೋಟ ಜಿಲ್ಲೆಯೇ ಹೆಮ್ಮೆಪಡುವಂತಹ ಸಂಗತಿ ಯಾಗಿದೆ ಎಂದು ಅವರ ತಂದೆ ತಾಯಿಗಳು ಸಂತಸವನ್ನು ಹಂಚಿಕೊಂಡಿದ್ದಾರೆ.

## ವಿಶ್ವ ದೃಷ್ಟಿ ದಿನ: ಉಚಿತ ಕಣ್ಣಿನ ತಪಾಸಣೆ ಶಿಬಿರ




**ಗೋಕಾಕ:** ಪ್ರತಿ ವರ್ಷ ಅಕ್ಟೋಬರ್ ತಿಂಗಳ ಎರಡನೇ ಗುರುವಾರವನ್ನು ವಿಶ್ವ ದೃಷ್ಟಿ ದಿನವಾಗಿ ಆಚರಿಸಲಾಗುತ್ತದೆ. ಈ ಸಂದರ್ಭವನ್ನು ಸ್ಮರಿಸಿಕೊಂಡು ಭಾರತೀಯ ವೈದ್ಯಕೀಯ ಸಂಘ ಗೋಕಾಕ್ ಶಾಖೆ ಹಾಗೂ ಗೋಕಾಕಿನ ಎಲ್ಲಾ ಕಣ್ಣಿನ ವೈದ್ಯರು ಸಂಯುಕ್ತವಾಗಿ ಶ್ರೀ ಚನ್ನಬಸವೇಶ್ವರ ಬಿಸಿಎ ಕಾಲೇಜಿನಲ್ಲಿ ಉಚಿತ ಕಣ್ಣಿನ ತಪಾಸಣೆ ಶಿಬಿರವನ್ನು ಹಮ್ಮಿಕೊಂಡಿದ್ದರು.

ಈ ಶಿಬಿರದಲ್ಲಿ ಅನೇಕ ವಿದ್ಯಾರ್ಥಿಗಳು, ಕಾಲೇಜಿನ ಸಿಬ್ಬಂದಿ ವರ್ಗದವರು ಹಾಗೂ ಆಟೋ ಚಾಲಕರ ಕುಟುಂಬ ಸದಸ್ಯರು ಕಣ್ಣಿನ ತಪಾಸಣೆಯ ಸೌಲಭ್ಯ ಪಡೆದುಕೊಂಡರು.

ಶಿಬಿರದಲ್ಲಿ ಡಾ. ಆರ್ ಜಿ ಬಾಡಗಂಡಿ, ಡಾ. ಸುರೇಶ ಪಾಟೀಲ್, ಡಾ. ಉಮೇಶ ನಿಪ್ಪಾಣಿ, ಡಾ. ಆನಂದ ಎತ್ತಿನಮನಿ, ಡಾ. ಅಮೃತ ಪಾಟೀಲ್, ಡಾ. ಕಿರಣ್ ಪೂಜಾರ, ಡಾ. ಭಾರತಿ ಪಾಟೀಲ ಸೇರಿದಂತೆ ಅನೇಕ ತಜ್ಞರು ಭಾಗವಹಿಸಿ ಶಿಬಿರವನ್ನು ಯಶಸ್ವಿಯಾಗಿ ನೆರವೇರಿಸಿದರು.

ಈ ವರ್ಷದ ವಿಶ್ವ ದೃಷ್ಟಿ ದಿನದ ಧ್ಯೇಯವಾಗಿದ್ದ "ಕಣ್ಣುಗಳನ್ನು ಪ್ರೀತಿಸಿ, ಕಾಪಾಡಿಕೊಳ್ಳಿ" ಎಂಬ ಸಂದೇಶವನ್ನು ಎಲ್ಲರಿಗೂ ಸಾರಲಾಯಿತು.

ಈ ಸಂದರ್ಭದಲ್ಲಿ ಭಾರತೀಯ ವೈದ್ಯಕೀಯ ಸಂಘ ಗೋಕಾಕ್ ಶಾಖೆಯ ಕಾರ್ಯದರ್ಶಿ ಡಾ. ವಿಶ್ವನಾಥ ಶಿಂಧೋಳಿಮಠ ಅವರು ಮಾತನಾಡಿ, "ಜನರು ಕಣ್ಣಿನ ಸಮಸ್ಯೆಗಳನ್ನು ಬೆಳೆಯುವ ಮೊದಲೇ ಕಣ್ಣಿನ ವೈದ್ಯರನ್ನು ನಿಯಮಿತವಾಗಿ ಭೇಟಿಯಾಗಿ ಕಣ್ಣುಗಳ ಆರೈಕೆ ಮಾಡಿಕೊಳ್ಳಬೇಕು," ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಐಎಮ್‌ಎ ಗೋಕಾಕ ಶಾಖೆಯ ಅಧ್ಯಕ್ಷ ಡಾ. ಕೆಂಪಣ್ಣ ಹಳೆಗೌಡರ ಉಪಸ್ಥಿತರಿದ್ದರು.

ಕಾಲೇಜಿನ ಪ್ರಾಂಶುಪಾಲರು ಹಾಗೂ ಸಿಬ್ಬಂದಿ ವರ್ಗ ಶಿಬಿರದ ಯಶಸ್ವಿಗೆ ಸಹಕಾರ ನೀಡಿದರು. ಈ ಶಿಬಿರವು ವಿಶ್ವ ದೃಷ್ಟಿ ದಿನದ ಅಂಗವಾಗಿ ದೃಷ್ಟಿ ಸಂರಕ್ಷಣೆಯ ಮಹತ್ವವನ್ನು ಸಮಾಜಕ್ಕೆ ತಿಳಿಸುವ ಸಾರ್ಥಕ ಪ್ರಯತ್ನವಾಯಿತು.

### ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ ವಾಕ್‌ತಾನ್‌ಗೆ ನ್ಯಾಯಾಧೀಶ ಬಿರಾದಾರ ದೇವೇಂದ್ರಪ್ಪ ಎನ್ ಚಾಲನೆ

## ಮಾನಸಿಕ ರೋಗಿಗಳೊಂದಿಗೆ ಸೌಜನ್ಯದಿಂದ ನಡೆದುಕೊಳ್ಳಿ

**ಹಾವೇರಿ:** ಮಾನಸಿಕ ರೋಗಿಗಳನ್ನು ಹುಚ್ಚ ಎಂದು ಕರೆಯಬಾರದು ಹಾಗೂ ಅವರೊಂದಿಗೆ ಸೌಜನ್ಯದಿಂದ ನಡೆದುಕೊಳ್ಳಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಿರಾದಾರ ದೇವೇಂದ್ರಪ್ಪ ಎನ್. ಅವರು ಹೇಳಿದರು.

ಹಾವೇರಿ ನಗರದ ಹೊಸಮನಿ ಸಿದ್ದಪ್ಪ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ಜಿಲ್ಲಾ ನ್ಯಾಯಾಂಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ನ್ಯಾಯವಾದಿಗಳ ಸಂಘ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗ, ಜಿಲ್ಲಾ ಪೋಲೀಸ್ ಇಲಾಖೆ, ಜಿಲ್ಲಾ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ, ಜಿಲ್ಲಾ ಅಬಕಾರಿ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಹಾವೇರಿ ವೈದ್ಯಕೀಯ ವಿಜ್ಞಾನ ಸಂಸ್ಥೆ, ಜಿಲ್ಲಾ ಆಸ್ಪತ್ರೆ, ಸರ್ಕಾರಿ ಶುಶ್ರೂಷಾ ಕಾಲೇಜ ಹಾಗೂ ತಾಲೂಕಾ ಆರೋಗ್ಯಾಧಿಕಾರಿಗಳ ಕಚೇರಿ ಸಹಯೋಗದಲ್ಲಿ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ ಅಂಗವಾಗಿ ವಾಕ್‌ತಾನ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮಾನಸಿಕ ರೋಗಿಗಳಿಗೆ ಸೂಕ್ತ ಚಿಕಿತ್ಸೆ ನೀಡಿ ಗುಣಪಡಿಸಬಹುದಾಗಿದೆ. ನಾವೆಲ್ಲರೂ ಜವಾಬ್ದಾರಿಯುತ ಪ್ರಜೆಗಳಾಗಿದ್ದು, ಸಮಾಜದ ಸಾರ್ವಜನಿಕರಿಗೆ ಈ ಬಗ್ಗೆ ಅರಿವು ಮೂಡಿಸುವುದು ನಮ್ಮ ಕರ್ತವ್ಯವಾಗಿದೆ ಎಂದು ಹೇಳಿದರು.

ಜಿ.ಪಂ.ಮುಖ್ಯ ಕಾರ್ಯನಿರ್ವಹಣಾಧಿಕಾರಿ ರುಚಿ ಬಿಂದಲ್, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಶ್ರೀಮತಿ ಯಶೋಧಾ ವಂಟಗೋಡಿ, ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀಮತಿ ಶ್ರೀಶೈಲಜಾ ಎಚ್.ವಿ., ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಂ.ಜಯಾನಂದ, ಹಾವೇರಿ ವೈದ್ಯಕೀಯ ವಿಜ್ಞಾನ ಸಂಸ್ಥೆ ನಿರ್ದೇಶಕ ಡಾ.ಪ್ರವೀಣಕುಮಾರ ಎಂ.ವಿ., ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಪಿ.ಆರ್.ಹಾವನೂರ, ಜಿಲ್ಲಾ ಕ್ಷಯರೋಗ ನಿಯಂತ್ರಣ ಅಧಿಕಾರಿ ಡಾ. ನೀಲೇಶ ಎನ್, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ ಡಾ. ಸರಿತಾ, ಡಾ.ಚನ್ನಬಸಯ್ಯ ವಿರಕ್ತಮಠ, ತಾಲೂಕಾ ಆರೋಗ್ಯ ಅಧಿಕಾರಿ ಡಾ.ಪ್ರಭಾಕರ ಕುಂದೂರು, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗದ ಮನೋವೈದ್ಯೆ ಡಾ. ಶೃತಿ ಎ, ಸರ್ಕಾರಿ ಶುಶ್ರೂಷಾ ಕಾಲೇಜ್ ಪ್ರಾಂಶುಪಾಲ ಸರಸ್ವತಿ ವಾಯ್ ಹೆಚ್, ಜಿಲ್ಲಾ ಆರೋಗ್ಯ ಶಿಕ್ಷಣ ಅಧಿಕಾರಿ ಉಮೇಶ ಕರಮುಡಿ, ಅಬಕಾರಿ ಇಲಾಖೆ ಅಧಿಕಾರಿ ಬಸವರಾಜ ಎಚ್ ಮಾದರ, ಆರೋಗ್ಯ ಇಲಾಖೆ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಜಾಗತಿಕ ಸ್ಪರ್ಧಾತ್ಮಕತೆಗೆ ಶಿಸ್ತು, ಪರಿಶ್ರಮ ಅಗತ್ಯ: ಡಾ. ನಾವಿ



**ಚಿಕ್ಕೋಡಿ:** ಆಧುನಿಕ ಜಾಗತಿಕ ಯುಗದಲ್ಲಿ ವಿದ್ಯಾರ್ಥಿಗಳು ನಿಶ್ಚಿತ ಗುರಿ ಮತ್ತು ಸಾಧನೆ ಮಾಡಲು ಸತತ ಪ್ರಯತ್ನ, ಪರಿಶ್ರಮ ,ಕೌಶಲ್ಯ, ಸಮಯದ ಸದುಪಯೋಗ ಮಾಡಿಕೊಳ್ಳಬೇಕು. ಇದುವೇ ಯಶಸ್ಸಿನ ಗುಟ್ಟು ಎಂದು ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಆಡಳಿತ ವಿಭಾಗದ ವಿಶೇಷ ಅಧಿಕಾರಿ ಡಾ.ಬಿ.ಎಸ್. ನಾವಿ ಹೇಳಿದರು.

ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ವತಿಯಿಂದ ಕೆ.ಎಲ್.ಈ ಸಂಸ್ಥೆಯ ಬಸವ ಪ್ರಭು ಕೋರೆ ಪದವಿ ಮಹಾವಿದ್ಯಾಲಯದಲ್ಲಿ ಪಿ ಎಂ ಉಷಾ ಯೋಜನೆ ಅಡಿಯಲ್ಲಿ ಹಮ್ಮಿಕೊಂಡಿದ್ದ ಇಂಟರ್ನಶಿಫ/ ಅಂಪರೇಟಶಿಫ ಎಂಬೆಡೆಡ್ ಡಿಗ್ರಿ ಪ್ರೋಗ್ರಾಮ್ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಮಾತನಾಡಿದ ಅವರು ಡಾ.ಬಿ. ಎಸ್.ನಾವಿ ನಾನು ಹೆಮ್ಮೆಯಿಂದ ಕೆ ಎಲ್ ಈ ಸಂಸ್ಥೆಯ ಬಿ.ಕೆ ಕಾಲೇಜಿನ ವಿದ್ಯಾರ್ಥಿ ಎಂದು ಹೇಳುತ್ತೇನೆ. ವಿದ್ಯಾರ್ಥಿಗಳು ಪರೀಕ್ಷೆ ದೃಷ್ಟಿಯಿಂದ ಅಧ್ಯಾಯನ ಮಾಡ ಬಾರದು.ಮಾನಸಿಕ ಸಾಮರ್ಥ್ಯ ಮತ್ತು ಇಂಗ್ಲೀಷ್ ಭಾಷೆಯ ಸಂವಹನ ಮೇಲೆ ಪ್ರಭುತ್ವ ಸಾಧಿಸಲು ಶ್ರಮಿಸಬೇಕು.ಇಂದಿನ ಕಾರ್ಪೊರೇಟ್ ಜಗತ್ತಿನಲ್ಲಿ ವಿಪುಲ ಅವಕಾಶಗಳಿವೆ ಸೂಕ್ತ ರೀತಿಯಲ್ಲಿ ಬುದ್ಧಿವಂತಿಕೆ ಬಳಿಸಿಕೊಂಡು ದೇಶದ ಅಭಿವೃದ್ಧಿಗೆ ತಮ್ಮನ್ನು ತೆರೆದುಕೊಳ್ಳುವಂತೆ ಹೇಳಿದರು.

ಬೆಳಗಾವಿಯ ಗ್ಲೋಬಲ್ ಬಿ ಸ್ಕೂಲ್ ಸಹ ಪ್ರಾಧ್ಯಾಪಕ ಡಾ.ನಿಖಿಲ್ ರಾಗಶೆಟ್ಟಿ ಪಠ್ಯಕ್ರಮ, ಪರೀಕ್ಷೆ ತಂತ್ರಜ್ಞಾನ ಸ್ಪರ್ಧಾತ್ಮಕ ಪರೀಕ್ಷೆ ಬರೆಯಲು ಈ ಕಾರ್ಯಗಳನ್ನು ಮಾಡಲು ವಿಶ್ವವಿದ್ಯಾಲಯ ಕುಲಪತಿಗಳ ಆಶಯ ವಿದ್ಯಾರ್ಥಿಗಳು ಉಪಯೋಗಿಸಿಕೊಳ್ಳುವಲ್ಲಿ ಸಫಲ ಕ್ರಮಗಳನ್ನು ಕೈಗೊಳ್ಳಲು ಈ ಕಾರ್ಯಾಗಾರ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ. ಡಾ.ಬಿ.ಜಿ. ಕುಲಕರ್ಣಿ ವಿಶ್ವವಿದ್ಯಾಲಯ ಪಿ.ಎಂ ಉಷಾ ಯೋಜನೆಯ ಅಡಿಯಲ್ಲಿ ಹಮ್ಮಿಕೊಂಡಿದ್ದ ಕಾರ್ಯಾಗಾರ ವಿದ್ಯಾರ್ಥಿಗಳು ಭವಿಷ್ಯದ ದೃಷ್ಟಿಯಿಂದ ತಮ್ಮನ್ನು ಕಾರ್ಪೋರೇಟ್ ಸಂಸ್ಥೆಗಳು ಉದ್ಯೋಗ ಆಯ್ಕೆಗೆ ಕೌಶಲ್ಯ ವೃದ್ಧಿಸಲುವಾಗಿ ನಿರಂತರವಾಗಿ ವಿಶ್ವವಿದ್ಯಾಲಯದ ಕಾರ್ಯ ಶ್ಲಾಘನೀಯ ಎಂದರು.

ಐಕ್ಯೂ ಎ ಸಿ ಸಂಯೋಜಕ ಡಾ. ವಿನಾಯಕ ಮಂಜಲಾಪೂರ್, ವಿವಿಧ ವಿಭಾಗಗಳ ಮುಖ್ಯಸ್ಥರು, ಉಪನ್ಯಾಸಕರು, ವಿವಿದ ಕಾಲೇಜಿನ ವಿದ್ಯಾರ್ಥಿಗಳು ಕಾರ್ಯಾಗಾರದಲ್ಲಿ ಪಾಲ್ಗೊಂಡಿದ್ದರು. ತೇಜಸ್ವಿನಿ ಗೂಳನ್ನವರ ಪ್ರಾರ್ಥನಾ ಗೀತೆ ಹಾಡಿದರು.ಪ್ರೊ.ಎನ್.ಬಿ. ಪಾಟೀಲ್ ಸ್ವಾಗತಿಸಿ ಅತಿಥಿ. ಪರಿಚಯಿಸಿದರು. ವಾಣಿಜ್ಯ ಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ. ಲಕ್ಷ್ಮಿಕಾಂತ ನಾಯ್ಕ ವಂದಿಸಿದರು.

### ಸಕಾರಾತ್ಮಕವಾಗಿ ಸ್ಪಂದಿಸಿದ ಅಧಿಕಾರಿಗಳು

# ಹೆಸ್ಕಾಂಗೆ ಉದ್ಯಮಿಗಳಿಂದ ದೂರುಗಳ ಸುರಿಮಳೆ




**ಬೆಳಗಾವಿ:** ಉದ್ಯಮಿಗಳು ಎದುರಿಸುತ್ತಿರುವ ವಿದ್ಯುತ್ ಸಮಸ್ಯೆಗಳ ಕುರಿತಂತೆ ಬೆಳಗಾವಿ ವಾಣಿಜ್ಯೋದ್ಯಮ ಸಂಘ ಹೆಸ್ಕಾಂ ಅಧಿಕಾರಿಗಳ ಜೊತೆ ಮುಖಾ ಮುಖಿ ಕಾರ್ಯಕ್ರಮವನ್ನು ಈಚೆಗೆ ಆಯೋಜಿಸಿತ್ತು.

ಅನಿಯಂತ್ರಿತ ವಿದ್ಯುತ್ ನಿಲುಗಡೆ, ಸಿಂಗಲ್ ಫೇಸ್ ಸಮಸ್ಯೆ, ಕೇಬಲ್ ಗಳ ಅಸಮರ್ಪಕ ನಿರ್ವಹಣೆ, ವಿದ್ಯುತ್ ಟ್ರಾನ್ಸ್ ಫಾರ್ಮರ್ ಗಳ ಬದಲಾವಣೆ ಸೇರಿದಂತೆ ಹಲವು ಸಮಸ್ಯೆಗಳನ್ನು ಉದ್ಯಮಿಗಳು ಅಧಿಕಾರಿಗಳ ಎದುರು ತೆರೆದಿಟ್ಟರು. ಗುಣಮಟ್ಟದ ವಿದ್ಯುತ್ ಪೂರೈಕೆ ಆಗುತ್ತಿಲ್ಲ. ಇದೇ ರೀತಿ ಆದರೆ ಯುವ ಉದ್ಯಮಿಗಳು ಉದ್ಯಮ ಆರಂಭಿಸಲು ಹಿಂದೇಟು ಹಾಕುತ್ತಾರೆ ಎಂದು ಚೆಂಬರ್ ಆಫ್ ಕಾಮರ್ಸ್ ಆಯಂಡ್ ಇಂಡಸ್ಟ್ರೀಸ್ ಅಧ್ಯಕ್ಷ ಪ್ರಭಾಕರ ನಾಗರ ಮುನ್ನೋಳಿ ಹೇಳಿದರು.

ಉದ್ಯಮಿಗಳು ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಸಕಾಲದಲ್ಲಿ ಅಧಿಕಾರಿಗಳು ಸ್ಪಂದಿಸಬೇಕು. ಇಲ್ಲವಾದಲ್ಲಿ ಉದ್ಯಮಿಗಳು ದೊಡ್ಡ ಪ್ರಮಾಣದಲ್ಲಿ ನಷ್ಟ ಅನುಭವಿಸಬೇಕಾಗುತ್ತದೆ ಎಂದು ಹೆಸ್ಕಾಂ ಸಮಿತಿ ಚೇರಮನ್ ಆನಂದ ದೇಸಾಯಿ ಹೇಳಿದರು.

ಸೂಕ್ತ ರೀತಿಯಲ್ಲಿ ಅಧಿಕಾರಿಗಳು ಸ್ಪಂದಿಸದಿದ್ದರೆ ಈ ರೀತಿಯ ಕಾರ್ಯಕ್ರಮ ಮಾಡಿಯೂ ಪ್ರಯೋಜನವಿಲ್ಲ. ಹಾಗಾಗಿ ಇಲ್ಲಿನ ಚರ್ಚೆಯ ಫಲಿತಾಂಶದ ಮೇಲೆ ನಿರಂತರ ನಿಗಾವಹಿಸಲಾಗುವುದು, ಅಧಿಕಾರಿಗಳಿಗೆ ಸಮಸ್ಯೆಗಳಿದ್ದರೆ ನಮ್ಮ ಗಮನಕ್ಕೆ ತಂದರೆ ನಾವು ಸರಕಾರದ ಹಾಗೂ ಉನ್ನತ ಅಧಿಕಾರಿಗಳ ಗಮನಕ್ಕೆ ತರುವ ಕೆಲಸ ಮಾಡುತ್ತೇವೆ ಎಂದು ಅವರು ತಿಳಿಸಿದರು.

ಎಲ್ಲವನ್ನೂ ತಾಳ್ಮೆಯಿಂದ ಕೇಳಿದ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ವಿನೋದ ಕರೂರ್ ಹಾಗೂ ಮೋಹನ್ ಸುತಾರ, ಈಗಾಗಲೆ ಕೇಬಲ್ ಬದಲಾಯಿಸಲಾಗುತ್ತಿದೆ. ಲೋಡ್ ಜಾಸ್ತಿ ಆಗಬಾರದೆಂದು ಹೆಚ್ಚುವರಿ ಫೀಡರ್ ಹಾಕಲಾಗುತ್ತಿದೆ. ನವೆಂಬರ್ ಅಂತ್ಯದೊಳಗಾಗಿ ಎಲ್ಲ ಪ್ರಮುಖ ಸಮಸ್ಯೆಗಳನ್ನೂ ಪರಿಹರಿಸಲಾಗುವುದು ಎಂದು ಭರವಸೆ ನೀಡಿದರು.

ಸಮರೋಪಾದಿಯಲ್ಲಿ ಕೆಲಸ ನಡೆಯುತ್ತಿದೆ. ಪ್ರತಿ ದಿನದ ಪ್ರಗತಿಯ ಮೇಲೆ ನಿಗಾವಹಿಸಲಾಗುತ್ತಿದೆ. ಹೊಸ ಸಿಬ್ಬಂದಿ ನೇಮಕಾತಿ ಸಹ ನಡೆಯುತ್ತಿದೆ. ಈ ಬಾರಿ ಅಗತ್ಯ ಸಿಬ್ಬಂದಿ ಸಿಗುವ ನಿರೀಕ್ಷೆ ಇದೆ ಎಂದು ತಿಳಿಸಿದರು.

ವಾಣಿಜ್ಯೋದ್ಯಮ ಸಂಘದ ಇಂಡಸ್ಟ್ರಿ ಕಮಿಟಿ ಚೇರಮನ್ ಸಂದೀಪ ಬಾಗೇವಾಡಿ, ಹೆಸ್ಕಾಂ ಅಧಿಕಾರಿಗಳು, ಸಿಬ್ಬಂದಿ, ಉದ್ಯಮಿಗಳು ಇದ್ದರು.

## ಕುಸ್ತಿಪಟುಗಳನ್ನು ಅಭಿನಂದಿಸಿದ ಸಚಿವೆ ಹೆಬ್ಬಾಳಕರ್




**ಬೆಳಗಾವಿ:** ಮೈಸೂರು ದಸರಾದಲ್ಲಿ ಬೆಳಗಾವಿ ಗ್ರಾಮೀಣ ಕ್ಷೇತ್ರದ ಇಬ್ಬರು ಕುಸ್ತಿಪಟುಗಳು ವಿಜೇತರಾಗಿದ್ದು, ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಶನಿವಾರ ಇಬ್ಬರನ್ನೂ ಅಭಿನಂದಿಸಿದರು.

ವಿಶ್ವ ಪ್ರಸಿದ್ಧ ಮೈಸೂರು ದಸರಾ ಸಂಭ್ರಮದ ಅಂಗವಾಗಿ ಆಯೋಜಿಸಲಾಗಿದ್ದ "ದಸರಾ ಕಂಠೀರವ ಕೇಸರಿ ? 2025" ರ ಕುಸ್ತಿ ಪಂದ್ಯಾವಳಿಯಲ್ಲಿ ಬೆಳಗಾವಿ ಗ್ರಾಮೀಣ ಕ್ಷೇತ್ರದ ಕಂಗ್ರಾಳಿ ಕೆ.ಎಚ್ ಗ್ರಾಮದ ಪ್ರತಿಭಾವಂತ ಕುಸ್ತಿಪಟು ಕಾಮೇಶ್ ಪಾಟೀಲ ಅವರು ಅದ್ಭುತ ಪ್ರದರ್ಶನ ನೀಡಿ, ಕಂಠೀರವ ಕೇಸರಿ ಪ್ರಶಸ್ತಿ ತಮ್ಮ ಮುಡಿಗೇರಿಸಿಕೊಂಡಿದ್ದಾರೆ. ಇದೇ ವೇಳೆ ನಡೆದ ಸಿ.ಎಂ ಕಪ್ ದಸರಾ ಕುಸ್ತಿ ಪಂದ್ಯಾವಳಿಯಲ್ಲಿ ಮತ್ತೊಬ್ಬ ಯುವ ಪ್ರತಿಭೆ ಪ್ರೇಮ್ ಜಾಧವ್ ಕೂಡ ಗೋಲ್ಡ್ ಮೆಡಲ್ ಗಳಿಸಿದ್ದಾರೆ. ಇವರಿಬ್ಬರ ವಿಶಿಷ್ಟ ಸಾಧನೆಯನ್ನು ಗೌರವಿಸಿ ಸಚಿವರು ಅಭಿನಂದಿಸಿದರು. ಈ ವೇಳೆ ಕಂಗ್ರಾಳಿ ಕೆ.ಚ್ ಗ್ರಾಮದ ಬಾಲ ಹನುಮಾನ್ ತಾಲೀಮ್ ಮಂಡಳದ ತರಬೇತುದಾರರಾದ ಪ್ರಶಾಂತ ಪಾಟೀಲ, ಬಾಹು ಪಾಟೀಲ ಇದ್ದರು.

### ಮಾದರಿ ಶಾಲೆ ನಿರ್ಮಾಣಕ್ಕಾಗಿ ಭೂಮಿ ಪೂಜೆ ನೇರವೇರಿಸಿದ ಸಚಿವ ಶಿವಾನಂದ ಪಾಟೀಲ

# ಉತ್ತಮ ಸಮಾಜ ನಿರ್ಮಾಣಕ್ಕಾಗಿ ಶಿಕ್ಷಣ ಅಗತ್ಯ




**ಬಸವನಬಾಗೇವಾಡಿ:** ಸಮಾಜಕ್ಕೆ ಉತ್ತಮ ನಾಗರಿಕರನ್ನು ಕೊಡುಗೆ ನೀಡುವಲ್ಲಿ ಶಿಕ್ಷಣದ ಪಾತ್ರ ಮಹತ್ವದ್ದಾಗಿದೆ. ಪಾಲಕರು ತಮ್ಮ ಪ್ರತಿಯೊಂದು ಮಗುವಿನ ಉತ್ತಮ ಭವಿಷ್ಯಕ್ಕಾಗಿ ಶಿಕ್ಷಣ ಕೊಡಿಸಿ ಎಂದು ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ ಕರೆ ನೀಡಿದರು.

ಪಟ್ಟಣದ ತೆಲಗಿ ರಸ್ತೆಯಲ್ಲಿ ಶನಿವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯಿಂದ 5 ಕೋಟಿ ರೂ. ವೆಚ್ಚದಲ್ಲಿ ಮೌಲಾನಾ ಆಜಾದ್ ಮಾದರಿ ಶಾಲೆ ನಿರ್ಮಾಣಕ್ಕಾಗಿ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಪ್ರಸಕ್ತ ಸಂದರ್ಭದಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಮಹತ್ವವಿದೆ.ಜಾಗತಿಕ ಮಟ್ಟದಲ್ಲಿ ಸುಮಾರು 230 ಕ್ಕೂ ಹೆಚ್ಚು ದೇಶಗಳಲ್ಲಿ ಇಂಗ್ಲಿಷ್ ಭಾಷೆಯೇ ಪ್ರಧಾನವಾಗಿ ವ್ಯವಹಾರಿಕ ಭಾಷೆಯಾಗಿದೆ. ಆಂಗ್ಲ ಭಾಷಾ ಶಿಕ್ಷಣಕ್ಕೆ ಹೆಚ್ಚಿನ ಬೇಡಿಕೆ ಇದೆ. ಇದನ್ನರಿತು ಸರ್ಕಾರ ರಾಜ್ಯದಲ್ಲಿ ಅಲ್ಪಸಂಖ್ಯಾತ ಸಮುದಾಯದ ಮಕ್ಕಳ ಶಿಕ್ಷಣಕ್ಕಾಗಿ 100 ಮೌಲಾನ ಆಜಾದ ಆಂಗ್ಲ ಶಾಲೆ ಸ್ಥಾಪನೆಗೆ ಮುಂದಾಗಿದ್ದು, ನಮ್ಮ ಕ್ಷೇತ್ರಕ್ಕೂ ಈ ಶಾಲೆಯು ಮಂಜೂರಾಗಿದೆ ಎಂದರು.

ಮಕ್ಕಳ ಗುಣಮಟ್ಟದ ಶಿಕ್ಷಣಕ್ಕೆ ಶಿಕ್ಷಕರು, ಶಾಲಾ ಕಟ್ಟಡ, ಪ್ರಯೋಗಾಲಯ ಸೇರಿದಂತೆ ಅಗತ್ಯ ಮೂಲಭೂತ ಸೌಲಭ್ಯ ಕಲ್ಪಿಸವುದು ಅಗತ್ಯವಾಗಿದೆ. ಮೌಲಾನಾ ಆಜಾದ್ ಶಾಲೆಯಲ್ಲಿ ಎಲ್.ಕೆ.ಜಿ. ಯಿಂದ ಪಿಯುಸಿ ವರೆಗೆ ಶಿಕ್ಷಣ ನೀಡುತ್ತಿದ್ದು, ಇದರ ಸದುಪಯೋಗ ಪಡೆಯಬೇಕು ಎಂದರು.

ಎಲ್ಲ ಸಮುದಾಯದ ಜನರು ಸುಶಿಕ್ಷಿತರಾಗಿ, ಸಾಮರಸ್ಯದಿಂದ ಬದುಕಿದಾಗಲೇ ದೇಶಕ್ಕೆ ದೊಡ್ಡ ಕೊಡುಗೆ ನೀಡಿ, ಅಭಿವೃದ್ಧಿ ಸಾಧಿಸಲು ಸಾಧ್ಯವಿದೆ. ಭೌತಿಕ ಆಸ್ತಿ ಮಾಡುವ ಬದಲು ನಿಮ್ಮ ಮಕ್ಕಳಿಗೆ ಯಾರಿಂದಲೂ ಕದಿಯಲಾಗದ ವಿದ್ಯೆ ಎಂಬ ಆಸ್ತಿ ಕೊಡಿಸಿ ಎಂದು ಕಿವಿ ಮಾತು ಹೇಳಿದ ಅವರು, ಬಸವವನಬಾಗೇವಾಡಿ ನಗರದಲ್ಲಿ ನಿರ್ಮಾಣ ಆಗುತ್ತಿರುವ ಮೌಲಾನ ಆಜಾದ ಶಾಲೆಗೆ ನಿಮ್ಮ ಮಕ್ಕಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಪ್ರವೇಶ ಕಲ್ಪಿಸುವ ಮೂಲಕ ಸರ್ಕಾರಿ ಸೌಲಭ್ಯದ ಸದ್ಬಳಕೆ ಮಾಡಿಕೊಳ್ಳಬೇಕು. ವೈಚಾರಿಕ ಜ್ಞಾನ, ಸಾಂಸ್ಕೃತಿಕ ಸಿರಿ, ಆರ್ಥಿಕ ಸಮೃದ್ಧಿ ಸಾಧಿಸಲು ಅಲ್ಪಸಂಖ್ಯಾತ ಸಮುದಾಯದ ಎಲ್ಲರೂ ತಪ್ಪದೇ ನಿಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸಿ ಎಂದು ಕಿವಿಮಾತು ಹೇಳಿದರು.

ಧರ್ಮಗುರು ಹಾಫೀಜಮೊಹ್ಮದಅಲಿ ಮಿಲಿ ಮೌಲಾನ ಆಜಾದ ಕುರಿತು ಮಾತನಾಡಿದರು.

ಬಸವೇಶ್ವರ ಸಹಕಾರಿ ಬ್ಯಾಂಕ ಅಧ್ಯಕ್ಷ ಲೋಕನಾಥ ಅಗರವಾಲ, ಜಾಮೀಯಾ ಮಸೀದಿ ಕಮೀಟಿ ಅಧ್ಯಕ್ಷ ಡಾ.ಶಬ್ಬೀರಅಹ್ಮದ್ ನದಾಫ, ಗ್ಯಾರಂಟಿ ಯೋಜನೆಯ ತಾಲೂಕಾಧ್ಯಕ್ಷ ಮಹಿಬೂಬ ನಾಯ್ಕೋಡಿ, ಮುಖಂಡರಾದ ಮತಾಬ ಬೊಮ್ಮನಹಳ್ಳಿ, ಇಲಾಹಿ ನಾಗರಾಳ, ಅಜೀಜ ಬಾಗವಾನ, ಅಲ್ತಾಫ್ ಮುದ್ದೇಬಿಹಾಳ, ಅಬ್ದುಲರಜಾಕ ಬಾಗವಾನ,ರಫೀಕ ಹೊಕ್ರಾಣಿ, ಕಮಲಸಾಬ ಕೊರಬು, ಅಬ್ದುಲಹಮೀದ ನದಾಫ, ಬುಡ್ಡೇಸಾಬ ಹುಬ್ಬಳ್ಳಿ, ಎಚ್. ಆರ್.ಬಾಗವಾನ,ಇಕ್ಬಾಲ ಕೊರಬು, ಪುರಸಭೆ ಉಪಾಧ್ಯಕ್ಷ ಅಶೋಕ ಹಾರಿವಾಳ, ತಹಸೀಲ್ದಾರ ವೈ.ಎಸ್. ಸೋಮನಕಟ್ಟಿ, ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಶಾಂತ ಪೂಜಾರಿ, ತಾಲೂಕಾ ಅಧಿಕಾರಿ ಇಲಾಹಿ ನಾಗರಾಳ, ಕ್ಷೇತ್ರಸಮನ್ವಾಧಿಕಾರಿ ಸುನಿಲ ನಾಯಕ, ಕ್ಷೇತ್ರಸಂಪನ್ಮೂಲ ವ್ಯಕ್ತಿ ಎಂ.ಬಿ.ಗಬ್ಬೂರ, ಮುಖ್ಯೋಪಾಧ್ಯಾಯಿನಿ ಜಿ.ಎಸ್. ಸಾತಲಗಾಂವ ಇತರರು ಇದ್ದರು.

# ವಿಶ್ವಾಸ ವೈದ್ಯ ಅವಿರೋಧ ಆಯ್ಕೆ

**ಬೆಳಗಾವಿ:** ಯರಗಟ್ಟಿ ತಾಲೂಕ ಪಿಕೆಪಿಎಸ್ ವತಿಯಿಂದ ಸ್ಪರ್ಧಿಸಿದ್ದ ನನ್ನ ವಿರುದ್ಧ ಯಾರು ನಾಮಪತ್ರ ಸಲ್ಲಿಸದ ಪ್ರಯುಕ್ತ ನಾನು ಡಿಸಿಸಿ ಬ್ಯಾಂಕ ನಿರ್ದೇಶಕನಾಗಿ ಪ್ರಥಮ ಭಾರಿಗೆ ಆಯ್ಕೆ ಅಗಿದ್ದು ಇದ್ದಕ್ಕೆ ಕಾರಣ ಜಾರಕಿಹೊಳಿ ಸಹೋದರರು, ಸವದತ್ತಿ, ಯರಗಟ್ಟಿ ತಾಲೂಕಿನ ಜನತೆ, ಪಿಕೆಪಿಎಸ್ ಸದಸ್ಯರು ಹಾಗೂ ರೈತರು ಕಾರಣ ಎಂದರು.

ಯುವ ಮುಖಂಡ 3 ನೇ ಭಾರಿಗೆ ಡಿಸಿಸಿ ಬ್ಯಾಂಕಿನ ನಿರ್ದೇಶಕನಾಗುವದು ಬಹುತೇಕ ಖಚಿತವಾಗಿರುವ ನೀಲಕಂಠ ಕಪ್ಪಲಗುದ್ದಿ ಮಾತನಾಡಿ ಸತತ ಮೂರು ಭಾರಿ ಡಿಸಿಸಿ ಬ್ಯಾಂಕಿಗೆ ನಿರ್ದೇಶಕನಾಗಿ ಅವಿರೋಧವಾಗಿ ಆಯ್ಕೆಯಾಗಿದ್ದು ಸಂತಸ ತಂದಿದ್ದು ನನ್ನ ಆಯ್ಕೆಗೆ ಜಾರಕಿಹೊಳಿ ಸಹೋದರರ ಸಹಕಾರ, ರೈತರ ವಿಶ್ವಾಸ ಕಾರಣ. ಮತ್ತು ಮುಂದಿನ ದಿನಗಳಲ್ಲಿ ರೈತರ ಪತ್ತು ಹೆಚ್ಚಳ, ಟ್ರಾಕ್ಟರ್ ಸಾಲ, ಪಿಕೆಪಿಎಸ್ ಬೆಳವಣಿಗೆಗೆ ಸದಾ ಕಾರ್ಯ ಮಾಡುತ್ತೇನೆ ಎಂದರು.



### ಬೆಳಗಾವಿ ಡಿಸಿಸಿ ಬ್ಯಾಂಕ್ ಚುನಾವಣೆ

# ಚನ್ನರಾಜ ಹಟ್ಟಿಹೊಳಿ ನಾಮಪತ್ರ ಸಲ್ಲಿಕೆ



**ಬೆಳಗಾವಿ:** ಪ್ರತಿಷ್ಠಿತ ಬೆಳಗಾವಿ ಡಿಸಿಸಿ ಬ್ಯಾಂಕ್ ಚುನಾವಣೆ ಹಿನ್ನೆಲೆ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಅವರು ಇತರೆ ಕ್ಷೇತ್ರದಿಂದ ಕಣಕ್ಕಿಳಿಯಲು ನಾಮಪತ್ರ ಸಲ್ಲಿಸಿದರು.

ಶನಿವಾರ ಡಿಸಿಸಿ ಬ್ಯಾಂಕ್ ನ ಕೇಂದ್ರ ಕಚೇರಿಗೆ ಆಗಮಿಸಿದ ಅವರು, ಇತರೇ ನಿರ್ದೇಶಕ ಸ್ಥಾನಕ್ಕೆ ನಾಮಪತ್ರ ಸಲ್ಲಿಸಿದರು. ಚನ್ನರಾಜ ಹಟ್ಟಿಹೊಳಿ ಜೊತೆ ಬೆಳಗಾವಿ ತಾಲೂಕು ನಿರ್ದೇಶಕ ಸ್ಥಾನಕ್ಕೆ ರಾಹುಲ್ ಜಾರಕಿಹೊಳಿ. ಗೋಕಾಕ್ ತಾಲೂಕು ನಿರ್ದೇಶಕ ಸ್ಥಾನಕ್ಕೆ ಅಮರನಾಥ ಜಾರಕಿಹೊಳಿ. ಮೂಡಲಗಿ ತಾಲೂಕು ನಿರ್ದೇಶಕ ಸ್ಥಾನಕ್ಕೆ ನೀಲಕಂಠ ಕಪ್ಪಲಗುದ್ದಿ ನಾಮ ಪತ್ರ ಸಲ್ಲಿಸಿದರು. ಈ ವೇಳೆ ಶಾಸಕರಾದ ಬಾಲಚಂದ್ರ ಜಾರಕಿಹೊಳಿ, ವಿಶ್ವಾಸ ವೈದ್ಯ, ಅಣ್ಣಾಸಾಹೇಬ್ ಜೊಲ್ಲೆ, ಅರವಿಂದ ಪಾಟೀಲ್, ಮಹಾಂತೇಶ ದೊಡ್ಡಗೌಡರ, ವಿರುಪಾಕ್ಷ ಮಾಮನಿ, ವಿಕ್ರಮ ಇನಾಮ್ದಾರ ಸೇರಿದಂತೆ ಅನೇಕರು ಇದ್ದರು.

# ಬೆಂಬಲ ಬೆಲೆ ಯೋಜನೆ: ಉದ್ದಿನಕಾಳು ಖರೀದಿಗೆ ಬೆಂಬಲ ಬೆಲೆ ನಿಗದಿ

**ಗದಗ:** 2025-26 ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಉದ್ದಿನಕಾಳು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಭವನದಲ್ಲಿ ಇತ್ತೀಚೆಗೆ 2025-26 ನೇ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಉದ್ದಿನಕಾಳು ಹುಟ್ಟುವಳಿ ಖರೀದಿಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಪ್ರತಿ ರೈತರಿಂದ ಪ್ರತಿ ಎಕರೆಗೆ 05 ಕ್ವಿಂಟಲ್‌ನಂತೆ ಗರಿಷ್ಠ 30 ಕ್ವಿಂಟಲ್ ಎಫ್.ಎ.ಕ್ಯೂ ಗುಣಮಟ್ಟದ ಉದ್ದಿನಕಾಳು ಖರೀದಿಸಲು ಹಾಗೂ ಉದ್ದಿನಕಾಳು ಖರೀದಿ ಕೇಂದ್ರಗಳಲ್ಲಿ ರೈತರ ಹೆಸರಿನಲ್ಲಿ ವರ್ತಕರು ತರುವ ಉದ್ದಿನಕಾಳು ಉತ್ಪನ್ನವನ್ನು ಖರೀದಿಸಿದಂತೆ ಹಾಗೂ ಖರೀದಿ ಸಂಸ್ಥೆಗಳು ಯಾವುದೇ ರೀತಿಯ ದುರುಪಯೋಗವಾಗದಂತೆ ಎಲ್ಲ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂದು ಸೂಚಿಸಿದರು. ಸರ್ಕಾರದ ಮಾನದಂಡಗಳನ್ವಯ ಎಫ್.ಎ.ಕ್ಯೂ ಗುಣಮಟ್ಟವನ್ನು ದೃಢೀಕರಿಸಲು ಕ್ರಮ ವಹಿಸಬೇಕು. ಉದ್ದಿನಕಾಳು ಎಫ್.ಎ.ಕ್ಯೂ ಪ್ರಕ್ರಿಯೆಯಲ್ಲಿ ಎಫ್.ಎ.ಕ್ಯೂ ಗುಣಮಟ್ಟ ಪರಿಶೀಲನೆಗಾಗಿ ಲಭ್ಯವಿರುವ ಅಧಿಕಾರಿ / ಸಿಬ್ಬಂದಿಗಳನ್ನು ಬಳಸಿಕೊಳ್ಳುವುದು. ತರಬೇತಿ ಅವಶ್ಯವಿದ್ದಲ್ಲಿ ಅಂತಹ ಸಿಬ್ಬಂದಿಗಳಿಗೆ ಎಫ್.ಎ.ಕ್ಯೂ ಗ್ರೇಡಿಂಗ್ ತರಬೇತಿ ನೀಡಲು ಖರೀದಿ ಸಂಸ್ಥೆಗಳು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರಾದ ಸುಧಾ ಬಂಡಿ ಅವರು ಮಾತನಾಡಿ ಎಫ್.ಎ.ಕ್ಯೂ ಗುಣಮಟ್ಟದ ಉದ್ದಿನಕಾಳು ಉತ್ಪನ್ನವನ್ನು ಪ್ರತಿ ಕ್ವಿಂಟಾಲ್‌ಗೆ ರೂ. 7800 ರಂತೆ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ರಾಜ್ಯದಲ್ಲಿ ನಾಫೆಡ್ ಹಾಗೂ ಎನ್‌ಸಿಸಿಎಫ್ (ಎನ್‌ಸಿಸಿಎಫ್ ) ಸಂಸ್ಥೆಯನ್ನು ಕೇಂದ್ರ ಸರ್ಕಾರದ ಖರೀದಿ ಸಂಸ್ಥೆಯನ್ನಾಗಿ ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ನಿಯಮಿತ ಬೆಂಗಳೂರು ಇವರನ್ನು ರಾಜ್ಯ ಮಟ್ಟದ ಖರೀದಿ ಏಜೆನ್ಸಿಯನ್ನಾಗಿ ನೇಮಿಸಿದೆ. ಆದೇಶ ಹೊರಡಿಸಿದ ದಿನಾಂಕದಿಂದ ರೈತರ ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರೆಗೆ ನಿಗದಿಪಡಿಸಲಾಗಿದೆ ಎಂದು ತಿಳಿಸಿದರು.

**ಉದ್ದಿನ ಕಾಳು ಖರೀದಿ ಕೇಂದ್ರಗಳು**

ಗದಗ ತಾಲೂಕಿನಲ್ಲಿ ಟಿಎಪಿಸಿಎಂಎಸ್ ಗದಗ, ಶಿರಹಟ್ಟಿ ತಾಲೂಕಿನಲ್ಲಿ ಟಿಎಪಿಸಿಎಂಎಸ್ ಶಿರಹಟ್ಟಿ, ಲಕ್ಷ್ಮೇಶ್ವರ, ತಾಲೂಕಿನಲ್ಲಿ ಟಿಎಪಿಸಿಎಂಎಸ್ ಲಕ್ಷ್ಮೇಶ್ವರ, ಮುಂಡರಗಿ ತಾಲೂಕಿನಲ್ಲಿ ಟಿಎಪಿಸಿಎಂಎಸ್ ಮುಂಡರಗಿ, ನರಗುಂದ ತಾಲೂಕಿನಲ್ಲಿ ಟಿಎಪಿಸಿಎಂಎಸ್ ನರಗುಂದ, ರೋಣ ತಾಲೂಕಿನಲ್ಲಿ ಟಿಎಪಿಸಿಎಂಎಸ್, ರೋಣ, ಗಜೇಂದ್ರಗಡ ತಾಲೂಕಿನಲ್ಲಿ ಟಿಎಪಿಸಿಎಂಎಸ್ ಗಜೇಂದ್ರಗಡ.

## ಎಲ್‌ಪಿಜಿ ಬಳಕೆ, ಉಳಿಕೆಯ ಮಾಹಿತಿ ಶಿಬಿರ



**ರಬಕವಿ-ಬನಹಟ್ಟಿ:** ರಬಕವಿಯ ಸಮೀಪ ಆಸಂಗಿಯ ಗ್ರಾಮ ಪಂಚಾಯತ್ ಕಾರ್ಯಾಲಯದ ಹತ್ತಿರ ಶ್ರೀ ಮಲ್ಲಿಕಾರ್ಜುನ ದೇವಸ್ಥಾನದಲ್ಲಿ ಗ್ರಾಮೀಣ ಮಹಿಳೆಯರಲ್ಲಿ ಗ್ಯಾಸ ಸುರಕ್ಷಿತ ಬಳಿಕೆ ಹಾಗೂ ಹೆಚ್ಚು ಉಳಿತಾಯದ ಮಾಹಿತಿ ಕಾರ್ಯಕ್ರಮ ಜರುಗಿತು.

ಈ ಶಿಬಿರದಲ್ಲಿ ಮಹಿಳೆಯರಿಗೆ ಕಟ್ಟಿಗೆ ಒಲೆಯಿಂದ ಅವರ ಆರೋಗ್ಯದಲ್ಲಿ ಆಗುವ ಸಮಸ್ಯೆ ಕುರಿತು ಆಶಾ ಕಾರ್ಯಕರ್ತೆ ಗಾಯತ್ರಿ ರಾವಳ ವಿವರಿಸಿದರು ಮತ್ತು ಅಂಗನವಾಡಿ ಕಾರ್ಯಕರ್ತೆ ಶೋಭಾ ಹಿರೇಮಠ ಗ್ಯಾಸ ಉಪಯೋಗಿಸಿ ಅಡುಗೆ ಮಾಡಿ ಅದರಿಂದ ನಮ್ಮ ಆರೋಗ್ಯ ಮತ್ತು ಸಮಯ ಹೇಗೆ ಉಳಿಸಿ ಕೊಳ್ಳುವ ಸಲಹೆ ನೀಡಿದರು

ರಬಕವಿ ಭಾರತ ಗ್ಯಾಸ ವ್ಯವಸ್ಥಾಪಕರಾದ ಸಂಗಮೇಶ ಗುಣಕಿ ಕೆಲವು ಸುರಕ್ಷಾ ಪ್ರಾತ್ಯಕ್ಷತ ಮಾಹಿತಿಯನ್ನು ನೀಡಿದರು ಸಭೆಯಲ್ಲಿ ಸುಮಾರು 120 ಜನ ಭಾಗವಹಿಸಿದ್ದರು.

### ವಿಶೇಷ ಮಧ್ಯಸ್ಥಿಕೆ ಅಭಿಯಾನ ರಾಷ್ಟ್ರಕ್ಕಾಗಿ ೯೦ ದಿನಗಳ ಕಾರ್ಯಚರಣೆ

# ಜಿಲ್ಲೆಯಲ್ಲಿ 123 ಪ್ರಕರಣಗಳು ಮಧ್ಯಸ್ಥಿಕೆಯಲ್ಲಿ ಇತ್ಯರ್ಥ



**ಗದಗ:** ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರವು, ಮಧ್ಯಸ್ಥಿಕೆ ಮತ್ತು ಸಂಧಾನ ಯೋಜನಾ ಸಮಿತಿ (ಎಂ.ಸಿ.ಪಿ.ಸಿ), ಗೌರವಾನ್ವಿತ ಭಾರತದ ಸರ್ವೋಚ್ಚ ನ್ಯಾಯಾಲಯದೊಂದಿಗೆ ವಿಶೇಷ ಮಧ್ಯಸ್ಥಿಕೆ ಅಭಿಯಾನ ರಾಷ್ಟ್ರಕ್ಕಾಗಿ 90 ದಿನಗಳ ಕಾರ್ಯಚರಣೆಯನ್ನು ಗೌರವಾನ್ವಿತ ಭಾರತದ ಸರ್ವೋಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳು ಮತ್ತು ಗೌರವಾನ್ವಿತ ನ್ಯಾಯಮೂರ್ತಿಗಳು ಭಾರತದ ಸರ್ವೋಚ್ಚ ನ್ಯಾಯಾಲಯ ಹಾಗೂ ಕಾರ್ಯನಿರ್ವಾಹಕ ಅಧ್ಯಕ್ಷರು, ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಅಧ್ಯಕ್ಷರು, ಎಂಸಿಪಿಸಿ ಹಾಗೂ ಗೌರವಾನ್ವಿತ ಮುಖ್ಯ ನ್ಯಾಯಮೂರ್ತಿಗಳು, ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ಪ್ರಧಾನ ಪೋಷಕರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕಾರ್ಯನಿರ್ವಾಹಕ ಅಧ್ಯಕ್ಷರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ರವರ ನಿರ್ದೇಶನದಂತೆ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರವು ಮಧ್ಯಸ್ಥಿಕೆ ವಿಶೇಷ ಅಭಿಯಾನವನ್ನು ಹಮ್ಮಿಕೊಂಡಿದ್ದು, ಮಧ್ಯಸ್ಥಿಕೆ-ರಾಷ್ಟ್ರಕ್ಕಾಗಿ 90 ದಿನಗಳ ಕಾರ್ಯಚರಣೆ ಮೂಲಕ ಉಚ್ಚ ನ್ಯಾಯಾಲಯಗಳು ಎಲ್ಲಾ ಜಿಲ್ಲಾ ಮತ್ತು ತಾಲೂಕು ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸಲು ಮಧ್ಯಸ್ಥಿಕೆ ಪ್ರಕ್ರಿಯೆ 1 ನೇ ಜುಲೈ 2025 ರಿಂದ 06ನೇ ಅಕ್ಟೋಬರ್ 2025 ರವರೆಗೆ ಹಮ್ಮಿಕೊಳ್ಳಲಾಗಿತ್ತು

ರಾಷ್ಟ್ರಕ್ಕಾಗಿ ವಿಶೇಷ ಅಭಿಯಾನದಡಿಯಲ್ಲಿ ಗದಗ ಜಿಲ್ಲಾ ಮತ್ತು ತಾಲೂಕು ನ್ಯಾಯಾಲಯಗಳ ಮಧ್ಯಸ್ಥಿಕೆ ಕೇಂದ್ರಕ್ಕೆ ಬಂದ ಒಟ್ಟು 1379 ಪ್ರಕರಣಗಳಲ್ಲಿ 123 ಪ್ರಕರಣ ಇತ್ಯರ್ಥಗೊಂಡಿವೆ, ಎಂದು ಪ್ರಭಾರ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರಾದ ಗಂಗಾಧರ ಸಿ.ಎಮ್ ರವರು ತಿಳಿಸಿದರು.

90 ದಿನಗಳ ಮಧ್ಯಸ್ಥಿಕೆಯ ರಾಷ್ಟ್ರಕ್ಕಾಗಿ ವಿಶೇಷ ಅಭಿಯಾನದಲ್ಲಿ 375 ವೈವಾಹಿಕ ವಿವಾದಗಳಲ್ಲಿ 288 ಪ್ರಕರಣಗಳು ಮಧ್ಯಸ್ಥಿಕೆ ಕೇಂದ್ರಕ್ಕೆ ಬಂದಿದ್ದು, ಇವುಗಳ ಪೈಕಿ 06 ಪ್ರಕರಣಗಳು ಇತ್ಯರ್ಥವಾಗಿವೆ, 271 ಕೌಟುಂಬಿಕ ದೌರ್ಜನ್ಯ ಪ್ರಕರಣಗಳಲ್ಲಿ 45 ಪ್ರಕರಣಗಳು ಮಧ್ಯಸ್ಥಿಕೆಗೆ ಬಂದಿದ್ದು 7 ಪ್ರಕರಣಗಳು ಇತ್ಯರ್ಥವಾಗಿವೆ, ಚೆಕ್‌ಬೌನ್ಸನ 2701 ಪ್ರಕರಣಗಳಲ್ಲಿ 309 ಮಧ್ಯಸ್ಥಿಕೆಗೆ ಬಂದಿದ್ದು ಅದರಲ್ಲಿ 41 ಪ್ರಕರಣಗಳು ಮಧ್ಯಸ್ಥಿಕೆಯ ಮೂಲಕ ಇತ್ಯರ್ಥವಾಗಿವೆ, 295 ಕ್ರಿಮಿನಲ್ ಕಾಂಪೌಂಡೆಬಲ್ ಪ್ರಕರಣಗಳಲ್ಲಿ 75 ಪ್ರಕರಣಗಳು ಮಧ್ಯಸ್ಥಿಕೆಗೆ ಬಂದಿದ್ದು ಅದರಲ್ಲಿ 12 ಪ್ರಕರಣಗಳು ಸಂಧಾನವಾಗಿವೆ, ಅದೇ ರೀತಿ ಸಾಲ ವಸೂಲಾತಿ 478 ಪ್ರಕರಣಗಳಲ್ಲಿ 17 ಪ್ರಕರಣಗಳು ಮಧ್ಯಸ್ಥಿಕೆಗೆ ಬಂದಿದ್ದು ಅದರಲ್ಲಿ 2 ಪ್ರಕರಣಗಳು ಇತ್ಯರ್ಥವಾಗಿವೆ, ಅದೇ ರೀತಿ 2603 ಪಾಲುವಾಟ್ನಿ ವ್ಯಾಜ್ಯಗಳಲ್ಲಿ 293 ಪ್ರಕರಣಗಳು ಮಧ್ಯಸ್ಥಿಕೆಗೆ ಬಂದಿದ್ದು ಅದರಲ್ಲಿ 33 ಪ್ರಕರಣಗಳು ಇತ್ಯರ್ಥವಾಗಿವೆ, ಅದೇ ರೀತಿ ಇತರೆ 4214 ಸಿವಿಲ್ ವ್ಯಾಜ್ಯಗಳಲ್ಲಿ 336 ಪ್ರಕರಣಗಳು ಮಧ್ಯಸ್ಥಿಕೆಗೆ ಬಂದಿದ್ದು ಅದರಲ್ಲಿ 22 ಪ್ರಕರಣಗಳು ಸಂಧಾನಗೊಂಡಿವೆ.

ಗದಗ ಜಿಲ್ಲಾದಂತ್ಯ ಈ ಅಭಿಯಾನದಲ್ಲಿ ಒಟ್ಟು 123 ಪ್ರಕರಣಗಳು ರಾಜೀ ಮೂಲಕ ಇತ್ಯರ್ಥಗೊಂಡಿರುತ್ತವೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮತ್ತು ಹಿರಿಯ ದಿವಾಣಿ ನ್ಯಾಯಾಧೀಶರು ಸಿ.ಎಸ್.ಶಿವನಗೌಡ್ರ ರವರು ತಿಳಿಸಿರುತ್ತಾರೆ.

## ಆವಿಷ್ಕಾರ ಉತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿದ ಸಚಿವೆ ಹೆಬ್ಬಾಳಕರ್



**ಬೆಳಗಾವಿ:** ಬೆಳಗಾವಿಯ ಮರಾಠಾ ಮಂದಿರದಲ್ಲಿ 3 ದಿನಗಳ ಕಾಲ ಹಮ್ಮಿಕೊಳ್ಳಲಾಗಿರುವ ಆವಿಷ್ಕಾರ ಉತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಎಲ್ಲ ಮಾರಾಟ ಮಳಿಗೆಗಳಿಗೆ ಭೇಟಿ ನೀಡಿ ಎಂಜಾಯ್ ಮಾಡಿದರು.

ಇದೇ ವೇಳೆ ಹಲವಾರು ಮ್ತಗಳನ್ನು ಖರೀದಿಸುವ ಮೂಲಕ ಉದ್ಯಮಗಳನ್ನು ಪ್ರೋತ್ಸಾಹಿಸಿದರು. ತಾವು ಬೆಳೆಯುವ ಜೊತೆಗೆ ಬೇರೆಯವರೂ ಬೆಳೆಯುವ ಅವಕಾಶ ಮಾಡಿಕೊಡುತ್ತಿರುವ ಸಂಘಟಕರ ಕೆಲಸ ಶ್ಲಾಘನೀಯ ಎಂದು ಸಚಿವರು ಹೇಳಿದರು.

ಕಳೆದ 28 ವರ್ಷದಿಂದ ನಿರಂತರವಾಗಿ ಆವಿಷ್ಕಾರ ಉತ್ಸವ ಮುನ್ನಡೆಯುತ್ತಿದೆ. ಇಂದು ಮಹಿಳೆಯರು ಎಲ್ಲ ಕ್ಷೇತ್ರದಲ್ಲಿ ಮುಂದೆ ಬಂದಿದ್ದಾರೆ. ನಮ್ಮ ಸಮಾಜ ಮಹಿಳೆ- ಪುರುಷ ಭೇದವಿಲ್ಲದೆ ಎಲ್ಲರೂ ಸಮಾನ ಎನ್ನುವ ಭಾವನೆ ಹೊಂದಿದೆ. ಮೊದಲು ಮಹಿಳೆಯರಿಗೆ ಮನೆಯಿಂದ ಹೊರಗೆ ಹೋಗಲು ಅವಕಾಶವಿರಲಿಲ್ಲ ಈಗ ಮಹಿಳೆಯರ ಭಾವನೆ, ಚಿಂತನೆ ಬದಲಾಗಿದೆ ಎಂದು ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು. ನಮ್ಮ ಇಲಾಖೆಯಿಂದ ಬಹಳಷ್ಟು ಯೋಜನೆಗಳಿವೆ. ಅವುಗಳನ್ನು ಸದುಪಯೋಗ ಪಡಿಸಿಕೊಳ್ಳಿ. ಎರಡೂವರೆ ವರ್ಷದಿಂದ ಯಾವುದೇ ಕಪ್ಪು ಚುಕ್ಕೆ ಇಲ್ಲದೆ ನಿಮ್ಮೆಲ್ಲರ ಪ್ರತಿನಿಧಿಯಾಗಿ ಕೆಲಸ ಮಾಡುತ್ತಿದ್ದೇನೆ ಎಂದು ಸಚಿವರು ಹೇಳಿದರು.

ಈ ವೇಳೆ ಯಶಶ್ರೀ ದೇಶಪಾಂಡೆ, ಸ್ವಾತಿ ಫಡಕೆ, ರೋಹಿಣಿ ಗೋಗಟೆ, ಆವಿಷ್ಕಾರ ಕಮಿಟಿಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue : 211, Postal Reg No. PMG/KA/NK/BM/135/25-27 / POST AT Vantamury Colony Post Office